ಸಂಪುಟ: 14 Volume ಸಂಚಿಕೆ: 75 Issue ಪುಟಗಳು 08 Pages ಗುರುವಾರ 25 ಜೂನ್ 2026 ₹4 PRGINO.120927 (RNINO:KARKAN/2011/48371) BDR/054/2026-2027 www.mallammanudi.in
mallammanudi@gmail.com 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ
Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ
ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಸತ್ಯವನ್ನು ಹೇಳುವವನು, ಸ್ವಾರ್ಥವನ್ನು ಗೆದ್ದವನು ನಿಜವಾದ ಸುಖಿ.
–ಬುದ್ಧ



ಎಐಸಿಸಿ ಕಾರ್ಯದರ್ಶಿ ಹಾಗೂ ಕರ್ನಾಟಕ ರಾಜ್ಯ ಕಾಂಗ್ರೆಸ್ ಉಸ್ತುವಾರಿ ಶ್ರೀ ಅಭಿಶೇಕ್ ದತ್ ಅವರು ಕೆಪಿಸಿಸಿ ಕಚೇರಿಯಲ್ಲಿ ನೂತನ ಕೆಪಿಸಿಸಿ ಅಧ್ಯಕ್ಷರಾದ ಶ್ರೀ ಬಿಕೆ ಹರಿಪ್ರಸಾದ್ ಅವರನ್ನು ಭೇಟಿ ಮಾಡಿ ಪಕ್ಷ ಸಂಘಟನೆ ಕುರಿತು ಸಮಾಲೋಚನೆ ನಡೆಸಿದರು.



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಚಿಟಗುಪ್ಪ ಘಟಕದ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಕೃಷ್ಣ ಪಂಚಾಳ್ ಹಾಗು ಪ್ರಧಾನ ಕಾರ್ಯದರ್ಶಿ ಸೈಯದ್ ಮುಸ್ತಫಾ ಖಾದ್ರಿ ಯವರನ್ನು ಶಾಸಕ ಡಾ ಸಿದ್ದು ಪಾಟೀಲ್ ಸನ್ಮಾನಿಸಿ ಗೌರವಿಸಿದರು.ಈ ಸಂದರ್ಭದಲ್ಲಿ ಡಾ ಭದ್ರೇಶ್ ಪಾಟೀಲ್,ಅನಿಲ್ ಪಸರ್ಗಿ,ನಾಗಭೂಷಣ್ ಸಂಗಮ್, ಮಲ್ಲಿಕಾರ್ಜುನ ಸಿಗಿ, ಗಿರೀಶ್ ತುಂಬಾ ಸೇರಿದಂತೆ ಪತ್ರಕರ್ತರಿದ್ದರು.

# ಒತ್ತಡದ ತಂತ್ರ ಹೈ ಮಂತ್ರ

## ಮಂತ್ರಿಗಿರಿಗಾಗಿ ಲಾಬಿಮಾಡಿದರೆ ಶಿಸ್ತುಕ್ರಮ ಎಚ್ಚರ: ದಿಲ್ಲಿಯ ಕಾಂಗ್ರೆಸ್ ಹೈಕಮಾಂಡ್ ಗುಡುಗು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯ ಕಾಂಗ್ರೆಸ್‌ನಲ್ಲಿ ಸಚಿವ ಸಂಪುಟ ವಿಸ್ತರಣೆ ಕುರಿತ ವಿಷಯ ಗಂಭೀರ ಸ್ವರೂಪ ಪಡೆಯತೊಡಗಿದೆ. ಮಂತ್ರಿಗಿರಿಗಾಗಿ ಯಾರಾದರೂ ಲಾಬಿ ಮಾಡಿದರೆ ಅಂಥವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಬೇಕು ಎಂದು ಕಾಂಗ್ರೆಸ್ ಹೈಕಮಾಂಡ್ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿರುವುದಾಗಿ ತಿಳಿದು ಬಂದಿದೆ.

**27 ರಂದು ಸಿಎಂ ದೆಹಲಿಗೆ:** ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು, ಜೂನ್ 27ರಂದು ದೆಹಲಿಗೆ ಭೇಟಿ ನೀಡಿ ಪಕ್ಷದ ಹೈಕಮಾಂಡ್ ನಾಯಕರೊಂದಿಗೆ ಚರ್ಚೆ ನಡೆಸುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ.ಪ್ರಸ್ತುತ ರಾಜ್ಯ ಸಚಿವ ಸಂಪುಟದಲ್ಲಿ 20 ಹುದ್ದೆಗಳು ಖಾಲಿ ಇದ್ದು, ಅವುಗಳ ಭರ್ತಿಗೆ ಸಂಬಂಧಿಸಿದಂತೆ ಅಂತಿಮ ಹಂತದ ಮಾತುಕತೆಗಳು ನಡೆಯುತ್ತಿವೆ ಎನ್ನಲಾಗಿದೆ.

**ಸಂಪುಟ ಬಗ್ಗೆ ಮಹತ್ವ ಚರ್ಚೆ:** ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ವಿದೇಶ ಪ್ರವಾಸದಿಂದ ಜೂನ್ 28ರಂದು ಭಾರತಕ್ಕೆ ಮರಳುವ ನಿರೀಕ್ಷೆಯಿದೆ. ಬಳಿಕ ಸಚಿವ ಸಂಪುಟ ವಿಸ್ತರಣೆ ಕುರಿತು ಮಹತ್ವದ ನಿರ್ಧಾರಗಳು ಕೈಗೊಳ್ಳುವ ಸಾಧ್ಯತೆ ಇದೆ ಎನ್ನ ಲಾಗಿದೆ. ಮಾಜಿ ಸಿಎಂ ಸಿದ್ದರಾಮಯ್ಯ ಅವರು ತಮ್ಮ ಬೆಂಬಲಿಗರೊಂದಿಗೆ ಐದು ದಿನಗಳ ವಿಶ್ರಾಂತಿಗಾಗಿ ಕೇರಳದ ಕೊಚ್ಚಿಗೆ ತೆರಳಿದ್ದಾರೆ.







### ಸಚಿವಪದವಿ ಆಕಾಂಕ್ಷಿಗಳು

ಸಚಿವ ಸ್ಥಾನಕ್ಕಾಗಿ ಕಾಂಗ್ರೆಸ್‌ನ ಬಿ.ಆರ್. ಪಾಟೀಲ್, ದಿನೇಶ್ ಗುಂಡೂರಾವ್ ಹಾಗೂ ಎಚ್.ಕೆ. ಪಾಟೀಲ್, ಜಮೀರ್, ಸಲೀಂ ಅಹ್ಮದ್, ಅಶೋಕ್ ಪಟ್ಟಣ, ವಿಜಯಾನಂದ ಕಾಶಪ್ಪನವರ್, ಶರತ್‌ಬಚ್ಚೇಗೌಡ, ಎ.ಆರ್. ಕೃಷ್ಣಮೂರ್ತಿ ಸೇರಿದಂತೆ ಹಲವರು ಡಿಕೆ ಶಿವಕುಮಾರ್ ಹಾಗೂ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ ತಮ್ಮ ಬೇಡಿಕೆಗಳನ್ನು ಮುಂದಿಟ್ಟಿದ್ದಾರೆ ಎಂದು ಮೂಲ ತಿಳಿಸಿದೆ.

### ರೆಸಾರ್ಟಿನಲ್ಲಿ ಸಿದ್ದು ಬಣ

ಕೇರಳದ ಕೊಚ್ಚಿಯಲ್ಲಿರುವ ಸಚಿವ ಕೆಜೆ ಜಾರ್ಜ್ ಒಡೆತನದ ರೆಸಾರ್ಟ್‌ನಲ್ಲಿ ವಿಶ್ರಾಂತಿಯಲ್ಲಿರುವ ಸಿದ್ದರಾಮಯ್ಯನವರ ಜೊತೆಗೆ, ಮಹದೇವಪ್ಪ, ವೆಂಕಟೇಶ್, ಪೊನ್ನಣ್ಣ, ಹಂಪನಗೌಡ ಬಾದರ್ಲಿ ಕೂಡಾ ಇದ್ದಾರೆ. ಇವರೆಲ್ಲರೂ, ಸಚಿವ ಸ್ಥಾನದ ಆಕಾಂಕ್ಷಿಗಳು ಎನ್ನುವುದು ಗಮನಿಸಬೇಕಾಗಿದೆ. ಕೂಲ್ ಮೂಡ್‌ನಲ್ಲಿರುವ ಸಿದ್ದರಾಮಯ್ಯ ಯಾವ ದಾಳ ಉರುಳಿಸುತ್ತಾರೊ ಎನ್ನುವ ಕುತೂಹಲ ಹೆಚ್ಚಾಗಿದೆ.







### 20 ಸಚಿವ ಸ್ಥಾನ ಖಾಲಿ

ರಾಜ್ಯ ಸಂಪುಟದಲ್ಲಿ ಇನ್ನೂ 20 ಸಚಿವ ಸ್ಥಾನ ಖಾಲಿಯಿದೆ. ಈ ಸ್ಥಾನಗಳಿಗೆ ಕನಿಷ್ಠ 30 ಶಾಸಕರು ಆಕಾಂಕ್ಷಿಗಳಾಗಿದ್ದಾರೆ. ಸಿದ್ದರಾಮಯ್ಯನವರ ಸರ್ಕಾರದಲ್ಲಿ ಕ್ಯಾಬಿನೆಟ್ ದರ್ಜೆಯ ಹಲವು ಸದಸ್ಯರಿಗೆ ಮೊದಲ ಪಟ್ಟಿಯಲ್ಲಿ ಸ್ಥಾನ ಸಿಗಲಿಲ್ಲ. ಅದರಲ್ಲಿ, ಡಾ.ಎಚ್.ಸಿ. ಮಹದೇವಪ್ಪ, ಜಮೀರ್ ಅಹ್ಮದ್ ಖಾನ್, ಕೆ.ವೆಂಕಟೇಶ್, ಸಂತೋಷ್ ಲಾಡ್ ಮುಂತಾದವರೂ ಇದ್ದಾರೆ. ಇವರೆಲ್ಲಾ, ಮತ್ತೆ ಸಚಿವ ಸ್ಥಾನದ ಆಕಾಂಕ್ಷಿಗಳಾಗಿದ್ದಾರೆ.

### ಡಿಕೆಶಿ ಆಪ್ತರಿಗೆ ಸಚಿವ ಸ್ಥಾನ

ಸಿಎಂ ಡಿಕೆಶಿವಕುಮಾರ್ ಬಣದಲ್ಲೇ ಗುರುತಿಸಿಕೊಂಡಿದ್ದ ಕೆಲವರಿಗಾದರೂ, ಸಚಿವ ಸ್ಥಾನ ನೀಡಬೇಕು ಎನ್ನುವುದು ಡಿಕೆಶಿ ಒತ್ತಾಸೆಯಾಗಿದೆ. ಶಾಸಕ ಇಕ್ಬಾಲ್ ಹುಸೇನ್, ಬಾಲಕೃಷ್ಣ, ಎಂಎಲ್‌ಎ ಎನ್.ಎ.ಹ್ಯಾರಿಸ್, ರಂಗನಾಥ್, ಚನ್ನಗಿರಿ ಶಾಸಕ ಬಸವರಾಜು ಶಿವಗಂಗಾ, ಮುಂತಾದ ನಾಯಕರ ಪೈಕಿ, ಹೈಕಮಾಂಡ್ ಕೃಪೆ ಯಾರಿಗೆ ಸಿಗಲಿದೆ ಎನ್ನುವುದು ಸದ್ಯದ ಪರಿಸ್ಥಿತಿಯಲ್ಲಿ ಚಿದಂಬರ ರಹಸ್ಯವಾಗಿದೆ.



## ಬೀದರ್ ಜಿಲ್ಲೆಯನ್ನು ಬರಗಾಲ ಜಿಲ್ಲೆ ಎಂದು ಘೋಷಿಸಿ

ಕೃಷಿ ಪ್ರಧಾನ ಜಿಲ್ಲೆಯಾದ ಬೀದರ್‌ನಲ್ಲಿ ಈ ಬಾರಿ ಮುಂಗಾರು ಮಳೆ ರೈತರ ನಿರೀಕ್ಷೆಯನ್ನು ಹುಸಿಗೊಳಿಸಿದೆ. ಸಮರ್ಪಕ ಮಳೆಯ ಕೊರತೆಯಿಂದ ಬಿತ್ತನೆ ಮಾಡಿದ ಬೆಳೆಗಳು ಒಣಗುವ ಪರಿಸ್ಥಿತಿ ಎದುರಾಗಿದೆ. ಈಗಾಗಲೇ ಸಾಕಷ್ಟು ಹಣ ಖರ್ಚು ಮಾಡಿ ಬೀಜ, ಗೊಬ್ಬರ ಮತ್ತು ಕೃಷಿ ಚಟುವಟಿಕೆ ಕೈಗೊಂಡ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಇಂತಹ ಸಂದರ್ಭದಲ್ಲಿ ಸರ್ಕಾರ ತಕ್ಷಣವೇ ಪರಿಸ್ಥಿತಿಯ ಗಂಭೀರತೆಯನ್ನು ಅರಿತು ಬೀದರ್ ಜಿಲ್ಲೆಯನ್ನು ಬರಗಾಲ ಪೀಡಿತ ಜಿಲ್ಲೆ ಎಂದು ಘೋಷಿಸಬೇಕಾಗಿದೆ.

## ಸಂಪಾದಕೀಯ

**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**



ಮಳೆ ಕೊರತೆಯಿಂದ ಕೃಷಿ ಮಾತ್ರವಲ್ಲದೆ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಹಾಗೂ ಗ್ರಾಮೀಣ ಜನಜೀವನದ ಮೇಲೂ ಪರಿಣಾಮ ಬೀರುತ್ತಿದೆ. ಬೆಳೆ ನಷ್ಟದಿಂದ ರೈತರ ಆರ್ಥಿಕ ಸ್ಥಿತಿ ಹದಗೆಡುವ ಸಾಧ್ಯತೆ ಹೆಚ್ಚಿದ್ದು, ಸಾಲದ ಹೊರೆ ಮತ್ತಷ್ಟು ಹೆಚ್ಚಾಗುವ ಆತಂಕ ಕಾಡುತ್ತಿದೆ.

ಸರ್ಕಾರ ವಿಳಂಬ ಮಾಡದೇ ತಜ್ಞರ ತಂಡದ ಮೂಲಕ ಸ್ಥಳ ಪರಿಶೀಲನೆ ನಡೆಸಿ ಬೆಳೆ ಹಾನಿಯನ್ನು ಸಮೀಕ್ಷೆ ಮಾಡಬೇಕು. ಬರಗಾಲ ಘೋಷಣೆಯೊಂದಿಗೆ ರೈತರಿಗೆ ಪರಿಹಾರ ಧನ, ಬೆಳೆ ಸಾಲ ಮರುಪಾವತಿಗೆ ಕಾಲಾವಕಾಶ, ಬಡ್ಡಿ ಮನ್ನಾ ಹಾಗೂ ಅಗತ್ಯ ನೆರವುಗಳನ್ನು ಒದಗಿಸಬೇಕು. ಜೊತೆಗೆ ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು.

ಅನ್ನದಾತನ ಸಂಕಷ್ಟದ ಸಮಯದಲ್ಲಿ ಸರ್ಕಾರ ಮತ್ತು ಆಡಳಿತ ಯಂತ್ರ ಅವನ ಬೆನ್ನಿಗೆ ನಿಲ್ಲಬೇಕು. ರೈತರ ಕಣ್ಣೀರನ್ನು ಒರೆಸುವುದು ಸರ್ಕಾರದ ಕರ್ತವ್ಯವಾಗಿದೆ. ಆದ್ದರಿಂದ ರಾಜ್ಯ ಸರ್ಕಾರ ಯಾವುದೇ ವಿಳಂಬ ಮಾಡದೇ ಬೀದರ್ ಜಿಲ್ಲೆಯನ್ನು ಬರಗಾಲ ಜಿಲ್ಲೆ ಎಂದು ಘೋಷಿಸಿ, ರೈತರ ಬದುಕು ಉಳಿಸಲು ತುರ್ತು ಕ್ರಮಗಳನ್ನು ಕೈಗೊಳ್ಳಬೇಕಾಗಿದೆ.

## ₹5 ಕೋಟಿ ವೆಚ್ಚದ ಕಾಮಗಾರಿಗೆ ಶಾಸಕ ಬೆಲ್ದಾಳೆ ಚಾಲನೆ



**ಬೀದರ್:** ದಕ್ಷಿಣ ವಿಧಾನಸಭಾ ಕ್ಷೇತ್ರದ ಗೋರನಳ್ಳಿ ಗ್ರಾಮದ ಹೊರವಲಯದಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಪೂರಕವಾಗುವ ಮತ್ತೊಂದು ಮಹತ್ವದ ಯೋಜನೆಗೆ ಚಾಲನೆ ದೊರೆತಿದೆ. ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ₹5.00 ಕೋಟಿ ಅಂದಾಜು ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ ಮೆಟ್ರಿಕ್ ನಂತರದ ಬಾಲಕರ (ಉನ್ನತೀಕರಣ) ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣ ಕಾಮಗಾರಿಗೆ ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಗುದ್ದಲಿ ಪೂಜೆ ನೆರವೇರಿಸಿ ಚಾಲನೆ ನೀಡಿದರು.

ಈ ವಿದ್ಯಾರ್ಥಿನಿಲಯ ನಿರ್ಮಾಣ ಯೋಜನೆಯು ಗ್ರಾಮೀಣ ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಪಡೆಯಲು ಅಗತ್ಯವಾದ ಮೂಲಸೌಕರ್ಯಗಳನ್ನು ಒದಗಿಸುವ ಮಹತ್ವದ ಹೆಜ್ಜೆಯಾಗಿದೆ. ವಿದ್ಯಾರ್ಥಿಗಳಿಗೆ ಗುಣಮಟ್ಟದ ವಸತಿ ವ್ಯವಸ್ಥೆ, ಅಧ್ಯಯನ ಕೊಠಡಿಗಳು, ಆಧುನಿಕ ಸೌಲಭ್ಯಗಳು ಹಾಗೂ ಸುರಕ್ಷಿತ ಶೈಕ್ಷಣಿಕ ವಾತಾವರಣವನ್ನು ಕಲ್ಪಿಸುವ ಉದ್ದೇಶದಿಂದ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು, ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡುವುದು ಸರ್ಕಾರದ ಪ್ರಮುಖ ಧ್ಯೇಯವಾಗಿದ್ದು, ಗ್ರಾಮೀಣ ಭಾಗದ ವಿದ್ಯಾರ್ಥಿಗಳೂ ನಗರ ಪ್ರದೇಶದ ವಿದ್ಯಾರ್ಥಿಗಳಷ್ಟೇ ಉತ್ತಮ ಸೌಲಭ್ಯಗಳನ್ನು ಪಡೆಯಬೇಕು ಎಂಬ ಉದ್ದೇಶದಿಂದ ಇಂತಹ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ ಎಂದು ಹೇಳಿದರು.

ವಿದ್ಯಾರ್ಥಿಗಳಿಗೆ ಉತ್ತಮ ವಸತಿ ಸೌಲಭ್ಯ ದೊರೆತಾಗ ಅವರ ಶೈಕ್ಷಣಿಕ ಸಾಧನೆ ಹೆಚ್ಚುವುದರ ಜೊತೆಗೆ ಆತ್ಮವಿಶ್ವಾಸವೂ ವೃದ್ಧಿಯಾಗುತ್ತದೆ. ಹೀಗಾಗಿ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಅಗತ್ಯವಿರುವ ಮೂಲಸೌಕರ್ಯಗಳನ್ನು ಒದಗಿಸಲು ಸರ್ಕಾರ ಬದ್ಧವಾಗಿದೆ ಎಂದು ಅವರು ತಿಳಿಸಿದರು. ಬೀದರ್ ದಕ್ಷಿಣ ಕ್ಷೇತ್ರದಲ್ಲಿ ಶಿಕ್ಷಣ, ಆರೋಗ್ಯ, ರಸ್ತೆ, ಕುಡಿಯುವ ನೀರು ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ನಿರಂತರವಾಗಿ ಕೈಗೆತ್ತಿಕೊಳ್ಳಲಾಗುತ್ತಿದ್ದು, ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ನಿಟ್ಟಿನಲ್ಲಿ ಶಿಕ್ಷಣ ಕ್ಷೇತ್ರಕ್ಕೆ ವಿಶೇಷ ಒತ್ತು ನೀಡಲಾಗುತ್ತಿದೆ. ಗೋರನಳ್ಳಿಯಲ್ಲಿ ನಿರ್ಮಾಣಗೊಳ್ಳಲಿರುವ ಈ ವಿದ್ಯಾರ್ಥಿನಿಲಯವು ನೂರಾರು ವಿದ್ಯಾರ್ಥಿಗಳ ಶೈಕ್ಷಣಿಕ ಜೀವನಕ್ಕೆ ಹೊಸ ದಿಕ್ಕು ನೀಡಲಿದ್ದು, ಉನ್ನತ ಶಿಕ್ಷಣದ ಕನಸುಗಳನ್ನು ನನಸಾಗಿಸಲು ಸಹಕಾರಿಯಾಗಲಿದೆ ಎಂದು ಶಾಸಕರು ಅಭಿಪ್ರಾಯಪಟ್ಟರು.

ಯೋಜನೆಯ ಕಾಮಗಾರಿಯನ್ನು ಗುಣಮಟ್ಟದಿಂದ ಹಾಗೂ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಶಾಸಕರು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯರಾದ ಬಾಬುರಾವ್ ಮಲ್ಕಾಪುರ, ಮುಖಂಡರಾದ ಸುರೇಶ್ ಮಾಶೆಟ್ಟಿ, ಚಂದ್ರಯ್ಯ ಸ್ವಾಮಿ, ವಿದ್ಯಾಸಾಗರ ಸ್ವಾಮಿ, ಮಲ್ಲಿಕಾರ್ಜುನ ಮೇತ್ರೆ, ಪ್ರಶಾಂತ ತೋರಣ, ಗಜಾನಂದ ತೋರಣ, ಶಿವಕುಮಾರ ಸುಲ್ತಾನಪುರ, ಸಾಯಿನಾಥ ಮೇತ್ರೆ, ಮಹೇಶ್ ತೋರಣ, ಸಂಗಮೇಶ್ ಗೋರನಳ್ಳಿ, ಸುಧಾಕರ, ನರೇಂದ್ರ ಹೊಸಮನಿ, ಗ್ರಾಮಸ್ಥರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಅನಿಲ್ ಕುಮಾರ್ ಜಾಧವ್‌ಗೆ ಎಂಎಲ್‌ಸಿ ಸ್ಥಾನಕ್ಕೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಹಾಗೂ ಸಾಮಾಜಿಕ ಹೋರಾಟಗಾರ ಅನಿಲ್ ಕುಮಾರ್ ಜಾಧವ್ ಅವರಿಗೆ ವಿಧಾನ ಪರಿಷತ್ (ಎಂಎಲ್‌ಸಿ) ಸದಸ್ಯ ಸ್ಥಾನಕ್ಕೆ ನಾಮನಿರ್ದೇಶನ ಮಾಡುವಂತೆ ಕರ್ನಾಟಕ ರಾಜ್ಯ ಕ್ರಿಶ್ಚಿಯನ್ ಹಕ್ಕುಗಳ ಸಮಿತಿ ವತಿಯಿಂದ ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ಕಾಂಗ್ರೆಸ್ ಹೈಕಮಾಂಡ್‌ಗೆ ಮನವಿ ಸಲ್ಲಿಸಲಾಯಿತು.

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರ ಮೂಲಕ ಕಾಂಗ್ರೆಸ್ ಹೈಕಮಾಂಡ್‌ಗೆ ಶಿಫಾರಸು ಮಾಡುವಂತೆ ಮನವಿ ಪತ್ರ ಸಲ್ಲಿಸಲಾಯಿತು.

ಅನಿಲ್ ಕುಮಾರ್ ಜಾಧವ್ ಅವರು ಕಳೆದ ಎರಡು ದಶಕಗಳಿಂದ ಕಾಂಗ್ರೆಸ್ ಪಕ್ಷದಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದ್ದು, ಲೋಕಸಭೆ, ವಿಧಾನಸಭೆ, ಜಿಲ್ಲಾ ಪಂಚಾಯತ್ ಹಾಗೂ ತಾಲೂಕು ಪಂಚಾಯತ್ ಚುನಾವಣೆಗಳಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವಿಗಾಗಿ ಶ್ರಮಿಸಿದ್ದಾರೆ. ಪಕ್ಷ ಸಂಘಟನೆ ಬಲಪಡಿಸುವುದು, ವಿವಿಧ ಜನಪರ ಹೋರಾಟಗಳಲ್ಲಿ ಭಾಗವಹಿಸುವುದು ಹಾಗೂ ಕಾಂಗ್ರೆಸ್ ಪಕ್ಷದ ತತ್ವ–ಸಿದ್ಧಾಂತಗಳನ್ನು ಜನರಿಗೆ ತಲುಪಿಸುವ ಕಾರ್ಯದಲ್ಲಿ ಅವರು ನಿರಂತರವಾಗಿ ತೊಡಗಿಸಿಕೊಂಡಿದ್ದಾರೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಇದಲ್ಲದೆ, ವೋಟ್ ಚೋರಿ ವಿರೋಧಿ ಅಭಿಯಾನದಲ್ಲಿ ಮಹತ್ವದ ಪಾತ್ರ ವಹಿಸಿರುವ ಅನಿಲ್ ಜಾಧವ್ ಅವರು, ಕ್ರೈಸ್ತ ನಿಗಮ ಮಂಡಳಿ ಸ್ಥಾಪನೆ ಹಾಗೂ ಕ್ರಿಶ್ಚಿಯನ್ ಸಮುದಾಯದ ಹಕ್ಕುಗಳ ರಕ್ಷಣೆಗಾಗಿ ಹಲವು ಹೋರಾಟಗಳನ್ನು ನಡೆಸಿದ್ದಾರೆ ಎಂದು ತಿಳಿಸಲಾಗಿದೆ.

ಹೈದರಾಬಾದ್ ಕರ್ನಾಟಕ ಭಾಗದಲ್ಲಿ ವಿಧಾನ ಪರಿಷತ್ತಿನ ಐದು ಸ್ಥಾನಗಳು ಖಾಲಿ ಇರುವ ಹಿನ್ನೆಲೆಯಲ್ಲಿ, ಅವುಗಳಲ್ಲಿ ಒಂದು ಸ್ಥಾನವನ್ನು ಕ್ರಿಶ್ಚಿಯನ್ ಕೋಟಾದಡಿ ಅನಿಲ್ ಕುಮಾರ್ ಜಾಧವ್ ಅವರಿಗೆ ನೀಡಬೇಕು ಎಂದು ಕರ್ನಾಟಕ ರಾಜ್ಯ ಕ್ರಿಶ್ಚಿಯನ್ ಹಕ್ಕುಗಳ ಸಮಿತಿ ಆಗ್ರಹಿಸಿದೆ.

ಕಳೆದ 60 ವರ್ಷಗಳಿಂದ ಈ ಭಾಗದ ಕ್ರಿಶ್ಚಿಯನ್ ಸಮುದಾಯ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ನೀಡುತ್ತಾ ಬಂದಿದ್ದರೂ, ಸಂಸದ, ಶಾಸಕ, ವಿಧಾನ ಪರಿಷತ್ ಸದಸ್ಯ ಅಥವಾ ಜಿಲ್ಲಾ ಪಂಚಾಯತ್ ಸದಸ್ಯ ಸ್ಥಾನಗಳಲ್ಲಿ ಸಮುದಾಯಕ್ಕೆ ಸಮರ್ಪಕ ಪ್ರಾತಿನಿಧ್ಯ ದೊರೆತಿಲ್ಲ. ಹೀಗಾಗಿ ಈ ಬಾರಿ ಐದು ಎಂಎಲ್‌ಸಿ ನಾಮನಿರ್ದೇಶಿತ ಸ್ಥಾನಗಳಲ್ಲಿ ಒಂದನ್ನು ಕ್ರಿಶ್ಚಿಯನ್ ಸಮುದಾಯಕ್ಕೆ ಮೀಸಲಿಟ್ಟು, ಅನಿಲ್ ಕುಮಾರ್ ಜಾಧವ್ ಅವರನ್ನು ನಾಮನಿರ್ದೇಶನ ಮಾಡಬೇಕು ಎಂದು ಸಮಿತಿ ಒತ್ತಾಯಿಸಿದೆ.

ಈ ಸಂದರ್ಭದಲ್ಲಿ ಕರ್ನಾಟಕ ಕ್ರಿಶ್ಚಿಯನ್ ಯುವ ರಕ್ಷಣಾ ಸಮಿತಿಯ ಜಿಲ್ಲಾಧ್ಯಕ್ಷ ಇಮ್ಯಾನ್ವೆಲ್ ಮಂದಕನಳ್ಳಿ, ಕರ್ನಾಟಕ ಕ್ರಿಶ್ಚಿಯನ್ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷ ರಾಜಕುಮಾರ್ ಕೊಳಾರ್, ಕ್ರಿಶ್ಚಿಯನ್ ಮುಖಂಡರಾದ ಅರುಣ್ ಅಣದೂರು, ಜೇಮ್ಸ್ ಕೋಳಾರ ಹಾಗೂ ಉಮೇಶ್ ಗಾಯಕ್ವಾಡ್ ಸೇರಿದಂತೆ ಹಲವರು ಉಪಸ್ಥಿತರಿದ್ದು, ಕಾಂಗ್ರೆಸ್ ಹೈಕಮಾಂಡ್‌ಗೆ ಶಿಫಾರಸು ಮಾಡುವಂತೆ ಮನವಿ ಸಲ್ಲಿಸಿದರು.

## ಬಸವಕಲ್ಯಾಣ ಪ್ರವೇಶ ತಡೆಯಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಜೂನ್ 28 ರಂದು ಬಸವಕಲ್ಯಾಣದಲ್ಲಿ ಆಯೋಜಿಸಲು ಉದ್ದೇಶಿಸಿರುವ "ಬಸವಾದಿ ಶಿವಶರಣರ ಬೃಹತ್ ಹಿಂದೂ ಸಮಾವೇಶ"ದಲ್ಲಿ ಭಾಗವಹಿಸಲು ಆಗಮಿಸುತ್ತಿರುವ ಕೊಲ್ಲಾಪುರದ ಕಾಡಸಿದ್ದೇಶ್ವರ ಮಠದ ಕನೇರಿ ಸ್ವಾಮೀಜಿಯವರ ಬಸವಕಲ್ಯಾಣ ಪ್ರವೇಶವನ್ನು ತಡೆಯಬೇಕು ಎಂದು ಡಾ. ಬಿ.ಆರ್. ಅಂಬೇಡ್ಕರ್ ಯೂಥ್ ಬ್ರಿಗೇಡ್ ಜಿಲ್ಲಾ ಅಧ್ಯಕ್ಷ ಉದಯ ನಾಯಕ್ ಆಗ್ರಹಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಬಸವ ಭಕ್ತರನ್ನು "ಬಸವ ತಾಲಿಬಾನಿ" ಎಂದು ಉಲ್ಲೇಖಿಸಿರುವುದು ಹಾಗೂ ಬಸವ ತತ್ವ ಮತ್ತು ಸಂಸ್ಕೃತಿಯ ಪ್ರಚಾರದಲ್ಲಿ ತೊಡಗಿರುವ ಪೂಜ್ಯರನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿರುವುದು ಖಂಡನೀಯ ಎಂದು ತಿಳಿಸಿದ್ದಾರೆ.

ಕನೇರಿ ಸ್ವಾಮೀಜಿಯವರ ಕೆಲವು ಹೇಳಿಕೆಗಳು ಬುದ್ಧ, ಬಸವ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಅನುಯಾಯಿಗಳ ಧಾರ್ಮಿಕ ಮತ್ತು ಸಾಮಾಜಿಕ ಭಾವನೆಗಳಿಗೆ ಧಕ್ಕೆ ಉಂಟುಮಾಡಿವೆ ಎಂದು ಆರೋಪಿಸಿದ ಅವರು, ಇಂತಹ ಪರಿಸ್ಥಿತಿಯಲ್ಲಿ ಕನೇರಿ ಶ್ರೀಗಳಿಗೆ ಬಸವಕಲ್ಯಾಣ ಪ್ರವೇಶಕ್ಕೆ ಅವಕಾಶ ನೀಡಬಾರದು ಎಂದು ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆಯನ್ನು ಒತ್ತಾಯಿಸಿದ್ದಾರೆ.

ಬಸವಕಲ್ಯಾಣವು ಜಗಜ್ಯೋತಿ ಬಸವಣ್ಣನವರ ಕರ್ಮಭೂಮಿಯಾಗಿದ್ದು, ಇಲ್ಲಿ ಶಾಂತಿ, ಸೌಹಾರ್ದತೆ ಮತ್ತು ಸಾಮಾಜಿಕ ಸಾಮರಸ್ಯ ಕಾಪಾಡುವ ನಿಟ್ಟಿನಲ್ಲಿ ಜಿಲ್ಲಾಡಳಿತವು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಉದಯ ನಾಯಕ್ ಮನವಿ ಮಾಡಿದ್ದಾರೆ.

ಸಾರ್ವಜನಿಕರ ಭಾವನೆಗಳಿಗೆ ಧಕ್ಕೆಯಾಗುವಂತಹ ಬೆಳವಣಿಗೆಗಳು ನಡೆಯದಂತೆ ಮುನ್ನೆಚ್ಚರಿಕೆ ವಹಿಸಿ, ಕಾನೂನು ಸುವ್ಯವಸ್ಥೆ ಕಾಪಾಡಲು ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ಜರುಗಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗಾಂಜಾ ಮಾರಾಟ: ಆರೋಪಿಗಳ ಬಂಧನ



• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ

ಅಕ್ರಮವಾಗಿ ಗಾಂಜಾವನ್ನು ಮಾರಾಟ ಮಾಡುತ್ತಿದ್ದ ಆರೋಪದ ಮೇಲೆ ರಾಜಸ್ಥಾನ ಮೂಲದ ಬುದ್ದಾರಾಂ(30) ಅರವಿಂದ್ ಕುಮಾರ್ (19) ಹಾಗೂ ಚಿಕ್ಕಬಳ್ಳಾಪುರ ನಿವಾಸಿ ಸೈಯದ್ ಅಹಮದ್ (26) ಅವರನ್ನು ಚಿಕ್ಕಬಳ್ಳಾಪುರ ನಗರ ಪೊಲೀಸರು ಬಂಧಿಸಿದ್ದು, ಅವರಿಂದ ಸುಮಾರು 10.790 ಕೆ.ಜಿ ಗಾಂಜಾ ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

ಜೂನ್ 23ರಂದು ಸಂಜೆ ವೇಳೆ ನಗರ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ರಂಜನ್ ಕುಮಾರ್ ಹಾಗೂ ಸಿಬ್ಬಂದಿ ಗಸ್ತಿನಲ್ಲಿದ್ದಾಗ ಅನುಮಾನಾಸ್ಪದವಾಗಿ ವರ್ತಿಸುತ್ತಿದ್ದ ವ್ಯಕ್ತಿಗಳನ್ನು ತಡೆದು ಪರಿಶೀಲನೆ ನಡೆಸಿದ್ದು ಈ ವೇಳೆ ಆರೋಪಿಗಳು ಗಾಂಜಾವನ್ನು ಮಾರಾಟ ಮಾಡಲು ಸಂಗ್ರಹಿಸಿಟ್ಟಿರುವುದು ಬೆಳಕಿಗೆ ಬಂದಿದೆ. ಬಂಧಿತರಿಂದ ಗಾಂಜಾವನ್ನು ವಶಪಡಿಸಿಕೊಂಡು, ಚಿಕ್ಕಬಳ್ಳಾಪುರ ನಗರ ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ 85/2026 ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ಮುಂದುವರೆದಿದೆ, ಅಕ್ರಮವಾಗಿ ಗಾಂಜಾ ಸಾಗಾಟ ಮತ್ತು ಮಾರಾಟ ನಡೆಸುತ್ತಿದ್ದ ಬಗ್ಗೆ ಪೊಲೀಸರು ಮಾಹಿತಿ ಕಲೆಹಾಕುತ್ತಿದ್ದಾರೆ. ಕಾರ್ಯಾಚರಣೆಯಲ್ಲಿ ಭಾಗವಹಿಸಿದ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಯ ಕಾರ್ಯವನ್ನು ಹಿರಿಯ ಅಧಿಕಾರಿಗಳು ಪ್ರಶಂಸಿಸಿದ್ದಾರೆ.

## ಕಳಪೆ ಕಾಮಗಾರಿ: ಗುತ್ತಿಗೆದಾರರ ವಿರುದ್ಧ ಆರೋಪ ಕ್ರಮಕ್ಕೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು



ರಾಯಚೂರು ಜಿಲ್ಲೆಯ ಸಿಂಧನೂರು ತಾಲೂಕಿನಲ್ಲಿ ನಡೆಯುತ್ತಿರುವ ರಸ್ತೆ ಅಭಿವೃದ್ಧಿ ಕಾಮಗಾರಿ ತೀರಾ ಕಳಪೆಯಾಗಿದ್ದು, ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಗುತ್ತಿಗೆದಾರರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕೆಂದು ಕರ್ನಾಟಕ ರೈತ ಸಂಘ (ಕೆ.ಆರ್.ಎಸ್) ತಾಲೂಕು ಸಮಿತಿ ಒತ್ತಾಯಿಸಿದೆ.

ಈ ಕುರಿತು ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಿಗೆ ಪತ್ರ ಬರೆದಿರುವ ಸಂಘದ ಪದಾಧಿಕಾರಿಗಳು, ರಾಯಚೂರಿನ ಕಲ್ಯಾಣ ಜಂಕ್ಷನ್‌ನಿಂದ ಸಿಂಧನೂರು–ಬಳ್ಳಾರಿ–ಅಂಗನೂರು ಜಂಕ್ಷನ್ ವರೆಗೆ ಸುಮಾರು 78.45 ಕಿ.ಮೀ.ವರೆಗೆ ನಡೆಯುತ್ತಿರುವ ಡಾಂಬರೀಕರಣ ಕಾಮಗಾರಿಯಲ್ಲಿ ವ್ಯಾಪಕ ಅವ್ಯವಸ್ಥೆ ನಡೆದಿದೆ.

ಹಳೆಯ ಡಾಂಬರೀಕರಣದ ಅವಶೇಷಗಳನ್ನೇ ಮರುಬಳಕೆ ಮಾಡಿ ರಸ್ತೆ ನಿರ್ಮಿಸಲಾಗುತ್ತಿದೆ.

ಅಂದಾಜು ಪಟ್ಟಿಯ ಪ್ರಕಾರ ಕೆಲಸ ನಡೆಯುತ್ತಿಲ್ಲ. ಸಿಮೆಂಟ್ ಕಾಂಕ್ರೀಟ್ ಚರಂಡಿ ನಿರ್ಮಾಣದಲ್ಲಿ ಕನಿಷ್ಠ ಗುಣಮಟ್ಟವನ್ನೂ ಕಾಯ್ದುಕೊಳ್ಳುತ್ತಿಲ್ಲ ಮತ್ತು ಕ್ಯೂರಿಂಗ್ (ನೀರುಣಿಸುವುದು) ಮಾಡುತ್ತಿಲ್ಲ. ಸ್ಥಳೀಯ ಸಹಾಯಕ ಎಂಜಿನಿಯರ್‌ಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿಲ್ಲ. ರೈತ ಸಂಘದವರು ಕರೆದರೂ ಅಧಿಕಾರಿಗಳು ಸ್ಪಂದಿಸುತ್ತಿಲ್ಲ. ಸರ್ಕಾರದ ಹಣವನ್ನು ಲೂಟಿ ಮಾಡುವ ಉದ್ದೇಶದಿಂದಲೇ ಗುತ್ತಿಗೆದಾರರು ಕಳಪೆ ಮಟ್ಟದ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಕಾಮಗಾರಿ ನಿರ್ವಹಿಸುತ್ತಿರುವ ಗುತ್ತಿಗೆದಾರರ ಪರವಾನಗಿಯನ್ನು ರದ್ದುಗೊಳಿಸಿ, ಅವರನ್ನು ಕಪ್ಪು ಪಟ್ಟಿಗೆ ಸೇರಿಸಬೇಕು. ಈ ಕಾಮಗಾರಿಯನ್ನು ತಟಸ್ಥ ಮೂರನೇ ವ್ಯಕ್ತಿಯಿಂದ ಪರಿಶೀಲನೆಗೆ ಒಳಪಡಿಸಬೇಕು.

ಕರ್ತವ್ಯ ಲೋಪ ಎಸಗಿರುವ ಕಾರ್ಯಪಾಲಕ ಎಂಜಿನಿಯರ್ ಮುರಳೀಧರ್ ಮತ್ತು ಸಹಾಯಕ ಎಂಜಿನಿಯರ್ ಆನಂದ್ ಅವರನ್ನು ತಕ್ಷಣವೇ ಅಮಾನತುಗೊಳಿಸಬೇಕು.

ಜೊತೆಗೆ ರಸ್ತೆ ಪರಿಶೀಲನೆಗೆ ಬರುವಾಗ ಕೆ.ಆರ್.ಎಸ್ ಸಂಘದ ಪದಾಧಿಕಾರಿಗಳನ್ನು ಜೊತೆಗೆ ಕರೆದೊಯ್ಯಬೇಕು ಎಂಬ ಪ್ರಮುಖ ಬೇಡಿಕೆಗಳನ್ನು ಪತ್ರಿಕೆಗೆ ತಿಳಿಸಿದರು.

ಒಂದು ವೇಳೆ ಕೂಡಲೇ ಕ್ರಮ ಕೈಗೊಳ್ಳದಿದ್ದರೆ, ಇಲಾಖೆಯ ವಿರುದ್ಧ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಸಂಘದ ಜಿಲ್ಲಾಧ್ಯಕ್ಷ ಬಿ.ಎನ್. ಯರದಿಹಾಳ ಮತ್ತು ತಾಲೂಕು ಅಧ್ಯಕ್ಷ ರಮೇಶ ಪಾಟೀಲ್ ಬೇರ್ಗಿ ಎಚ್ಚರಿಕೆ ನೀಡಿದ್ದಾರೆ.

# ರೂ 20.50 ಲಕ್ಷ ಮೌಲ್ಯದ 41 ಮೋಟಾರ್ ಸೈಕಲ್‌ಗಳ ಜಪ್ತಿ





• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

02.06.2026 ರಂದು ಸಿರುಗುಪ್ಪ ಪಟ್ಟಣದ ನಿಟ್ಟೂರು ನರಸಿಂಹ ಮೂರ್ತಿ ಬಯಲು ಜಾಗದಿಂದ ಮುಕ್ಕಣ್ಣ ಎಂಬುವವರ ಸಿಲ್ವರ್ ಬಣ್ಣದ ಹಿರೋ ಪ್ಯಾಷನ್ ಪ್ರೋ ಮೋಟಾರ್ ಸೈಕಲ್ ನಂ KA34ED7124 ಕಳ್ಳತನವಾಗಿರುವ ಕುರಿತು ಸಿರುಗುಪ್ಪ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ 145/2026 ಕಲಂ 303(2) ಬಿ.ಎನ್.ಎಸ್–2023 ರೀತ್ಯಾ ಪ್ರಕರಣ ದಾಖಲಾಗಿತ್ತು. ಸದರಿ ಮೇಲ್ಕಂಡ ಪ್ರಕರಣದ ತನಿಖೆ ಕೈಗೊಂಡಾಗ ಸಿದ್ದಾರೆಡ್ಡಿ @ ಸ್ಟಂಡರ್ ಸಿದ್ದಾರೆಡ್ಡಿ. 56 ವರ್ಷ, ಆಟೋ ಚಾಲಕ, ರೆಡ್ಡಿ ಜನಾಂಗ, ವಾಸ 1ನೇ ಕ್ರಾಸ್, ಅಶೋಕ ನಗರ, ಆಹಂಬಾವಿ ಬಳ್ಳಾರಿ ಎಂಬ ಆರೋಪಿಯು KA34ED7124 ಮೋಟಾರ್ ಸೈಕಲ್ ಸೇರಿದಂತೆ ಇನ್ನಿತರ ಹಲವು ಮೋಟಾರ್ ಸೈಕಲ್ ಗಳನ್ನು ಕಳ್ಳತನ ಮಾಡಿರುವುದು ತಿಳಿಯಿತು.

ತನಿಖೆಯನ್ನು ಮುಂದುವರೆಸಿದಾಗ ಆರೋಪಿಯು ಸಿರುಗುಪ್ಪ, ಬಳ್ಳಾರಿ ನಗರ. ಹೊಸಪೇಟೆ, ಮೊಳಕಾಲ್ಮೂರು, ಚಳ್ಳಕೆರೆ, ಹಾಗೂ ಚಿತ್ರದುರ್ಗ ನಗರಗಳಿಂದ ಸುಮಾರು ರೂ.20.50 ಲಕ್ಷ ಮೌಲ್ಯದ ಒಟ್ಟು 41 ಮೋಟಾರ್ ಸೈಕಲ್‌ಗಳಗಳನ್ನು ಕಳ್ಳತನ ಮಾಡಿರುತ್ತಾನೆ. ಕಳ್ಳತನ ಮಾಡಲಾಗಿದ್ದ 41 ಮೋಟಾರ್ ಸೈಕಲ್‌ಗಳಗಳನ್ನು ಜಪ್ತುಪಡಿಸಿಕೊಳ್ಳಲಾಗಿದೆ.

ಆರೋಪಿ ಸಿದ್ದಾರೆಡ್ಡಿಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ನವೀನ್ ಕುಮಾರ್ ಹೆಚ್ಚುವರಿ ಪೊಲೀಸ್ ಅಧೀಕ್ಷಕರು, ಮಾಲತೇಶ ಕೊನಬೇವು. ಡಿ.ಎಸ್.ಪಿ ಸಿರುಗುಪ್ಪ ಉಪ–ವಿಭಾಗ, ವೈ.ಎಸ್.ಹನುಮಂತಪ್ಪ, ಸಿಪಿಐ ಸಿರುಗುಪ್ಪ ವೃತ್ತ, ಪರುಶುರಾಮ್ ಪಿಎಸ್‌ಐ(ಕಾಸು) ಸಿರುಗುಪ್ಪ ಪೊಲೀಸ್ ಠಾಣೆ, ಮಲ್ಲಯ್ಯ ಪಿ.ಎಸ್.ಐ(ತನಿಖೆ) ಪ್ರಕಾಶ್ ಎ.ಎಸ್.ಐ. ಶ್ರೀನಿವಾಸ, ಎ.ಬಸವರಾಜ, ಮುನಿಸ್ವಾಮಿ, ವಿಷ್ಣುಮೋಹನ್ ಬಾಲಚಂದ್ರ ರಾಥೋಡ್, ವಿರುಪಾಕ್ಷಗೌಡ ಮಾರುತಿ ಸತೀಶ್ ಸಿರುಗುಪ್ಪ ಪೊಲೀಸ್ ಠಾಣೆ, ಗಂಗಾಧರ ಬಳ್ಳಾರಿ ಗ್ರಾಮೀಣ ಠಾಣೆ, ಕನಕರಾಯ ಪಿಡಿ ಹಳ್ಳಿ ಪೊಲೀಸ್ ಠಾಣೆ ರವರುಗಳ ವಿಶೇಷ ತಂಡವು ತಾಂತ್ರಿಕ ಸಹಾಯದಿಂದ ತನಿಖೆ

ಕೈಗೊಂಡು, ಯಶಸ್ವಿ ಕಾರ್ಯಚರಣೆಯ ಮೂಲಕ 41 ಮೋಟಾರ್ ಸೈಕಲ್ ಗಳನ್ನು ಪತ್ತೆ ಮಾಡಿರುತ್ತಾರೆ. ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂದಿಯವರ ಕಾರ್ಯ ಶ್ಲಾಘನೀಯ.

41 ಮೋಟಾರ್ ಸೈಕಲ್‌ಗಳಲ್ಲಿ ಬಳ್ಳಾರಿ ಜಿಲ್ಲೆ–16, ಚಿತ್ರದುರ್ಗ ಜಿಲ್ಲೆ–21 ಹಾಗೂ ವಿಜಯನಗರ ಜಿಲ್ಲೆ 04 ಒಳಗೊಂಡಿವೆ.

ಆರೋಪಿಯು ಜನನಿಬಿಡ ಸ್ಥಳಗಳಲ್ಲಿ ಹಗಲು ಹೊತ್ತಿನಲ್ಲಿ ಪಾರ್ಕಿಂಗ್ ಮಾಡಿದ ವಿಶೇಷವಾಗಿ ಹಿರೋ ಹೊಂಡಾ ಸ್ಟಂಡರ್ ಮೋಟಾರ್ ಸೈಕಲ್‌ಗಳನ್ನು ಗುರುತಿಸಿ, ತನ್ನ ಬಳಿ ಇರುವ ನಕಲಿ ಕೀಗಳನ್ನು ಬಳಸಿ ಮೋಟಾರ್ ಸೈಕಲ್‌ಗಳನ್ನು ಕಳ್ಳತನ ಮಾಡಿ. ನಂಬರ್ ಪ್ಲೇಟ್‌ಗಳನ್ನು ತೆಗೆದುಹಾಕಿ, ರಸ್ತೆಗಳಲ್ಲಿ ಸಂಚರಿಸುವ ಸಾರ್ವಜನಿಕರ ಮೋಟಾರ್ ಸೈಕಲ್ ಗಳ ನಂಬರ್ ಪ್ಲೇಟ್‌ಗಳ ಪೋಟೋಗಳನ್ನು ತೆಗೆದುಕೊಂಡು ಕರ್ನಾಟಕ ಒನ್ ಸೆಂಟರ್‌ಗೆ ಭೇಟಿ ನೀಡಿ. ತನ್ನ ಮೋಟಾರ್ ಸೈಕಲ್ ಆರ್‌ಸಿ ಕಳೆದು ಹೋಗಿದ್ದು, ಪೋಟೋದಲ್ಲಿರುವ ನಂಬರ್ ಪ್ಲೇಟ್ ತೋರಿಸಿ ನಕಲಿ ಆರ್‌ಸಿಯನ್ನು ಡೌನ್‌ಲೋಡ್ ಮಾಡಿಸಿಕೊಂಡು, ನಂಬರ್ ಪ್ಲೇಟ್ ಮಾಡುವವರಿಂದ ನಂಬರ್ ಪ್ಲೇಟ್ ಮಾಡಿಸಿಕೊಂಡು, ಕಳ್ಳತನ ಮಾಡಿದ ಮೋಟಾರ್ ಸೈಕಲ್‌ಗೆ ಫಿಕ್ಸ್ ಮಾಡಿ. ತಯಾರಿಸುವರಿಂದ ನಕಲಿ ಕೀಗಳನ್ನು ಮಾಡಿಸಿಕೊಂಡು, ಅಚಿತಿಮವಾಗಿ ಕದ್ದಿದ್ದ ಮೋಟಾರ್ ಸೈಕಲ್‌ಗಳನ್ನು ಸೆಕೆಂಡ್ ಹ್ಯಾಂಡ್ ಮೋಟಾರ್ ಸೈಕಲ್ ಎಂದು ಸಾರ್ವಜನಿಕರಿಗೆ ನಂಬಿಸಿ ಮಾರಾಟ ಮಾಡಿರುವುದು ತನಿಖೆಯಲ್ಲಿ ಕಂಡುಬಂದಿರುತ್ತದೆ.

# ಹಾರಕೂಡ ಶ್ರೀಗಳಿಗೆ 1001ನೇ ತುಲಾಭಾರ ಮಠದ ಸದ್ವಿಕಾಸಕ್ಕೆ ಭಕ್ತರೇ ಬುನಾದಿ: ಹಾರಕೂಡ ಶ್ರೀ



• ಮಲ್ಲಮ್ಮ ನುಡಿ ವಾರ್ತೆಬಸವಕಲ್ಯಾಣ

ಹಾರಕೂಡದ ಲಿಂಗೈಕ್ಯ ಚೆನ್ನಬಸವ ಶಿವಯೋಗಿಗಳ ಮಠದ ಪರಂಪರೆ ಹಾಗೂ ನಮ್ಮ ಮೇಲೆ ಲಕ್ಷಾಂತರ ಭಕ್ತರು ಇಟ್ಟಿರುವ ಭಕ್ತಿ ಶ್ರದ್ಧೆಯಿಂದಾಗಿ ಹಾರಕೂಡ ಶ್ರೀಮಠ ಸದ್ವಿಕಾಸ ಹೊಂದಿ ಉತ್ತುಂಗ ಶ್ರೇಣಿಯ ದಾಸೋಹ ಹಾಗೂ ಆಧ್ಯಾತ್ಮಿಕ ತಾಣವಾಗಿ ಕಾಣಲು ಸಾಧ್ಯವಾಗಿದೆ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಭಕ್ತರಿಂದ ಆಯೋಜಿಸಿದ ಗುರು ವಂದನೆ ಸಮಾರಂಭದಲ್ಲಿ, ಇಲ್ಲಿಯವರೆಗೆ ಒಂದು ಸಾವಿರ ಒಂದನೇ ತುಲಾಭಾರ ಸೇವೆ ಸ್ವೀಕರಿಸಿದ ಐತಿಹಾಸಿಕ ಅಮೃತಗಳಿಗೆಯಲ್ಲಿ ದಿವ್ಯ ವಾಣಿ ಕರುಣಿಸಿದ ಶ್ರೀಗಳು, ಸಾವಿರ ತುಲಾಭಾರ ಸೇವೆ ಸಮರ್ಪಿಸಿರುವುದು, ಹಾರಕೂಡ ಮಠದ ಭಕ್ತರ ಅಚಲವಾದ ಗುರುಭಕ್ತಿಗೆ ಐತಿಹಾಸಿಕ ನಿದರ್ಶನವೆಂದು ಹೇಳಲು ನಮಗೆ ಖುಷಿ ಎನಿಸುತ್ತಿದೆ. ತುಲಾಭಾರ ಸೇವೆಯಿಂದ ಅರ್ಪಿಸಿದ ದೇಣಿಗೆಯ ಹಣವನ್ನು ಬಡ, ದೀನ ದಲಿತ ಮಕ್ಕಳ ಶಿಕ್ಷಣಕ್ಕಾಗಿ ಬಳಸಲ್ಪಡುತ್ತದೆ ಎಂದು ಹೇಳಿದ ಶ್ರೀಗಳು ತುಲಾಭಾರ ಸೇವೆ ನೆರವೇರಿಸಿದ ಹಾಗೂ ಸರ್ವಭಕ್ತರ ಬಾಳು ಶುಭ ಹಾಗೂ ಶ್ರೇಯಸ್ಸಿನಿಂದ ಕೂಡಿರಲಿ ಎಂದು ಹಾರೈಸಿದರು. ಈ ಸಂದರ್ಭದಲ್ಲಿ

ಸಿದ್ರಾಮಪ್ಪ ದೇಗಾಂವ, ಮಲ್ಲಿನಾಥ ಹಿರೇಮಠ ಹಾರಕೂಡ, ಆನಂದರಾವ ಝುಳಕೆ, ಸೂರ್ಯಕಾಂತ ಬಿರಾದಾರ, ಮಂಜುನಾಥ ದೇಗಾಂವ, ವಿರಣ್ಣ ಭಿಮಳ್ಳಿ ಕಲಬುರಗಿ, ರಾಕೇಶ ಮಿಣಜಗಿ ರುಕ್ಮಾಪುರ ಸುರಪುರ, ಮಾಣಿಕಪ್ಪಾ ಶಾಂತಪ್ಪ ಮೆಂತೆ ಕಲಬುರ್ಗಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಎಸ್.ಎಮ್.ಭಕ್ತಕುಂಬಾರ ಸ್ವಾಗತಿಸಿ, ನಿರೂಪಿಸಿದರು.

ಕಾರ್ತಿಕ ಸ್ವಾಮಿ ಯಲದುಗುಂಡಿ, ಶರಣಪ್ಪ ಜಮಾದಾರ ಪ್ರಾರ್ಥನೆ ಗೀತೆ ಹಾಡಿದರು.

# ನಿರಂತರ ನೀರು ಸರಬರಾಜು ಯೋಜನೆಗೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆಬಸವಕಲ್ಯಾಣ

ತಾಲೂಕಿನ ಪರತಾಪೂರ ಗ್ರಾಮ ಪಂಚಾಯತ ವ್ಯಾಪ್ತಿಯ ನೀಲಕಂಠ ಗ್ರಾಮವನ್ನು ದಿನದ 24 ಗಂಟೆ ನಿರಂತರ ನೀರು ಸರಬರಾಜು ಗ್ರಾಮವೆಂದು ಘೋಷಿಸಲಾಗಿದೆ ಎಂದು ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಗ್ರಾ.ಪಂ.ಆಡಳಿತ ಅಧಿಕಾರಿ ರಮೇಶ ಸುಲ್ಪಿ ಮಾತನಾಡಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮತ್ತು ಕರ್ನಾಟಕ ಸುಸ್ಥಿರ ಗ್ರಾಮೀಣ ನೀರು ಸರಬರಾಜು ಯೋಜನೆ ಸಂಯುಕ್ತಾಶ್ರಯಲ್ಲಿ ಪರತಾಪೂರ ಗ್ರಾಮ ಪಂಚಾಯತ್ ವ್ಯಾಪ್ತಿಯ ನೀಲಕಂಠ ಗ್ರಾಮವನ್ನು ನಿರಂತರ ನೀರು ಸರಬರಾಜು ಗ್ರಾಮ ಘೋಷಣೆ ಕುರಿತು ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ದಿನಾಂಕ 10 ರಿಂದ 20. ವರೆಗೆ ನಿರಂತರ ನೀರು ಸರಬರಾಜು ಪರೀ–ಕ್ಷೆ ಕೈಗೊಂಡು ಇಂದು ಗ್ರಾಮಸ್ಥರ ಸಹಕಾರ ದೊಂದಿಗೆ ಈ ಗ್ರಾಮವನ್ನ ನಿರಂತರ ನೀರು ಸರಬರಾಜು ಗ್ರಾಮವೆಂದು ಎಂದು



ಘೋಷಿಸುವುದರ ಜೊತೆಗೆ ಚಾಲನೆ ನೀಡಲಾಗಿದೆ ಎಂದರು. ಹಾಗೂ ಕುಡಿಯುವ ನೀರು ಮತ್ತು ನೈರ್ಮಲ್ಯ ಯೋಜನೆ ನಿರಂತರ ಕಾರ್ಯಾಚರಣೆ ಮತ್ತು ನಿರ್ವಹಣೆ ಕೈ ಗೊಳ್ಳುವಂತೆ ನಡುವಳಿಯನ್ನು ಸಿದ್ಧಪಡಿಸಿ ಅನುಷ್ಠಾನಕ್ಕೆ ಪಣತೊಡಲಾಗಿದೆ ಎಂದರು. ಈ ಸಂದರ್ಭದಲ್ಲಿ ಪಿಡಿಒ ಪ್ರೀಯಾದರ್ಶಿನಿ, ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತ ಸಿಬ್ಬಂದಿಗಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ವಾಕಿಂಗ್ ಬಳಗದಿಂದ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆಬಸವಕಲ್ಯಾಣ

ನಗರದ ವೈಷ್ಣವಿ ಲೇಔಟ್ ನಲ್ಲಿ ಬೆಳಗಿನ ಜಾವದ ವಾಕಿಂಗ್ ಗೆಳೆಯರ ಬಳಗದಿಂದ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ಆಚರಿಸಲಾಯಿತು. ಈ ತಂಡದ ಸುಮಾರು 25 ಜನ ಬಳಗದವರು ದಿನಾಲು ವಾಕಿಂಗ್ ಮಾಡುವುದು, ವಾಲಿಬಾಲ್ ಆಡುವುದು ಮತ್ತು ಯೋಗಾಸನಗಳನ್ನು ಮಾಡುವುದರ ಮೂಲಕ ಆರೋಗ್ಯಕರ ಮತ್ತು ಅಲ್ಹಾದಕರ್ ಜೀವನಶೈಲಿ ಅಳವಡಿಸಿ ಕೊಂಡಿರೊದು ನಿಜಕ್ಕೂ ಪ್ರೇರಣಾದಾಯಿ. ಸಂತೋಷಮೊರೆ ಅವರ ನೇತೃತ್ವದಲ್ಲಿ ಈ ದಿನಾಚರಣೆ ಆಚರಿಸಲಾಯಿತು, ಈ ಸಂದರ್ಭದಲ್ಲಿ ಸೋಮನಾಥ ಇಂಡೆ, ನಾಗನಾಥ ಮುಕ್ತ, ಚಂದ್ರಕಾಂತ್, ರೇವಣಸಿದ್ಧ ಪಾಂಚಾಳ್, ಪ್ರದೀಪ್ ಗುಂಟಿ, ಪ್ರಕಾಶ್, ರಾಮಚಂದ್ರ ಪಾಟೀಲ್, ಬಸವರಾಜ್



ಬಿರಾದಾರ್, ರವಿ ಚವಾಣ್, ಶಿವಲಿಂಗ್ ಪಾಂಡೆ, ಬಸವರಾಜ್. ನಾಗೇಶ್ ಪಾಂಚಾಳ , ಶಿವಕುಮಾರ ವಾಡೆ, ನೆಹರುಜಿ ಮೇತ್ರೆ, ರಾಜು ಚವಾಣ್ ಪಾಲ್ಗೊಂಡಿದ್ದರು. ಶ್ರೀ ಮದನ್ ಪಾಟೀಲ್ ಯೋಗಾಸನದ ವಿವಿಧ ಭಂಗಿಗಳು ಪ್ರದರ್ಶಿಸಿದರು.

# ಮುಖ್ಯಮಂತ್ರಿಗಳ ಕಾರ್ಯಕ್ರಮ: ಶಾಸಕರು, ಅಧಿಕಾರಿಗಳಿಂದ ಸ್ಥಳ ಪರಿಶೀಲನೆ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜೂನ್ 25ರಂದು ಕೊಪ್ಪಳ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವತುಂಗಭದ್ರಾ ಜಲಾಶಯಕ್ಕೆ ನೂತನವಾಗಿ ಅಳವಡಿಸಿರುವ 33 ಸ್ಪಿಲ್‌ವೇ ಗೇಟುಗಳ ಲೋಕಾರ್ಪಣೆ ಕಾರ್ಯಕ್ರಮಕ್ಕೆ ರಾಜ್ಯದ ಮುಖ್ಯಮಂತ್ರಿಗಳು ಹಾಗೂ ಬೇರೆ ರಾಜ್ಯಗಳ ಮುಖ್ಯಮಂತ್ರಿಗಳು, ಕೇಂದ್ರ ಸರ್ಕಾರದ ಸಚಿವರುಗಳು ಹಾಗೂ ಮೂರು ರಾಜ್ಯಗಳಿಗೆ ಸಂಬಂಧಪಟ್ಟ ಇಲಾಖೆ ಸಚಿವರುಗಳು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ವೇದಿಕೆ ಕಾರ್ಯಕ್ರಮ ನಡೆಯುವ ಮುನಿರಾಬಾದ್‌ನ ಸರ್ಕಾರಿ ಶಾಲಾ ಆವರಣ ಹಾಗೂ ಐಆರ್‌ಬಿಯ ಹೆಲಿಪ್ಯಾಡ್‌ಗಳಿಗೆ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ, ಶಿವರಾಜ ತಂಗಡಗಿ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.ಈ ಸಂದರ್ಭ ಮಾಜಿ ಸಚಿವರಾದ ಅಮರೇಗೌಡ ಪಾಟೀಲ ಬಯ್ಯಾಪೂರ, ಕೊಪ್ಪಳ ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್.ಅರಸಿದ್ದಿ, ವಿಜಯನಗರ ಜಿಲ್ಲಾಧಿಕಾರಿ ಕವಿತಾ ಮನ್ನಿಕೇರಿ,

ವಿಜಯನಗರ ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕಜಿ.ಮಂಜುನಾಥ, ಕರ್ನಾಟಕ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ರಾಜೇಶ ಅಮ್ಮಿನಬಾವಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿ ಕ್ಯಾ.ಮಹೇಶ ಮಾಲಗಿತ್ತಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹೇಮಂತ್‌ಕುಮಾರ, ತುಂಗಭದ್ರಾ ಯೋಜನಾ ವೃತ್ತ ಮುನಿರಾಬಾದ್‌ನ ಅಧೀಕ್ಷಕ ಅಭಿಯಂತರರು ಎಸ್.ಬಿ ಮಲ್ಲಿಗೆವಾಡ,ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು.

# ಲಿಂಗಸುಗೂರು ಭಾಗಕ್ಕೆ ಹೊಸ ರೈಲು ಮಾರ್ಗ: ಬಳ್ಳಾರಿ-ಸಿರಗುಪ್ಪ ಸಿಂಧನೂರು-ಲಿಂಗಸುಗೂರು ಸಂಪರ್ಕಕ್ಕೆ ಕೇಂದ್ರ ಒಪ್ಪಿಗೆ ನಿರೀಕ್ಷೆ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ

ಜೂ 24:ಉತ್ತರ ಕರ್ನಾಟಕದ ಸಾರಿಗೆ ಮತ್ತು ಅಭಿವೃದ್ಧಿಗೆ ಮಹತ್ವದ ಹೆಜ್ಜೆಯಾಗಿ ಬಳ್ಳಾರಿ–ಸಿರಗುಪ್ಪ–ಸಿಂಧನೂರು–ಲಿಂಗಸುಗೂರು ಹೊಸ ರೈಲು ಮಾರ್ಗ ಯೋಜನೆಗೆ ವೇಗ ಸಿಕ್ಕಿದೆ. ಈ ಯೋಜನೆ ಯೋಚನೆ ಹಂತದಿಂದ ಅನುಮೋದನೆ ಹಂತದತ್ತ ಸಾಗುತ್ತಿದ್ದು, ಸ್ಥಳೀಯ ಜನರಲ್ಲಿ ಭಾರಿ ನಿರೀಕ್ಷೆ ಮೂಡಿಸಿದೆ.

ಪ್ರಸ್ತಾವಿತ ರೈಲು ಮಾರ್ಗವು ಸುಮಾರು 132.18 ಕಿಲೋಮೀಟರ್ ಉದ್ದ ಹೊಂದಿದ್ದು, ಬಳ್ಳಾರಿ, ಸಿರಗುಪ್ಪ, ಸಿಂಧನೂರು ಹಾಗೂ ಲಿಂಗಸುಗೂರು ನಗರಗಳನ್ನು ಸಂಪರ್ಕಿಸಲಿದೆ. ಈ ಮಾರ್ಗವು ಕೃಷಿ, ಕೈಗಾರಿಕೆ, ಶಿಕ್ಷಣ ಹಾಗೂ ಉದ್ಯೋಗ ಕ್ಷೇತ್ರಗಳಿಗೆ ಹೊಸ ಅವಕಾಶಗಳನ್ನು ಕಲ್ಪಿಸಲಿದೆ ಎಂದು ಹೇಳಲಾಗುತ್ತಿದೆ.

ಮಾಹಿತಿಯ ಪ್ರಕಾರ, 2026ರ ಬಜೆಟ್ ವೇಳೆಗೆ ಕೇಂದ್ರ ರೈಲ್ವೆ ಇಲಾಖೆಯಿಂದ ಯೋಜನೆಗೆ ಅಂತಿಮ ಅನುಮೋದನೆ ದೊರೆಯುವ ಸಾಧ್ಯತೆ ಇದೆ. ಈಗಾಗಲೇ ಸಮೀಕ್ಷೆ ಮತ್ತು ಪ್ರಾಥಮಿಕ ಅಧ್ಯಯನ ಕಾರ್ಯಗಳು ಪೂರ್ಣಗೊಂಡಿದ್ದು, ಆಡಳಿತಾತ್ಮಕ ಅನುಮೋದನೆ ಹಂತದಲ್ಲಿ ಕಡತಗಳ ಪರಿಶೀಲನೆ ನಡೆಯುತ್ತಿದೆ.

ಈ ಹೊಸ ರೈಲು ಮಾರ್ಗ ಜಾರಿಗೆ ಬಂದರೆ ಸಿಂಧನೂರು, ಸಿರಗುಪ್ಪ ಹಾಗೂ ಲಿಂಗಸುಗೂರು ಭಾಗದ ರೈತರಿಗೆ ಕೃಷಿ ಉತ್ಪನ್ನಗಳನ್ನು ಮಾರುಕಟ್ಟೆಗೆ ಸಾಗಿಸಲು ಅನುಕೂಲವಾಗಲಿದೆ.




ಜೊತೆಗೆ ವಿದ್ಯಾರ್ಥಿಗಳು, ವ್ಯಾಪಾರಸ್ಥರು ಹಾಗೂ ಸಾರ್ವಜನಿಕರಿಗೆ ವೇಗವಾದ ಸಂಚಾರ ವ್ಯವಸ್ಥೆ ಸಿಗಲಿದೆ.

ಸ್ಥಳೀಯ ಸಾರ್ವಜನಿಕರು ಹಾಗೂ ವಿವಿಧ ಸಂಘಟನೆಗಳು ಈ ಯೋಜನೆಯನ್ನು ಶೀಘ್ರ ಜಾರಿಗೆ ತರಬೇಕು ಎಂದು ಸರ್ಕಾರವನ್ನು ಒತ್ತಾಯಿಸುತ್ತಿದ್ದು, ಲಿಂಗಸುಗೂರು ಭಾಗದ ಅಭಿವೃದ್ಧಿಗೆ ಇದು ಮಹತ್ವದ ಮೈಲುಗಲ್ಲಾಗಲಿದೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ

# ಯೋಗ ದಿಂದ ನಿರೋಗ: ಪ್ರೊ ಅಶಫಾಕ ಅಹ್ಮದ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಯೋಗಾಸನ, ಪ್ರಾಣಾಯಾಮ ಮತ್ತು ಧ್ಯಾನ ಅಭ್ಯಾಸದ ಮೂಲಕ ದೇಹ ಮತ್ತು ಮನಸ್ಸನ್ನು ರೋಗ–ರುಜಿನಗಳಿಂದ ಮುಕ್ತಗೊಳಿಸಿ, ಸದೃಢ ಹಾಗೂ ಆರೋಗ್ಯಕರವಾಗಿ ಇಟ್ಟುಕೊಳ್ಳಬಹುದು ಎಂದು ಕೆಬಿಎನ ವಿವಿಯ ಸಮ ಉಪಕುಲಪತಿ ಪ್ರೊ ಸಯ್ಯದ ಆಶಫಾಕ ಹೇಳಿದರು. ಅವಎರು ರವಿವಾರ ಕೆಬಿಎನ ವಿವಿಯ ಆವರಣದಲ್ಲಿ ನಡೆದ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಮುಖ್ಯ ಅತಿಥಿ–ಯಾಗಿ ಮಾತನಾಡಿದರು.

ಸುಮಾರು 2,500 ಕ್ಕೂ ಹೆಚ್ಚು ಸ್ಥಳಗಳಲ್ಲಿ ಮತ್ತು ವಿದೇಶಗಳಲ್ಲಿರುವ ಭಾರತೀಯ ರಾಯಭಾರ ಕಚೇರಿಗಳಲ್ಲಿ ಯೋಗ ಕಾರ್ಯಕ್ರಮಗಳು ಜರುಗುತ್ತಿವೆ. ಎಲ್ಲ ವಯೋಮಾನದವರಿಗೂ ಯೋಗ ಮಾಡಿ ದೀರ್ಘಕಾಲದವರೆಗೂ ಚಟುವಟಿಕೆಯಿಂದಿರಲು ಯೋಗ ಹೇಗೆ ಸಹಕಾರಿ, ಅದರ ಮಹತ್ವ ವನ್ನು ಒತ್ತಿಹೇಳಿದರು.

ಮೆಡಿಕಲ್ ಡೀನ್ ಡಾ. ಗುರುಪ್ರಸಾದ ಇವರೂ ಮಾತನಾಡಿ ಸದೃಢ ದೇಹಕ್ಕಾಗಿ ಯಾವುದಾದರೂ ವ್ಯಾಯಾಮ ಮಾಡುತ್ತಿರಬೇಕು. ಅದರಲ್ಲಿ ಯೋಗ ಬಹಳ ಒಳ್ಳೆಯ ಅಭ್ಯಾಸ ಹಾಗೂ ಮಾನಸಿಕ ಒತ್ತಡ ನಿರ್ವಹಣೆಯಲ್ಲಿ ಸಹಕಾರಿ ಎಂದರು.

ವಾಣಿಜ್ಯ ಡೀನ ಡಾ ಶ್ರೀನಿವಾಸ, 3 ದಿನಗಳ ಯೋಗ ತರಬೇತಿ ನಡೆಸಿದ್ದು ವಿವಿಯ ಒಳ್ಳೆಯ ಅವಕಾಶ ಕೊಟ್ಟಿತು.ಇಂತಹ ಒಳ್ಳೆಯ ಕಾರ್ಯಕ್ರಮಕ್ಕಾಗಿ ವಿವಿಗೆ ಧನ್ಯವಾದಗಳನ್ನು ತಿಳಿಸಿದರು.



ಈ ಕಾರ್ಯಕ್ರಮದಲ್ಲಿ ತರಬೇತುದಾರ ಶ್ರೀಮತಿ ಸುಜಾತಾಯವರು ಮಾತನಾಡುತ್ತ, ವಿವಿಯಲ್ಲಿ ಅವಕಾಶ ಕೊಟ್ಟದ್ದಕ್ಕೆ ಧನ್ಯವಾದಗಳನ್ನು ಹೇಳಿ ದರು.

ಅನೇಕ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ ಯೋಗಮಾಡಿದರು ಮಾಡಿದರು. ಇಂಜಿನಿಯರಿಂಗ ಡೀನ ಡಾ ಸುಭಾಸ ಕಮಲ, ಕ್ಯಾಂಪಸ ಡೀನ ಡಾ ಮೊಹಮ್ಮದ ಅಜಮ, ಡಾ ಪ್ರವೀಣ ನಾಯಕ, ಸಹಾಯಕ ಪ್ರಾಧ್ಯಾಪಕರಾದ ಡಾ ಸಂಗನಗೌಡ, ಡಾ ಬದರಿನಾಥ, ಡಾ ರಾಜಾಪಟೇಲ, ಇಫತ್ ನಿಗಾರ, ಡಾ ಸಂಯೋಜಕರಾದ ಡಾ ಅತಿಯಾ ಸುಲ್ತಾನಾ, ಡಾ ನಮ್ರತಾ ಹಾಗೂ ವಿದ್ಯಾರ್ಥಿನಿ ತಮ್ಮ ಆನುಭವ ಹಂಚಿಕೊಂಡರು. ಡಾ ಸುಜಾತಾ ನಿರೂಪಿಸಿದರು. ಯೋಗ ದಿನಾಚರಣೆಯ ನಿಮಿತ್ಯ ಅನೇಕ ಸ್ಪರ್ಧೆಗಳನ್ನು ಕೂಡ ಹಮ್ಮಿಕೊಳ್ಳಲಾಗಿತ್ತು.

# ಪುಲಿಕೇಶಿ ನಗರ ಶಾಸಕ ಶ್ರೀನಿವಾಸರಿಗೆ ಸಚಿವ ಸ್ಥಾನ ನೀಡಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ರಾಜ್ಯ ಭೋವಿ ಸಮಾಜ ಹಾಗೂ ಇತರೆ ಬಡ ಸಮಾಜಗಳ ಹಿತಾಸಕ್ತಿಗೆ ಸಕ್ರೀಯವಾಗಿ ಸ್ಪಂದಿಸುವ, ಪುಲಕೇಶಿ ನಗರ ಶಾಸಕರಾದ ಎ.ಸಿ ಶ್ರೀನಿವಾಸ್ ರವರಿಗೆ ಸಚಿವ ಸ್ಥಾನ ನೀಡುವಂತೆ ಭೋವಿ ಸಮಾಜ ವಿನಮ್ರ ಮನವಿ. ಕರ್ನಾಟಕ ರಾಜ್ಯ ಕೊಲಂಬೋ ಕ್ಷೇಮ ಅಭಿವೃದ್ಧಿ ಸಂಘ ಹಾಗೂ ಬೋವಿ ಸಮಾಜದ ಹಿರಿಯ ಮುಖಂಡ ರಾಜ್ಯದ ಉಪಾಧ್ಯಕ್ಷರು ವಿ ಗಣೇಶ್ ಬೋವಿ ರವರು ಸರ್ಕಾರಕ್ಕೆ ಒತ್ತಾಯಿಸುತ್ತಿದ್ದಾರೆ



ನಂತರ ಮಾತನಾಡಿರಾಜ್ಯದಲ್ಲಿ ಪ್ರವಾಸ ಮಾಡಿ ಭೋವಿ ಸಮಾಜದ ಜನತೆಯ ಆಶೋತ್ತರಗಳಿಗೆ ಸ್ಪಂದಿಸಿ ಭೋವಿ ಸಮಾಜಗಳ ಅಭಿವೃದ್ಧಿಗೆ ಸಂಘಟನೆಯಲ್ಲಿ ಶಕ್ತಿ ಮೀರಿ ಜನತೆಯನ್ನು ಕಟ್ಟಿಕೊಂಡಿರುವಂತಹ ಹಾಗೂ ರಾಜ್ಯ ಕಾಂಗ್ರೆಸ್ ಪಕ್ಷದಲ್ಲಿ ಕೆ.ಪಿ.ಸಿ.ಸಿ ಯಲ್ಲಿ ಪದಾಧಿಕಾರಿಗಳಾಗಿ ಪಕ್ಷದ ಸಂಘಟನೆಗಳಿಗೆ ಹಾಗೂ ಅಭಿವೃದ್ಧಿಗಾಗಿ ದುಡಿಯುತ್ತಿರುವ ಯುವ ಉತ್ಸಾಹಿ ಶಾಸಕರಾದ ಶ್ರೀ ಎ.ಸಿ. ಶ್ರೀನಿವಾಸ್ ರವರಿಗೆ ಸಚಿವ ಸ್ಥಾನ ನೀಡಬೇಕು ಎಂಬುದು ನಮ್ಮ ರಾಜ್ಯ ಭೋವಿ ಸಮಾಜದ ವಿನಮ್ರ ಮನವಿಯಾಗಿದೆ.

ರಾಜ್ಯ ಸಚಿವ ಸಂಪುಟ ವಿಸ್ತರಣೆಯ ಸಂದರ್ಭದಲ್ಲಿ ರಾಜ್ಯ ಭೋವಿ ಸಮಾಜದ ಅಭಿವೃದ್ಧಿಗೆ ಬದ್ಧತೆಯಿಂದ ಕಾರ್ಯನಿರ್ವಹಿಸುವ ಸಮಾಜದ ಕುಂದು ಕೊರತೆಗಳಿಗೆ ಸ್ಪಂದಿಸುವ, ಬಡವರ ಕಷ್ಟ ಕಾರ್ಪಣ್ಯಗಳು, ನೋವು– ನಲಿವುಗಳು ಹಾಗೂ ಸಮಸ್ಯೆಗಳ ಬಗ್ಗೆ ಕಾಳಜಿ ಹೊಂದಿರುವ ಯೋಗ್ಯ, ದಕ್ಷ ಮತ್ತು ಪ್ರಾಮಾಣಿಕ ಜನಪ್ರತಿನಿಧಿಗೆ ಸಚಿವ ಸ್ಥಾನ ನೀಡಬೇಕೆಂಬುದು ನಮ್ಮ ಸಮಾಜದ ಆಶಯವಾಗಿದೆ. ಎಂದರು

ಸಮಾಜದ ಹೆಸರಿನ ಪ್ರಾತಿನಿಧ್ಯದಲ್ಲಿ ಸಚಿವರಾಗಿ ಕಾರ್ಯನಿರ್ವಹಿಸುವ ಸಮಾಜದ ಅಭಿವೃದ್ಧಿಗೆ ಹಾಗೂ ಪಕ್ಷದ ಸಂಘಟನೆಗೆ ಪ್ರಯೋಜನವಾಗದೆ ಅಪ್ರಯೋಜಕ ವ್ಯಕ್ತಿಗಳಿಗೆ ಸಚಿವ ಸ್ಥಾನ ನೀಡಿದಲ್ಲಿ ಭೋವಿ ಸಮಾಜಕ್ಕೂ ಹಾಗೂ ಕಾಂಗ್ರೆಸ್ ಪಕ್ಷಕ್ಕೂ ಯಾವುದೇ ಲಾಭವಾಗುವುದಿಲ್ಲ ಎಂಬ ಅಂಶವನ್ನು ತಾವುಗಳು ಗಂಭೀರವಾಗಿ ಪರಿಶೀಲಿಸಬೇಕು. ಭೋವಿ ಸಮಾಜ ಹಾಗೂ ಇತರೆ ಸೂಕ್ಷ್ಮ ಬಡ ಸಮಾಜಗಳ ಲಕ್ಷಾಂತರ ಜನರ ಹಿತದೃಷ್ಟಿಯಿಂದ ರಾಜ್ಯಾದ್ಯಂತ ಪ್ರವಾಸ ಮಾಡಿ ಸಮಾಜದ ಹಾಗೂ ಕಾಂಗ್ರೆಸ್ ಪಕ್ಷದ ಏಳಿಗೆಗಾಗಿ ದುಡಿಯುವ ಹಾಗೂ ಭೋವಿ ಸಮಾಜ ಹಾಗೂ ಇತರೆ ಸೂಕ್ಷ್ಮ–ಬಡ ಪರಿಶಿಷ್ಟ ಜಾತಿ ಜನಾಂಗಗಳನ್ನು ಕಟ್ಟಿಕೊಂಡಿರುವ ರಾಜ್ಯ ಭೋವಿ ಸಮಾಜದ ಇತರೆ ಸೂಕ್ಷ್ಮ ಸಮಾಜಗಳ ಸಮಗ್ರ ಅಭಿವೃದ್ಧಿಗಾಗಿ ಸಮಾಜಗಳೊಂದಿಗೆ, ನಿರಂತರ ಸಂಪರ್ಕದಲ್ಲಿ ಜನರ ಸಮಸ್ಯೆಗಳಿಗೆ ಸ್ಪಂದಿಸುವ ನಾಯಕತ್ವವನ್ನು ಭೋವಿ ಸಮಾಜಗಳು ಹಾಗೂ ಇತರೆ ಬಡ,ಸೂಕ್ಷ್ಮ, ಸಣ್ಣ ಸಮಾಜಗಳ ಪ್ರಗತಿಯನ್ನು ಗಮನದಲ್ಲಿ ಇಟ್ಟುಕೊಂಡು ಸಚಿವ ಸಂಪುಟದ ವಿಸ್ತರಣೆಯಲ್ಲಿ ಶ್ರೀ ಎ.ಸಿ. ಶ್ರೀನಿವಾಸ್ ಅವರ ಹೆಸರನ್ನು ಪರಿಗಣಿಸಿ ಸಚಿವ ಸ್ಥಾನ ನೀಡುವಂತೆ ವಿನಮ್ರವಾಗಿ ಮನವಿ ಮಾಡಿಕೊಳ್ಳುತ್ತೇನೆ. ಪಕ್ಷಕ್ಕೆ ಹಾಗೂ ಸಮಾಜಗಳ ಕೆಲಸ ಮಾಡುವವರನ್ನು ಪರಿಗಣಿಸಿ ಸಚಿವಸ್ಥಾನ ನೀಡಬೇಕೆಂದು ಎಂದು ತಿಳಿಸಿದರು

# ನೀರಿನ ಸಮಸ್ಯೆ ಹೋಗಲಾಡಿಸಿದ ಪಿಡಿಒ ಅಮೃತ

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ತಾಲೂಕಿನ ಮಂಗಲಗಿವಾಡಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕೊಳವೆ ಬಾವಿಯ ಮೋಟಾರ್ ಕೆಟ್ಟ ಪರಿಣಾಮ ವಿದ್ಯಾರ್ಥಿಗಳಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗಿತ್ತು. ಈ ಸಮಸ್ಯೆ ಅರಿತು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಅಮೃತ ಅವರು, ವಿದ್ಯಾರ್ಥಿಗಳಿಗೆ ನೀರಿನ ಸಮಸ್ಯೆ ಆಗದಂತೆ ಮುನ್ನೆಚ್ಚರಿಕೆ ವಹಿಸಿ ನಳದಿಂದ ಪೈಪ್ ಲೈನ್ ಮಾಡಿಸಿ ನೀರಿನ ಸರಬರಾಜು ವ್ಯವಸ್ಥೆ ಮಾಡಿಸಿದ್ದಾರೆ. ಶಾಲೆಯ ಸಂಪೂರ್ಣ ನೀರಿನ ಸಮಸ್ಯೆ ಹೋಗಲಾಡಿಸಲು ತೆರೆದ ಬಾವಿ ಹಾಗೂ ಕೊಳವೆ ಬಾವಿಯ ಮೋಟಾರ್ ದುರಸ್ಥಿ ಮಾಡಿಸಿ ನೀರಿನ ಸಮಸ್ಯೆ ಹೋಗಲಾಡಿಸಿದ್ದಾರೆ ಎಂದು ಶಾಲೆಯ ಮುಖ್ಯ ಶಿಕ್ಷಕ ಚೌಡಯ್ಯ ತಿಳಿಸಿದ್ದಾರೆ.



# ಮಹಾರಾಜಾ ಕಾಲೋನಿಯಲ್ಲಿ ಕೈತೋಟ ನಿರ್ಮಿಸಲು ಮನವಿ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಪಟ್ಟಣದ ಮಾಹಾರಾಜಾ ಕಾಲೋನಿಯಲ್ಲಿ ಕೈತೋಟ (ಗಾರ್ಡನ್) ನಿರ್ಮಿಸಿಕೊಡಬೇಕು ಎಂದು ಸಂಸದ ಸಾಗರ ಖಂಡ್ರೆಯವರಿಗೆ ಕಾಲೋನಿ ನಿವಾಸಿಗರು ಮನವಿ ಮಾಡಿದರು.

ರಾಜ್ಯದ ಅತ್ಯಂತ ಕಿರಿಯ ವಯಸ್ಸಿನ ಸಂಸದರಾದ ಸಾಗರ ಖಂಡ್ರೆಯವರು ಉತ್ತಮ ಸಂಸದ ಪ್ರಶಸ್ತಿ ಸ್ವೀಕರಿಸಿದ ನಿಮಿತ್ಯ ಆಯೋಜಿಸಿದ್ದ ಸತ್ಕಾರ ಸಮಾರಂಭದಲ್ಲಿ ಮಾಹಾರಾಜಾ ಕಾಲೋನಿಯ ನಿವಾಸಿಗರು ಗಾರ್ಡನ್ ನಿರ್ಮಾಣದ ಬೇಡಿಕೆ ಇಟ್ಟರು.

ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ ಸಂಸದ ಸಾಗರ ಖಂಡ್ರೆಯವರು ಪುರಸಭೆಯ ವತಿಯಿಂದ ಆದಷ್ಟು ಬೇಗ ಗಾರ್ಡನ್ ನಿರ್ಮಿಸಿಕೊಡುವುದಾಗಿ ತಿಳಿಸಿದರು. ನಂತರ ಕಾಲೋನಿ ನಿವಾಸಿಗರ ಜೊತೆಯಲ್ಲಿ ಲಕ್ಷ್ಮೀ ದೇವಸ್ಥಾನದಲ್ಲಿ ಮಾತೆ ಲಕ್ಷ್ಮಿಯ ಪೂಜೆ ನೆರವೇರಿಸಿದರು.



ಈ ಸಂದರ್ಭದಲ್ಲಿ ಮುಖಂಡರಾದ ಪ್ರಕಾಶ ಎಸ್ ಹೊಸಖಂಡೆ, ಶರಣಪ್ಪ ಜೊಳದಪಕೆ, ಸಂಜುಕುಮಾರ ಪ್ರಭಾ, ವಿನೋದಕುಮಾರ ಪಾಟೀಲ ಮತ್ತಿತರರು ಇದ್ದರು.

# ಸತ್ಯ ಸಾಯಿ ಸೇವಾನಿಕೇತನಮ್‌ನಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಯೋಗವು ದೇಹ, ಮನಸ್ಸು ಮತ್ತು ಆತ್ಮದ ಸಮನ್ವಯ ಸಾಧಿಸುವ ಸಮಗ್ರ ಜೀವನ ಪದ್ಧತಿಯಾಗಿದೆ ಎಂದು ಯೋಗ ಮಾರ್ಗದರ್ಶಕ ಅಶೋಕ್ ಹೇಳಿದರು.ಯಲಬುರ್ಗಾ ತಾಲೂಕಿನ ಕುದ್ರಿಕೊಟಗಿ ಗ್ರಾಮದ ಹತ್ತಿರದಲ್ಲಿರುವ ಶ್ರೀ ಸತ್ಯ ಸಾಯಿ ಸೇವಾನಿಕೇತನಂ ಕ್ಯಾಂಪಸ್‌ನಲ್ಲಿ ಆಯೋಜಿಸಿದ್ದ ಯೋಗ ತರಬೇತಿ ಕಾರ್ಯಕ್ರಮದಲ್ಲಿ ಅವರು ವಿವಿಧ ಯೋಗಾಸನಗಳ ಮಹತ್ವ ಮತ್ತು ಆರೋಗ್ಯಕಾರಿ ಪ್ರಯೋಜನಗಳ ಕುರಿತು ಮಾಹಿತಿ ನೀಡಿದರು.ವಜ್ರಾಸನ, ಸೂರ್ಯ ನಮಸ್ಕಾರ, ವೃಕ್ಷಾಸನ ಸೇರಿದಂತೆ ವಿವಿಧ ಆಸನಗಳನ್ನು ಪ್ರಾಯೋಗಿಕವಾಗಿ ಪ್ರದರ್ಶಿಸಿದ ಅವರು, ನಿಯಂತ್ರಿತ ಉಸಿರಾಟದ ಮೂಲಕ ದೈಹಿಕ ಚೈತನ್ಯ, ಮಾನಸಿಕ ನೆಮ್ಮದಿ ಹಾಗೂ ಏಕಾಗ್ರತೆಯನ್ನು ವೃದ್ಧಿಸಬಹುದು ಎಂದು ತಿಳಿಸಿದರು. ಶ್ವಾಸಕೋಶಗಳ ಸಾಮರ್ಥ್ಯ ಹೆಚ್ಚಿಸುವ ಹಾಗೂ ಒತ್ತಡ ನಿವಾರಣೆಗೆ ಸಹಕಾರಿಯಾಗುವ ಉಸಿರಾಟದ ತಂತ್ರಗಳನ್ನೂ ಪರಿಚಯಿಸಿದರು. ಅಧಿವೇಶನದ ಕೊನೆಯಲ್ಲಿ ಸಿಂಹಾಸನದ ಮಹತ್ವವನ್ನು ವಿವರಿಸಿದರು.ಶ್ರೀ ಸತ್ಯ ಸಾಯಿ ಸೇವಾನಿಕೇತನಂ ಕ್ಯಾಂಪಸ್ ಶಿಕ್ಷಣ ಕ್ಷೇತ್ರದಲ್ಲಿ ವಿಶಿಷ್ಟ ಗುರುತನ್ನು ಮೂಡಿಸಿದ್ದು, ಶ್ರೀ ಸದ್ಗುರು ಮಧುಸೂದನ್ ಸಾಯಿ ಅವರ ಆಶೀರ್ವಾದ ಮತ್ತು ಮಾರ್ಗದರ್ಶನದಲ್ಲಿ 2018ರಲ್ಲಿ ಸ್ಥಾಪನೆಯಾಗಿದೆ.ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕ ಸಿದ್ದಲಿಂಗೇಶ, ಕ್ಯಾಂಪಸ್ ಇನ್‌ಚಾರ್ಜ್ ಎ.ಸಿ. ಮಂಜುನಾಥ್, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಗಾಂಜಾ ವ್ಯಸನಿಯ ಬಂಧನ




• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ನಗರ ಪೊಲೀಸ್ ಠಾಣೆ ಯ ನೂತನ ಇನ್ಸೆಕ್ಟರ್ ಎಂ ಶಿವಮಾಧಯ್ಯರವರ ಮಾರ್ಗದರ್ಶನದಲ್ಲಿ ನೂತನ ಹುಣಸೂರು ನಗರ ಪೊಲೀಸ್ ಠಾಣೆ ಪಿಎಸ್ಐ ಟಿ ಎಂ ತಾಜುದ್ದಿನ್ ರವರ ನೇತೃತ್ವದಲ್ಲಿ ದಿನಾಂಕ 21/06/26 ರಂದು ಹುಣಸೂರು ನಗರ ಹಳೆ ಬಸ್ಟ್ಯಾಂಡ್ ನಲ್ಲಿ ಖಚಿತ ಮಾಹಿತಿ ಮೇರೆಗೆ ದಾಳಿ ಮಾಡಿ ಗಾಂಜಾ ಸೇವಿಸುತಿದ್ದ ಲಾಲ್ ಬಂದ್ ಮೊಹೊಲ್ಲ ಯುವಕನನ್ನು ಹುಣಸೂರು ಟೌನ್ ಪೊಲೀಸರು ಬಂಧಿಸಿ ಬಿಸಿ ಮುಟ್ಟಿಸಿ ಸದರಿರವರುಗಳ ಮೇಲೆ ಓಆಕಖ ಕಾಯ್ದೆ ಅಡಿಯಲ್ಲಿ ಈಖಖ ಪ್ರಕರಣ ದಾಖಲಿಸಿ ತನಿಖೆ ಕೈ ಗೊಂಡಿದ್ದಾರೆ

ಹುಣಸೂರು ಠಾಣೆಯ್ಖಭಿ133ಮಂಜುನಾಥ್,ಠಿಭಿ190 ರವಿಕುಮಾರ್ ,525 ಮಹೇಂದ್ರ ರವರು ದಾಳಿಯಲ್ಲಿ ಭಾಗವಹಿಸಿದ್ದು ನೂತನ ಇನ್ಸೆಕ್ಟರ್ ಎಂ ಶಿವ ಮಾಧಯ್ಯರವರು ಹಾಗೂ ಪಿಎಸ್ಐ ಟಿ ಎಂ ತಾಜುದ್ದಿನ್ ರವರು ಮಾದಕ ವಸ್ತುಗಳ ವ್ಯಸನಿಗಳು ಹಾಗೂ ಮಾರಾಟ ಗಾರರ ಮೇಲೆ ಬಿಸಿ ಮುಟ್ಟಿಸಿ ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳುತಗಿದ್ದಾರೆ ಎಂದು ತಿಳಿಸಿದರು

# ಮೊಹರಂ ಕಾಸಿಮ್ ಪೀರ್ ಕತ್ತಲ್ ರಾತ್ರಿ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಮೊಹರಂ ಆಚರಣೆಯ 7ನೇದಿನದ ಕಾಸಿಮ್ ಪೀರ್ ಕತ್ತಲ್ ರಾತ್ರಿ ಕಾರ್ಯಕ್ರಮ ಬುಧುವಾರ ಬೆಳಗಿನ ಜಾವಾ ಜರುಗಿತು.

ಪಟ್ಟಣದ ವೆಂಕಟರಾಯನ ಪೇಟೆಯ ಶ್ಯಾಣೇ ಕಾಸಿಮ್ ಪೀರಾ ಹಾಗೂ ಹುಚ್ಚ ಕಾಸಿಮ್ ಪೀರಾರ್ ದರ್ಗಾದಲ್ಲಿ ಮಂಗಳವಾರ ಸವಾರಿ ನಿಮಿತ್ಯ ಭಕ್ತಾಧಿಗಳು ಬೆಳಿಗ್ಗೆಯಿಂದಲೇ ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಹರಿಕೆಗಳನ್ನು ತಿರಿಸಿದರು. ಅಲೈಕುಣಿಯಲ್ಲಿ ಕಟ್ಟಿಗೆ ಸುಡುವುದು. ದರ್ಗಾದಲ್ಲಿ ಭಕ್ತರಿಗೆ ಅನ್ನ ಸಂತರ್ಪಣೆ ಮಾಡಲಾಗಿತ್ತು. ಬೆಳಗಿನ ಜಾವ ಸವಾರಿ ಹೊರಡುವ ಸಂದರ್ಭದಲ್ಲಿ ವಿವಿಧ ವಾಧ್ಯ ಮೇಳಗಳೊಂದಿಗೆ ಸೇವಾಕಾಂಕ್ಷಿಗಳಿಂದ ಪಂಜಿನ ಮೆರವಣಿಗೆ, ಕೊಬ್ಬರಿ ಸುಡುವುದು. ಭಕ್ತರಿಂದ ಪೀರಾಗಳಿಗೆ ಉತ್ತತ್ತಿ ಎಸೆಯುವುದು. ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು. ಹೊರಟಿರುವ ಸವಾರಿ ಮರಳಿ ದುರ್ಗಾ ಸೇರಿ ಸವಾರಿ ಸಂಪನ್ನವಾಯಿತು. ಪೊಲೀಸರಿಂದ ಸೂಕ್ತ ಬಿಗಿ ಭದ್ರತೆ ಕಲ್ಪಿಸಲಾಗಿತ್ತು.

ದರ್ಗಾ ಕಮಿಟಿ ಪದಾಧಿಕಾರಿಗಳು, ಮೊಹರಂ ಪೀರಾ ಹೊತ್ತ ಮುಜಾವರಗಳು ಸೇರಿದಂತೆ ಭಕ್ತಧಿಗಳು ಉಪಸ್ಥಿತರಿದ್ದರು

# ಹಂಸಧ್ವನಿ ಕಲಾನಿಕೇತನದಿಂದ ಸುಗಮ ಸಂಗೀತ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಹಂಸಧ್ವನಿ ಕಲಾನಿಕೇತನ(ರಿ.) ಕಲಬುರಗಿ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು. ಇವುಗಳ ಸಂಯುಕ್ತಾಶ್ರಯದಲ್ಲಿ ""ಸುಗಮ ಸಂಗೀತ –ಜಾನಪದ ಸಂಗೀತ ಹಾಗೂ ವಚನೋತ್ಸವ " ಸಂಗೀತ ಕಾರ್ಯಕ್ರಮ"ಗುರುವಾರ ದಿನಾಂಕ 25–06–2026 ರಂದು ಸಾಯಂಕಾಲ 6.30 ಗಂಟೆಗೆ ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರಸ್ವಾಮಿ ಮಠ ಬಿದ್ದಾಪುರ ಕಾಲೋನಿ, ಕಲಬುರಗಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಉದ್ಘಾಟಕರಾಗಿ ಶ್ರೀ ವಿಜಯಮಾಲಾ ಕಮಲಾಪುರಕರ್, ಅಧ್ಯಕ್ಷತೆ ಶ್ರೀ ಜಯರಾವ ಕುಲಕರ್ಣಿ, ಮುಖ್ಯ ಅತಿಥಿಗಳು ಶ್ರೀ ಜಗದೀಶ್ವರಿ ಅ. ನಾಸಿ ಉಪ ಸಹಾಯಕ ನಿರ್ಧೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕಲಬುರಗಿ, ನೂ.ವಿ.ಪದವಿಯ ಶ್ರೀಮತಿ ಭಾರತಿ ಎಸ್. ಆರ್. ಶ್ರೀ ಅಭಿಜಿತ ಕೊಲ್ಹಾರಿ, ಶ್ರೀ ವಿನೋದ ಕುಮಾರ ಪತಂಗೆಅವರು ಆಗಮಿಸಲಿದ್ದು, ಸಂಗೀತ ಕಾರ್ಯಕ್ರಮದಲ್ಲಿ ಡಾ. ಮಹೇಶ ಕುಮಾರ ಈ ಬಡಿಗೇರ, ಡಾ. ರಮೇಶ ಕುಲಕರ್ಣಿ ಶ್ರೀ ಬಾಬುರಾವ ಕೊಬಾಳ, ಶ್ರೀ ನಾಗರಾಜ ಕುಲಕರ್ಣಿ ಶ್ರೀ ಕಾಂತ ಮಾನೆ ಮತ್ತು ತಂಡದವರಿಂದ ತಬಲಾ ವಾದನ, ಶ್ರೀ ಸುಧೀಂದ್ರಾಚಾರ ಅವರ ಹಾರ್ಮೋನಿಯಂ ವಾದನ, ಮತ್ತು ಶ್ರೇಯಸಿ ಕುಲಕರ್ಣಿ ಭರತನಾಟ್ಯ ಸಂಗೀತ ಕಾರ್ಯಕ್ರಮ ವಿರುತ್ತದೆ. ತಬಲಾ ಸಾಥ ಡಾ. ರಾಘವೇಂದ್ರ ಕುಲಕರ್ಣಿ, ಶ್ರೀ ಜಯತೀರ್ಥ ಆದ್ಯ, ಹಾರ್ಮೋನಿಯಂ ಸಾಥ : ಶ್ರೀ ಬದರಿನಾಥ ಮುಡಬಿ ಅವರು ಆಗಮಿಸುವರು. ಸಂಗೀತಾಸಕ್ತರು ಈ ಕಾರ್ಯಕ್ರಮಕ್ಕೆ ಆಗಮಿಸಿ ಶೋಭೆತರಲು ಅಧ್ಯಕ್ಷರಾದ ಡಾ. ರವೀಂದ್ರ ಕುಲಕರ್ಣಿ ಅವರು ವಿನಂತಿಸಿಕೊಂಡಿದ್ದಾರೆ.

# ಶೀಘ್ರದಲ್ಲಿ ಕಲಬುರಗಿಯಲ್ಲಿ ಮತ್ತೊಂದು ಬೃಹತ್ ಉದ್ಯೋಗಮೇಳ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ 24 : ಕಲ್ಯಾಣ ಕರ್ನಾಟಕ ಭಾಗದ, ವಿಶೇಷವಾಗಿ ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಯ ನಿರುದ್ಯೋಗಿ ಯುವಕ–ಯುವತಿಯರಿಗೆ ಉದ್ಯೋಗಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಮತ್ತೊಂದು ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗುತ್ತಿದೆ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣಪ್ರಕಾಶ ಪಾಟೀಲ್ ತಿಳಿಸಿದ್ದಾರೆ.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಉದ್ಯೋಗ ಮೇಳದಲ್ಲಿ ಮರ್ಸಿಡಿಸ್ ಬೆಂಝ್, ಸ್ನೈಡರ್ ಎಲೆಕ್ಟ್ರಿಕ್, ಬಜಾಜ್ ಆಟೋ, ಜೆಸಿಬಿ, ಡಿ–ಮಾರ್ಟ್, ಮಹೀಂದ್ರಾ, ವರ್ಲ್‌ಪೂಲ್ ಸೇರಿದಂತೆ ದೇಶ–ವಿದೇಶಗಳ ಖ್ಯಾತ ಕಂಪನಿಗಳು ಭಾಗವಹಿಸುತ್ತಿದ್ದು, ಒಟ್ಟು 3,500ಕ್ಕೂ ಹೆಚ್ಚು ಹುದ್ದೆಗಳನ್ನು ಗುರುತಿಸಲಾಗಿದೆ. ಆಟೋಮೊಬೈಲ್, ಉತ್ಪಾದನೆ, ಎಂಜಿನಿಯರಿಂಗ್, ರಿಟೇಲ್, ಐಟಿ ಹಾಗೂ ಸೇವಾ ವಲಯದ ವಿವಿಧ ಹುದ್ದೆಗಳಿಗೆ ನೇಮಕಾತಿ ನಡೆಯಲಿದೆ. ಆಯ್ಕೆಯಾಗುವ ಅಭ್ಯರ್ಥಿಗಳಿಗೆ ಬೆಂಗಳೂರು, ಪುಣೆ ಮತ್ತು ಹೈದರಾಬಾದ್‌ನಲ್ಲಿ ಕೆಲಸ ಮಾಡಲು ಸುವರ್ಣಾವಕಾಶವಿದೆ ಎಂದರು.

ಅರ್ಹತೆ ಮತ್ತು ಉಚಿತ ನೋಂದಣಿ: 10ನೇ ತರಗತಿ, ಪಿಯುಸಿ, ಐಟಿಐ, ಡಿಪ್ಲೊಮಾ, ಬಿ.ಇ/ಬಿ.ಟೆಕ್ ಹಾಗೂ ಯಾವುದೇ ಪದವಿ ಮುಗಿಸಿರುವ ಅಭ್ಯರ್ಥಿಗಳು ಅರ್ಹರಾಗಿದ್ದಾರೆ. ಅಭ್ಯರ್ಥಿಗಳಿಗೆ ಮೊದಲ ಹಂತದಲ್ಲಿ ಸಂಪೂರ್ಣ ಉಚಿತವಾಗಿ ಆನ್‌ಲೈನ್ ನೋಂದಣಿಗೆ ಅವಕಾಶ ನೀಡಲಾಗಿದೆ. ಸಾಕಷ್ಟು ಸಂಖ್ಯೆಯಲ್ಲಿ ಅಭ್ಯರ್ಥಿಗಳು ನೋಂದಣಿಯಾದ ಬಳಿಕ ಮೇಳದ ನಿಖರ ದಿನಾಂಕ ಮತ್ತು ಸ್ಥಳವನ್ನು ಪ್ರಕಟಿಸಲಾಗುವುದು. ಆರಂಭಿಕ ಸುತ್ತಿನ ಸಂದರ್ಶನಗಳು ಆನ್‌ಲೈನ್ ಮೂಲಕವೇ ನಡೆಯಲಿದ್ದು, ಶಾರ್ಟ್‌ಲಿಸ್ಟ್ ಆದವರಿಗೆ ಮಾತ್ರ ನೇರ ಸಂದರ್ಶನವಿರಲಿದೆ ಎಂದು ಹೇಳಿದರು. 10ನೇ, 12ನೇ, ITI, ಡಿಪ್ಲೊಮಾ ಹಾಗೂ ಪದವೀಧರರಿಗೆ, https://forms.gle/8XCtqKmTmd7KZrW77 ಈ ನೋಂದಣಿ ಲಿಂಕ್ ಬಳಸಬೇಕು. B.E / B.Tech ವಿದ್ಯಾರ್ಥಿಗಳಿಗೆ https://forms.gle/ikTzHpfLRN8KqJUg8 ಈ ನೋಂದಣಿ ಲಿಂಕ್ ಬಳಸಿಕೊಂಡು ನೋಡಣಿ ಮಾಡಿಕೊಳ್ಳಬಹುದು.



ಶೀಘ್ರದಲ್ಲೇ 56,000 ಸರ್ಕಾರಿ ಹುದ್ದೆಗಳ ಭರ್ತಿ:

ಇದೇ ಸಂದರ್ಭದಲ್ಲಿ ಮಾತನಾಡಿದ ಸಚಿವರು, ರಾಜ್ಯದಲ್ಲಿ ಖಾಲಿ ಇರುವ 56,000ಕ್ಕೂ ಹೆಚ್ಚು ಸರ್ಕಾರಿ ಹುದ್ದೆಗಳನ್ನು ನಿಗದಿತ ಕಾಲಮಿತಿಯೊಳಗೆ ಭರ್ತಿ ಮಾಡಲು ಮುಖ್ಯ ಕಾರ್ಯದರ್ಶಿಗಳ ನೇತೃತ್ವದಲ್ಲಿ ಸಮಿತಿ ರಚಿಸಲಾಗಿದ್ದು, ಶೀಘ್ರದಲ್ಲೇ ನೇಮಕಾತಿ ಪ್ರಕ್ರಿಯೆ ಆರಂಭವಾಗಲಿದೆ ಎಂದರು. ಅಲ್ಲದೆ, ಕನ್ನಡಿಗರಿಗೆ ಶೇ. 80 ರಷ್ಟು ಉದ್ಯೋಗ ಸಿಗುತ್ತಿರುವುದನ್ನು ಸರ್ಕಾರ ಖಚಿತಪಡಿಸಿಕೊಳ್ಳುತ್ತಿದೆ ಎಂದು ಸ್ಪಷ್ಟಪಡಿಸಿದರು.

ಈ ಸಂದರ್ಭದಲ್ಲಿ ಕಲಬುರಗಿ ಜಿಲ್ಲಾಧಿಕಾರಿ ಇಕ್ರಮ್ ಶರೀಫ್, ಪತ್ರಕರ್ತರ ಸಂಘದ ಅಧ್ಯಕ್ಷ ಬಾಬುರಾವ ಯಡ್ರಾಮಿ, ಪ್ರಧಾನ ಕಾರ್ಯದರ್ಶಿ ಭೀಮಾಶಂಕರ್ ಫಿರೋಜಾಬಾದ್, ಉಪಾಧ್ಯಕ್ಷರುಗಳಾದ ಶಿವರಂಜನ್ ಸತ್ಯಂಪೇಟ್, ಹಣಮಂತರಾವ್ ಬೈರಾಮಡಗಿ, ಅರುಣ್ ಕದಂ, ಕಾರ್ಯದರ್ಶಿ ಅನಿಲ್ ಸ್ವಾಮಿ, ಸದಸ್ಯ ಶರಣು ಜಿಡಗಿ ಉಪಸ್ಥಿತರಿದ್ದರು.

# ವಿದ್ಯಾರ್ಥಿನಿಯರಿಗೆ 50 ಉಚಿತ ಸೈಕಲ್ ವಿತರಣೆ, ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಆನೆ ಬಲ : ಸಿಇಒ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜೂ. 24 : ಶಿಕ್ಷಣದ ಹಾದಿಯಲ್ಲಿ ಸೈಕಲ್ ಹೆಣ್ಣು ಮಕ್ಕಳಿಗೆ ಆನೆ ಬಲ ತಂದುಕೊಡುತ್ತದೆ. ಈ ಸೈಕಲಗಳು ವಿದ್ಯಾರ್ಥಿನಿಯರ ಉಜ್ವಲ ಭವಿಷ್ಯಕ್ಕೆ ರೆಕ್ಕೆಗಳಾಗಲಿ ಎಂದು ಯಾದಗಿರಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ ಹೇಳಿದರು.

ಅವರು ಇತ್ತೀಚಿಗೆ ಯಾದಗಿರಿ ಜಿಲ್ಲಾ ಪಂಚಾಯತ್ ಹಾಗೂ ಭಾರತೀಯ ಸ್ಟೇಟ್ ಬ್ಯಾಂಕ್ (ಎಸ್.ಬಿ.ಐ) ಜಿಲ್ಲಾ ಅಗ್ರಣೀಯ ಬ್ಯಾಂಕ್ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶೇಷ ಕಾರ್ಯಕ್ರಮದಲ್ಲಿ 8 ಮತ್ತು 9ನೇ ತರಗತಿಯ ಒಟ್ಟು 50 ಅರ್ಹ ಕಿಶೋರಿ ವಿದ್ಯಾರ್ಥಿನಿಯರಿಗೆ ಉಚಿತ ಸೈಕಲ್‌ಗಳನ್ನು ವಿತರಿಸಿ ಮಾತನಾಡಿದರು.

ದಿನಾಲೂ ಗಂಟೆಗಟ್ಟಲೆ ನಡೆದುಕೊಂಡುವ ಹೋಗುವ ಸಮಯ ಉಳಿದು ಆ ಸಮಯವನ್ನು ವಿದ್ಯಾರ್ಥಿನಿಯರು ಓದಿಗೆ ಹಾಗೂ ವಿಶ್ರಾಂತಿಗೆ ಬಳಸಬಹುದೆಂದರು.

ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮರಿಯಪ್ಪ ಅವರು ಮಾತನಾಡಿ, ನೆರೆದಿದ್ದ ಎಲ್ಲರಿಗೂ ಕಾನೂನು ಪ್ರಜ್ಞೆ, ಸುರಕ್ಷತೆ ಹಾಗೂ ಉನ್ನತ ಸಾಮಾಜಿಕ ಮೌಲ್ಯಗಳನ್ನು ಬಿತ್ತುವ ವಿಶೇಷ ಪ್ರಮಾಣ ವಚನ ಬೋಧಿಸಿದರು. ನಂತರ ಹೆಣ್ಣು ಮಕ್ಕಳು ಶಿಕ್ಷಣದ ಜೊತೆಗೆ ಸಮಾಜದಲ್ಲಿ ಹೇಗೆ ಸಶಕ್ತರಾಗಬೇಕು ಮತ್ತು ಸ್ವಾವಲಂಬಿಗಳಾಗಬೇಕು ಎಂಬ ಪ್ರೇರಣಾತ್ಮಕ ವಿಚಾರಗಳನ್ನು ಹಂಚಿಕೊಂಡರು.



ಮಾರ್ಗದರ್ಶಿ ಸಂಸ್ಥೆಯ ನಿರ್ದೇಶಕರಾದ ಆನಂದ್ ರಾಜ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಹೆಣ್ಣು ಮಕ್ಕಳ ಶಿಕ್ಷಣ ಮತ್ತು ಸ್ವಾವಲಂಬನೆಗೆ ಈ ಯೋಜನೆ ಹೇಗೆ ಪೂರಕವಾಗಿದೆ ಎಂಬುದನ್ನು ಅತ್ಯಂತ ಸ್ಪಷ್ಟವಾಗಿ ವಿವರಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ತಿಪ್ಪಣ್ಣ ಶಿರಸಗಿ ಕಾರ್ಯಕ್ರಮದ ಕುರಿತು ಶ್ಲಾಘಿಸಿ, ಮಕ್ಕಳಿಗೆ ಮತ್ತು ಪೋಷಕರಿಗೆ ಇಲಾಖೆಯ ವಿವಿಧ ಸಹಾಯವಾಣಿ ಸಂಖ್ಯೆಗಳ ಕುರಿತು ಪ್ರಮುಖ ಮಾಹಿತಿ ನೀಡಿದರು.

ಯಾದಗಿರಿ ಎಸ್‌ಬಿಐ ಮುಖ್ಯಸ್ಥರಾದ ಶಾಂತಿ ಭಾರತಿ ಅವರು ಹೆಣ್ಣುಮಕ್ಕಳ ಪ್ರಗತಿಗಾಗಿ ಎಸ್.ಬಿ.ಐ ಬ್ಯಾಂಕ್ ತಂಡವು ಸದಾ ಸೇವೆಗೆ ಸಿದ್ಧವಿದೆ ಎಂದು ಭರವಸೆ ನೀಡಿದರು.

50 ಸೈಕಲ್‌ಗಳ ವಿತರಣೆ: ಕಾರ್ಯಕ್ರಮದ ಕೊನೆಯಲ್ಲಿ ಪೋಷಕರು ಹಾಗೂ ಶಿಕ್ಷಕರೊಂದಿಗೆ ಆಗಮಿಸಿದ್ದ 8 ಮತ್ತು 9ನೇ ತರಗತಿಯ ಅರ್ಹ ಕಿಶೋರಿ ವಿದ್ಯಾರ್ಥಿನಿಯರಿಗೆ ವೇದಿಕೆಯ ಮೇಲಿದ್ದ ಎಲ್ಲಾ ಗಣ್ಯರ ಹಸ್ತಾಂತರದ ಮೂಲಕ ಒಟ್ಟು 50 ಸೈಕಲಗಳನ್ನು ಉಚಿತವಾಗಿ ವಿತರಿಸಿ ಶುಭ ಹಾರೈಸಲಾಯಿತು.

ಈ ಕಾರ್ಯಕ್ರಮದಲ್ಲಿ ಎಸ್.ಬಿ.ಐ ಲೀಡ್ ಬ್ಯಾಂಕ್ ಜಿಲ್ಲಾ ವ್ಯವಸ್ಥಾಪಕರಾದ ಸುನಿಲ್ ಸತ್ಯನಾರಾಯಣ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪಲ್ಸ್ ಪೋಲಿಯೋ ಕಾರ್ಯಕ್ರಮ ಯಶಸ್ಸಿಗೆ ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ಮಾಡಿ:ಸುರೇಶ ಅಂಕಲಗಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜೂ. 24: ಪೋಲಿಯೋ ರೋಗವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ಮಾಡಬೇಕು ಮತ್ತು ಯಾವುದೇ ಮಗು ಲಸಿಕೆಯಿಂದ ವಂಚಿತರಾಗದಂತೆ ನೋಡಿಕೊಳ್ಳಬೇಕು ಎಂದು ತಾಲೂಕ ತಹಶೀಲ್ದಾರರಾದ ಸುರೇಶ ಅಂಕಲಗಿ ಅವರು ಸಲಹೆ ನೀಡಿದರು.

ಅವರು ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಅಂಗವಾಗಿ ಯಾದಗಿರಿ ಹಾಗೂ ಗುರುಮಿಠಕಲ್ ತಾಲೂಕು ವ್ಯಾಪ್ತಿಯಲ್ಲಿ 0 ಯಿಂದ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಹನಿ ಹಾಕುವ ಕಾರ್ಯಕ್ರಮ ಅಂಗವಾಗಿ ಯಾದಗಿರಿ ತಾಲೂಕು ತಹಶೀಲ್ದಾರರ ಕಚೇರಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದೊಂದಿಗೆ ತಾಲೂಕು ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ದಿನಾಂಕ 28–06–2026 ರಂದು ಬೆಳಗ್ಗೆ 8 ರಿಂದ ಸಾಯಂಕಾಲ 5 ರವರೆಗೆ ಬೂತ್ ಮಟ್ಟದಲ್ಲಿ ಪೋಲಿಯೋ ಹನಿ ಹಾಕಲಾಗುವುದು. ದಿನಾಂಕ 29–06–2026 ರಿಂದ 01–07–2026 ರವರೆಗೆ ಲಸಿಕೆಯಿಂದ ವಂಚಿತರಾದ ಮಕ್ಕಳನ್ನು ಪತ್ತೆಹಚ್ಚಲು ಮನೆ ಮನೆಗೆ ಭೇಟಿ ನೀಡಿ ಪೋಲಿಯೋ ಹನಿ ನೀಡಲಾಗುವುದು ಎಂದು ತಿಳಿಸಿದರು.



ತಾಲೂಕು ಆರೋಗ್ಯ ಅಧಿಕಾರಿಗಳಾದ ಡಾ. ಹಣಮಂತ ರೆಡ್ಡಿ ಮಾತನಾಡಿ, ಯಾದಗಿರಿ ಮತ್ತು ಗುರುಮಿಠಕಲ್ ತಾಲೂಕು ವ್ಯಾಪ್ತಿಯಲ್ಲಿ ಒಟ್ಟು 61,069 ಮಕ್ಕಳನ್ನು ಗುರುತಿಸಲಾಗಿದ್ದು, ಎಲ್ಲರಿಗೂ ಲಸಿಕೆ ತಲುಪಿಸಲು ಇಲಾಖೆ ಸಂಪೂರ್ಣ ಸಿದ್ಧತೆ ಮಾಡಿಕೊಂಡಿದೆ. ಕಾರ್ಯಕ್ರಮದ ಯಶಸ್ಸಿಗಾಗಿ ಇಬ್ಬರು ಸದಸ್ಯರನ್ನೊಳಗೊಂಡ 248 ತಂಡಗಳನ್ನು (ಒಟ್ಟು 496 ಸದಸ್ಯರು) ನಿಯೋಜಿಸಲಾಗಿದೆ. ಹಾಗೂ ಈ ತಂಡಗಳ ಮೇಲ್ವಿಚಾರಣೆಗಾಗಿ 46 ಮೇಲ್ವಿಚಾರಕರನ್ನು ನೇಮಕ ಮಾಡಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ "ಪ್ರತಿ ಬಾರಿ ಎರಡು ಹನಿಗಳು" ಪೋಲಿಯೋ ವಿರುದ್ಧ ನಿರಂತರ ಗೆಲುವು ಎಂಬ ಭಿತ್ತಿ ಪತ್ರ ಬಿಡುಗಡೆಗೊಳಿಸಲಾಯಿತು.

ಈ ಸಭೆಯಲ್ಲಿ ತಾಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು, ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು. ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿಗಳಾದ ತುಳಸಿರಾಮ ಚವ್ಹಾಣ ಅವರು ಸ್ವಾಗತಿಸಿದರೆ, ಹಿರಿಯ ಆರೋಗ್ಯ ನಿರೀಕ್ಷಕಾಧಿಕಾರಿಗಳಾದ ಹಣಮಂತರಾವ್ ಕುಲಕರ್ಣಿ ಅವರು ವಂದನಾರ್ಪಣೆ ಮಾಡಿದರು.

# ಪತ್ರಿಕೋದ್ಯಮ ಕೇವಲ ಸಂಘಟನೆಗಳಿಗೆ ಸೀಮಿತವಲ್ಲ:ರಾಹುಲ್ ಉದ್ಧಾ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ

ಪತ್ರಿಕೋದ್ಯಮ ಕೇವಲ ಸಂಘಟನೆಗಳಿಗೆ ಸೀಮಿತವಲ್ಲ. ರಾಜ್ಯದಲ್ಲಿ ಅದೆಷ್ಟೋ ಅಸಂಘಟಿತ ಪತ್ರಕರ್ತರು ಇದ್ದಾರೆ. ಇತಿಹಾಸದಲ್ಲಿ ಪತ್ರಿಕೋದ್ಯಮ ತಮ್ಮ ಬೆಳವಣಿಗೆಗೆ ವಯಕ್ತಿಕ ಜೀವನವನ್ನು ಲೆಕ್ಕಿಸದೆಅನೇಕ ಪತ್ರಕರ್ತರು ಸೇವೆ ಸಲ್ಲಿಸಿದ್ದಾರೆ. ಸಮಾಜದ ಏಳಿಗೆಗೆ ಶ್ರಮಿಸುವ ಪ್ರತಿಯೊಬ್ಬರೂ ಪತ್ರಕರ್ತರೇ ಎಂದು ದಲಿತ ಸಂಘರ್ಷ ಸಮಿತಿ(ಅಂಬೇಡ್ಕರ್ ವಾದ) ತಾಲ್ಲೂಕಾ ಸಂಚಾಲಕರಾದ ರಾಹುಲ್ ಉದ್ಧಾ ತಿಳಿಸಿದರು. ನೂತನವಾಗಿ ಪತ್ರಕರ್ತ ಸಂಘದ ತಾಲ್ಲೂಕಾ ಅಧ್ಯಕ್ಷರಾಗಿ ಸಂಜೀವಕುಮಾರ ಜುನ್ನಾ ಹಾಗೂ ಪ್ರಧಾನಕಾರ್ಯದರ್ಶಿಯಾಗಿ ಗುಂಡು ಅತಿವಾಳ ಆಯ್ಕೆಯಾದ ಹಿನ್ನಲೆಯಲ್ಲಿ ಪಟ್ಟಣದ ಪ್ರವಾಸಿ ಮಂದಿರದಆವರಣದಲ್ಲಿ ಸನ್ಮಾನಿಸಿ ಮಾತನಾಡುತ್ತಾ ತೀಳಿಸಿದರು. ಈ ಮೊದಲು ಪತ್ರಿಕೋದ್ಯಮವು ಪತ್ರಿಕಾ ರಂಗವಾಗಿತ್ತು. ಆದರೆ ವಿದ್ಯುನ್ಮಾನಗಳ ಬೆಳವಣಿಗೆಯಿಂದ ಪತ್ರಿಕಾರಂಗವೂ ಪತ್ರಿಕೋದ್ಯಮವಾಗಿ ಮಾರ್ಪಟ್ಟಿತು. ಪತ್ರಿಕೋದ್ಯಮ ಬೆಳವಣಿಗೆ ಕಂಡಿದ್ದು ಹಿರಿಯ ಪತ್ರಕರ್ತರಿಂದ, ಅವರು ಕಾರ್ಯ ನಿರ್ವಹಿಸುವ ಸಂದರ್ಭದಲ್ಲಿ ಪತ್ರಿಕಾರಂಗವಾಗಿತ್ತು. ಅವರು ಯಾವುದೇ ಅಪೇಕ್ಷೆ ಇಲ್ಲದೆ ಅನೇಕ ಕಷ್ಟಗಳ ನಡುವೆ ಪತ್ರಿಕೋದ್ಯಮದಲ್ಲಿ ಸೇವೆ ಸಲ್ಲಿಸಿದ್ದಾರೆ ಅಂತಹ ಹಿರಿಯ ಪತ್ರಕರ್ತರನ್ನು ಗೌರವದಿಂದ ಕಾಣಬೇಕು ಎಂದರು. ರಾಜ್ಯ ಸಂಘಟನಾ ಸಂಚಾಲಕರಾದ ರಮೇಶ ಡಾಕುಳಗಿ ಮಾತನಾಡಿ, ಈ ಮೊದಲು ಪತ್ರಿಕೋದ್ಯಮವು ಪತ್ರಿಕಾ ರಂಗವಾಗಿತ್ತು. ಆದರೆ ವಿದ್ಯುನ್ಮಾನಗಳ ಬೆಳವಣಿಗೆಯಿಂದ ಪತ್ರಿಕಾರಂಗವೂ ಪತ್ರಿಕೋದ್ಯಮವಾಗಿ ಮಾರ್ಪಟ್ಟಿತು. ಪತ್ರಿಕೋದ್ಯಮ ಬೆಳವಣಿಗೆ ಕಂಡಿದ್ದು ಹಿರಿಯ ಪತ್ರಕರ್ತರಿಂದ, ಅವರು ಕಾರ್ಯ ನಿರ್ವಹಿಸುವ ಸಂದರ್ಭದಲ್ಲಿ ಪತ್ರಿಕಾರಂಗವಾಗಿತ್ತು. ಅವರು ಯಾವುದೇ ಅಪೇಕ್ಷೆ ಇಲ್ಲದೆ ಅನೇಕ ಕಷ್ಟಗಳ ನಡುವೆ ಪತ್ರಿಕೋದ್ಯಮದಲ್ಲಿ ಸೇವೆ ಸಲ್ಲಿಸಿದ್ದಾರೆ ಅಂತಹ ಹಿರಿಯ ಪತ್ರಕರ್ತರನ್ನು ಗೌರವದಿಂದ ಕಾಣಬೇಕು ಎಂದರು. ಪತ್ರಕರ್ತರು ಯಾವುದೇ ಸಮುದಾಯ ಹಾಗೂ ಪಕ್ಷದ ಪರವಾಗಿ ವರದಿಗಳನ್ನು ಮಾಡದೆ ಸಮಾಜಕ್ಕೆ ಕೊಡುಗೆ ನೀಡುವ ನಿಟ್ಟಿನಲ್ಲಿ ಸತ್ಯ, ನ್ಯಾಯ, ನೀತಿ ಮೂಲಕ ಪಾರದರ್ಶಕವಾಗಿ ವರದಿ ಮಾಡಬೇಕು ಎಂದು ತಿಳಿಸಿದರು. ಪತ್ರಿಕಾ ರಂಗದಲ್ಲಿ ಪ್ರತಿಯೊಬ್ಬರೂ ತಮ್ಮ ತಮ್ಮ ಜವಾಬ್ದಾರಿ ನಿರ್ವಹಿಸುತ್ತಾರೆ. ಅದ್ರಲ್ಲೂ ಪತ್ರಿಕಾ ವಿತರಕರಿಗೆ ಬಹಳ ಜವಾಬ್ದಾರಿಯಿದೆ ಎಂದು ತಿಳಿಸಿದರು. ಜಿಲ್ಲಾ ಸಂಚಾಲಕರಮೇಶ ಮಂದಕನಳ್ಳಿ, ಮಲ್ಲಿಕಾರ್ಜುನ್ ಶರ್ಮಾ, ವಿಠಲ್ ಲಾಡ್ಕರ್, ಸುಧಾಕರ್ ಶಿಂಧೆ, ವಿನೋದ್ ಮೆಲ್ಕೇರಿ, ಶ್ರೀನಿವಾಸ್ ಕಟ್ಟೀಮನಿ, ಮೋಹನ್ ಬೀರನಳ್ಳಿ, ಬಕ್ಕಪ್ಪ ಇಂದ್ರನಗರ್, ಆನಂದ್ ಮಸಿಮಾಡೆ, ಈಶ್ವರ್ ಮೆಲ್ಕೆರಿ, ಶಾಕಿರ್, ರಾಮ್ ದಂಡೆ. ಅನೇಕರು ಉಪಸ್ಥಿತರಿದ್ದರು.



# ತೋಟಗಾರಿಕೆ ಇಲಾಖೆ: ವಿವಿಧ ಯೋಜನೆಗಳಡಿ ಸಹಾಯಧನ ಪಡೆಯಲು ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.24– ತೋಟಗಾರಿಕೆ ಇಲಾಖೆಯ ವತಿಯಿಂದ 2026–27ನೇ ಸಾಲಿಗೆ ಇಲಾಖೆಯ ಕೆಳಕಂಡ ವಿವಿಧ ಯೋಜನೆಯಡಿ ಸಹಾಯಧನ ಪಡೆಯಲು ಜಿಲ್ಲೆಯ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು (ಜಿ.ಪಂ), ಚಿತ್ತಾಪೂರ. ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆ, ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ, ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ, ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆ, ರಾಷ್ಟ್ರೀಯ ಎಣ್ಣೆ ತಾಳೆ ಬೆಳೆ ಯೋಜನೆಯಡಿ ಹೊಸ ಪ್ರದೇಶ ವಿಸ್ತರಣೆಯಡಿ ದಾಳಿಂಬೆ, ಸೀಬೆ, ಮಾವು, ಲಿಂಬೆ, ಡ್ರಾಗನ್ ಫ್ರೂಟ್, ನುಗ್ಗೆ, ಸೀತಾಫಲ, ಇತರೆ ಹಣ್ಣಿನ ಬೆಳೆಗಳಿಗೆ ಮತ್ತು ಪ್ಲಾಸ್ಟಿಕ್ ಮಲ್ಚಿಂಗ್, ನೆರಳು ಪರದೆ ಘಟಕ, ವೈಯಕ್ತಿಕ ಕೃಷಿ ಹೊಂಡ ಘಟಕ, ಕೊಯ್ಲೋತ್ತರ ನಿರ್ವಹಣೆ ಯೋಜನೆಯಡಿ ಪ್ಯಾಕ್ ಹೌಸ್ ಘಟಕ, ಈರುಳ್ಳಿ ಶೇಖರಣಾ ಘಟಕ, ಯಾತ್ರೀಕರಣ ಯೋಜನೆಯಡಿ ಮಿನಿ ಟ್ರ್ಯಾಕ್ಟರ್ ಗೆ ಸಹಾಯಧನ ಮತ್ತು ಹನಿ ನೀರಾವರಿ ಯೋಜನೆಯಡಿ ಎಲ್ಲಾ ವರ್ಗದ ರೈತರಿಗೆ 90% ಸಹಾಯಧನ ಕಾರ್ಯಕ್ರಮಗಳಡಿ ಅರ್ಜಿ ಸಲ್ಲಿಸಬಹುದಾಗಿದೆ. ರೈತರು ಅರ್ಜಿ ಸಲ್ಲಿಕೆಗೆ 2026ರ ಜುಲೈ 01 ರಂದು ಕೊನೆಯ ದಿನವಾಗಿದೆ . ಹೆಚ್ಚಿನ ಮಾಹಿತಿಗಾಗಿ ರೈತರು ಸಂಬಂಧಪಟ್ಟ ಆಯಾ ತಾಲೂಕಿನ ಹಿರಿಯ ಸಹಾಯಕ ತೆ–ೂಟಗಾರಿಕೆ ನಿರ್ದೇಶಕರು (ಜಿ.ಪಂ), ಚಿತ್ತಾಪೂರ ಕಛೇರಿಗೆ ಸಂಪರ್ಕಿಸಲು ತಮ್ಮಲ್ಲಿ ಕೋರಲಾಗಿದೆ.

# ಮದಕಟ್ಟಿ: ಟ್ಯಾಂಕರ್ ನೀರು ಪೂರೈಕೆ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ನೀರಿನ ಸಮಸ್ಯೆ ಉದ್ಭವಿಸಿದೆ ಎಂದು ಆರೋಪಿಸಿ ತಾಲ್ಲೂಕಿನ ಮದಕಟ್ಟಿ ಗ್ರಾಮ ಪಂಚಾಯಿತಿ ಕಚೇರಿಗೆ ಶನಿವಾರ ಬೆಳಿಗ್ಗೆ ಬೀಗ ಜಡಿದು ಮಹಿಳೆಯರು ಪ್ರತಿಭಟನೆ ನಡೆಸಿದ್ದ ಹಿನ್ನೆಲೆಯಲ್ಲಿ ಸೋಮವಾರ ಬೆಳಿಗ್ಗೆ ಗ್ರಾಮ ಪಂಚಾಯಿತಿ ವತಿಯಿಂದ ಗ್ರಾಮದಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಸಲಾಯಿತು.

ಈ ವೇಳೆ ಮಾತನಾಡಿದ ಮದಕಟ್ಟಿ ಪಿಡಿಒ ಅನುರಾಜ್ ಪೂಜಾರಿ, ಮದಕಟ್ಟಿ ಗ್ರಾಮದಲ್ಲಿ ಜಲ ಮೂಲಗಳ ಕೊರತೆ ಇಲ್ಲ. ಆದರೆ, ಪದೇ ಪದೇ ವಿದ್ಯುತ್ ಪರಿವರ್ತಕಗಳು ಕೈ ಕೊಡುವುದರಿಂದ ಗ್ರಾಮದಲ್ಲಿ ಸಕಾಲಕ್ಕೆ ಸಮರ್ಪಕವಾಗಿ ವಿದ್ಯುತ್ ಪೂರೈಕೆ ಆಗುತ್ತಿಲ್ಲ. ಹಾಗಾಗಿ ನೀರಿನ ಸಮಸ್ಯೆ ಉಂಟಾಗಿದೆ.

ಗ್ರಾಮದ ಜನತಾ ಕಾಲೋನಿ, ವಠಾರ ಹಾಗೂ ಶೇಕಬ್ ವಾರ್ಡ್ ನಲ್ಲಿ ಸಾರ್ವಜನಿಕರಿಗೆ ನೀರು ಪೂರೈಸಲಾಗಿದೆ. ವಿದ್ಯುತ್ ಸಮಸ್ಯೆ ಪರಿಹಾರ ಆಗುವವರೆಗೂ ಗ್ರಾಮದಲ್ಲಿ ಪ್ರತಿದಿನ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುವುದು ಎಂದರು.

ಕರವಸೂಲಿಗಾರ ಪಾಂಡುರಂಗ, ಕಾರ್ಯದರ್ಶಿ ನಾಗೇಂದ್ರ ಇದ್ದರು.

# ಸಿ.ಸಿ. ರಸ್ತೆ ಕಾಮಗಾರಿ ಕಳಪೆ, ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಜರುಗಿಸಿ : ನಮ್ಮ ಕರವೇ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ



ತಾಲೂಕಿನ ಬೆಳ್ಳಿಹಾಳ ಗ್ರಾಮದಲ್ಲಿ 2025-26ನೇ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ಅನುದಾನ ರೂ.50 ಲಕ್ಷ ರೂಪಾಯಿಗಳಲ್ಲಿ ಹಮ್ಮಿಕೊಂಡಿರುವ ಸಿ ಸಿ ರಸ್ತೆ ಕಾಮಗಾರಿಯು ಕಳಪೆ ಮಟ್ಟದಲ್ಲಿ ಕೂಡಿದ್ದು ಸಂಬಂಧ ಪಟ್ಟ ಅಧಿಕಾರಿಗಳು ಸಹ ಕಣ್ಣಿದ್ದು ಕುರುಡರಂತೆ ನಿರ್ಲಕ್ಷ್ಯವಹಿಸಿದ್ದು ಕೂಡಲೇ ಅಧಿಕಾರಿಗಳ ವಿರುದ್ದ ಕಠಿಣ ಕ್ರಮ ಕೈಗೊಳ್ಳುವಂತೆ ನಮ್ಮ ಕರ್ನಾಟಕ ರಕ್ಷಣಾ ವೇದಿಕೆ ಮುಖಂಡರು ಕೆ ಆರ್ ಐ ಡಿ ಎಲ್ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು. ಕಾಮಗಾರಿಗೆ ಸರಿಯಾದ ಪ್ರಮಾಣದಂತೆ ಸಿಮೆಂಟ್ ಬಳಸದೆ ಕಳಪೆ ಮಟ್ಟದಲ್ಲಿರುವ ಸಾಮಗ್ರಿಗಳನ್ನು ಬಳಸಿ ಕಾಮಗಾರಿ ನಿರ್ವಹಿಸುತ್ತಿದ್ದು ಮತ್ತು ಅಂದಾಜು ಪಟ್ಟಿಯಲ್ಲಿರುವ ಯಾವುದೇ ಅಂಶವನ್ನು ಸರಿಯಾಗಿ ಪಾಲನೆ ಮಾಡದೆ ಅವರ ಮನಸ್ಸಿಗೆ ಬಂದಂತೆ ಕಾಮಗಾರಿಯನ್ನು ನಡೆಸುತ್ತಿದ್ದು ಕಾಮಗಾರಿ ಸ್ಥಳ ಪರಿಶೀಲನೆ ಮಾಡಿ ಮತ್ತು ಕಾಮಗಾರಿ ನಿರ್ವಹಿಸಲು ಕಾಂಕ್ರೀಟ್ ಹಾಕುವ ಸಂದರ್ಭದಲ್ಲಿಯು ಕೆ.ಆರ್.ಡಿ.ಎಲ್ ನಿಂದ ಯಾವುದೇ ಇಂಜಿನಿಯರು ಇರುವುದಿಲ್ಲ. ಈ ಕೂಡಲೇ ಸ್ಥಳ ಪರಿಶೀಲನೆ ಮಾಡಿ ಗುಣಮಟ್ಟದ ಕಾಮಗಾರಿ ನೆಡೆದಿದೆಯೇ ಎಂಬುದನ್ನು ಪರಿಶೀಲನೆ ಮಾಡಿ ತಪ್ಪಿತಸ್ತರ ವಿರುದ್ದ ಬಿಲ್ಲನ್ನು ತಡೆಹಿಡಿಯಲು ಆಗ್ರಹಿಸಿದರು. ಕಾಮಗಾರಿಯನ್ನು ಸರಿಯಾಗಿ ನಿರ್ವಹಿಸದಿದ್ದರೂ ಬಿಲ್ಲನ್ನು ಬಿಡುಗಡೆ ಮಾಡಿದ್ದಲ್ಲಿ ಮುಂದಿನ ಕ್ರಮ ಕೈಕೊಳ್ಳಬೇಕಾಗುತ್ತದೆ.

ಆದ್ದರಿಂದ ಕೂಡಲೇ ಕಾಮಗಾರಿಯ ಗುಣಮಟ್ಟದಿಂದ ನಿರ್ವಹಿಸಲು ಕೆ.ಆರ್.ಐ.ಡಿ.ಲ್.ಗೆ ವಹಿಸಿದ್ದು, ಸದರಿ ಇಲಾಖೆಯ ಯಾವುದೇ ಇಂಜಿನೀಯರ್‌ರಾಗಲೀ, ಗುತ್ತಿಗೆದಾರರಾಗಲೀ ಉಪಸ್ಥಿತಿ ಕಾಮಗಾರಿ ಸ್ಥಳದಲ್ಲಿ ಇರುವುದಿಲ್ಲ. ಕೇವಲ ಸುಪರ್‌ವೈಸರ್ ಮುಖಾಂತರ ಕಾಮಗಾರಿ ನಡೆಯುತ್ತಿದೆ. ಆದ್ದರಿಂದ ಬೆಳ್ಳಿಹಾಳ ಗ್ರಾಮದಲ್ಲಿ ಕಳಪೆ ಮಟ್ಟದ ಕಾಮಗಾರಿಯನ್ನು ಕೂಡಲೇ ನಿಲ್ಲಿಸಿ, ಸಂಬಂಧಿಸಿದ ಗುತ್ತಿಗೆದಾರರಿಗೆ ಸೂಚಿಸಿ ಅಗತ್ಯ ಕ್ರಮ ತೆಗೆದುಕೊಂಡು ಸಿ.ಸಿ.ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ನಿರ್ವಹಿಸಲು ಸೂಚಿಸಬೇಕೆಂದು ಅವರು ಆಗ್ರಹಿಸಿದರು.

ಒಂದು ವೇಳೆ ಯಾವುದೇ ಕ್ರಮ ಜರುಗಿಸಿದಿದ್ದಲ್ಲಿ ತಮ್ಮ ಇಲಾಖೆಯ ಮುಂದೆ

ಧರಣಿ ಹಮ್ಮಿಕೊಂಡು ಪ್ರತಿಭಟನೆ ಮಾಡಲಾಗುವುದೆಂದು ಅವರು ಎಚ್ಚರಿಸಿದ್ದಾರೆ.

ಈ ಸಂದರ್ಭದಲ್ಲಿ ನಮ್ಮ ಕರ್ನಾಟಕ ರಕ್ಷಣಾ ವೇದಿಕೆಯ ತಾಲೂಕ ಅಧ್ಯಕ್ಷತಿಮ್ಮಾರೆಡ್ಡಿ ಮುನ್ನೂರು, ಬೀಮೇಶ್ ಆರ್ ನಾಯಕ, ಯಲ್ಲಪ್ಪ ಬಂಡಿ, ಬಸವರಾಜ್, ರವಿ ಗೊರೆಬಾಳ, ಲಾಲಸಾಬ್ ಗೊರೆಬಾಳ, ಮೌನೇಶ್ ರೆಡ್ಡಿ ಸೇರಿದಂತೆ ಇತರರಿದ್ದರು.

# ಗೊರೆಬಾಳ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬೀಳ್ಕೊಡುಗೆ ಹಾಗೂ ಸ್ವಾಗತ



• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸುದೀರ್ಘ ಆರು ವರ್ಷಗಳ ಕಾಲ ಸೇವೆ ಸಲ್ಲಿಸಿ ವರ್ಗಾವಣೆಯಾಗಿರುವ ಮುಖ್ಯೋಪಾಧ್ಯಾಯಿನಿ ವನಮಾಲಾ ಹಾಗೂ ಸಹ ಶಿಕ್ಷಕಿ ಶಾಂತಮ್ಮ ಅವರಿಗೆ ಆತ್ಮೀಯ ಬೀಳ್ಕೊಡುಗೆ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು. ಇದೇ ವೇಳೆ, ಶಾಲೆಯ ನೂತನ ಮುಖ್ಯೋಪಾಧ್ಯಾಯಿನಿಯಾಗಿ ಅಧಿಕಾರ ಸ್ವೀಕರಿಸಿದ ವಸುಧಾ ಅವರನ್ನು ಶಾಲಾ ಸಮುದಾಯದ ವತಿಯಿಂದ ಆತ್ಮೀಯವಾಗಿ ಸ್ವಾಗತಿಸಲಾಯಿತು.

ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ಅಧ್ಯಕ್ಷ ಮಂಜುನಾಥ್ ಹೆಡಿಗಿಬಾಳ ಅವರ ಅಧ್ಯಕ್ಷತೆಯಲ್ಲಿ ಜರುಗಿದ ಕಾರ್ಯಕ್ರಮದಲ್ಲಿ, ನಿರ್ಗಮಿತ ಶಿಕ್ಷಕಿಯರ ಸೇವೆಯನ್ನು ಸ್ಮರಿಸಿ ಗೌರವಿಸಲಾಯಿತು.

ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅಧ್ಯಕ್ಷ ಮಂಜುನಾಥ್ ಹೆಡಿಗಿಬಾಳ, "ವನಮಾಲಾ ಮತ್ತು ಶಾಂತಮ್ಮ ಅವರು ಕಳೆದ ಆರು ವರ್ಷಗಳಿಂದ ಶಾಲೆಗೆ ಸಲ್ಲಿಸಿದ ಸೇವೆ ಅನನ್ಯವಾದುದು. ಶಾಲೆಯ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಮತ್ತು ವಿದ್ಯಾರ್ಥಿಗಳ ಸರ್ವತೋಮುಖ ಪ್ರಗತಿಗೆ ಅವರು ನೀಡಿದ ಕೊಡುಗೆ ಶ್ಲಾಘನೀಯ. ಅವರ ಮುಂದಿನ ಜೀವನ ಸುಖಮಯವಾಗಿರಲಿ," ಎಂದು ಹಾರೈಸಿದರು.

ಕಾರ್ಯಕ್ರಮವನ್ನು ಶ್ರೀಮತಿ ದೇವಿ ಮತ್ತು ಶ್ರೀಮತಿ ಭೂಮಿಕಾ ನಿರೂಪಿಸಿ, ಸ್ವಾಗತಿಸಿದರು.

ಈ ಸಂದರ್ಭದಲ್ಲಿ ಮಾಜಿ ಎಪಿಎಂಸಿ ಸದಸ್ಯ ಎಂ. ರಂಗನಗೌಡ, ಕಾಂಗ್ರೆಸ್ ಮುಖಂಡ ಆರ್. ಪಾಲಾಕ್ಷಗೌಡ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಅಶೋಕ ಮೆಗಳಮನಿ ಸೇರಿದಂತೆ ಎಸ್‌ಡಿಎಂಸಿ ಸದಸ್ಯರುಗಳಾದ ವೀರೇಶ್, ವೆಂಕಟೇಶ್, ಆನಂದಯ್ಯ, ಅಮರೇಶ್, ಸರೋಜಿನಿ, ರೇಖಾ, ವಸುಧಾ, ಚಾಮುಂಡಿ, ನಾಗರತ್ನ, ಪಾರ್ವತಿ, ರಾಮಕೃಷ್ಣ, ಪ್ರೌಢಶಾಲೆಯ ಶಿಕ್ಷಕರು, ಶಾಲೆಯ ಬಿಸಿಯೂಟ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅತಿಥಿ ಶಿಕ್ಷಕರ 2025-26ನೇ ಸಾಲಿನ ಹತ್ತು ತಿಂಗಳ ಬಾಕಿ ವೇತನ ಬಿಡುಗಡೆಗೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ



ಜೂ.24– ಅಕ್ಷರ ಅವಿಷ್ಕಾರ ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಇ ಸಿ ಸಿ ಇ ಮತ್ತು ದ್ವಿ ಬಾಷಾ ತರಗತಿಯಲ್ಲಿ ಬೋಧನೆ ಮಾಡುತ್ತಿರುವ ಲಿಂಗಸಗೂರ ಹಾಗೂ ಮಸ್ಕಿ ತಾಲೂಕಿನ ಅತಿಥಿ ಶಿಕ್ಷಕರ 2025–26ನೇ ಸಾಲಿನ ಹತ್ತು ತಿಂಗಳ ಬಾಕಿ ವೇತನ ಬಿಡುಗಡೆಗೆ ಆಗ್ರಹಿಸಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಮುಂದೆ ಪ್ರತಿಭಟನೆ ನಡೆಸಿದರು.

ಕೆ ಕೆ ಆರ್ ಡಿ ಬಿ ಅನುದಾನದಲ್ಲಿ ನಡೆಯುತ್ತಿರುವ ಇ ಸಿ ಸಿ ಇ ಮತ್ತು ಬೈಲಿಂಗ್ವಲ್ ಶಾಲೆಗಳಲ್ಲಿ ಬೋಧನೆ ಮಾಡುತ್ತಿರುವ ಅತಿಥಿ ಶಿಕ್ಷಕರಿಗೆ ಕಳೆದ ಹತ್ತು ತಿಂಗಳ ಗೌರವಧನ ಸಂಭಾವನೆ ಬಿಡುಗಡೆಯಾಗದೆ ತಾಲೂಕಿನ ವಿವಿಧ ಆಯ್ದ ಶಾಲೆಗಳಲ್ಲಿ ಅತಿಥಿ ಶಿಕ್ಷಕರಾಗಿ ಗೌರವಧನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸುಮಾರು ಜನ ಅತಿಥಿ ಶಿಕ್ಷಕರು ಗೌರವ ಧನಕ್ಕಾಗಿ ಇಲಾಖೆಯ ಕಾರ್ಯಾಲಯಕ್ಕೆ ಅಲೆದಾಡಿ ಅಲೆದಾಡಿ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಹಲವಾರು ಭಾರಿ ಮನವಿ ಸಲ್ಲಿಸಿದ್ದು ಇಲ್ಲಿಯವರೆಗೂ ಗೌರವಧನ ಸಿಗದೇ ರೊಚ್ಚಿಗೆದ್ದ ಶಿಕ್ಷಕರು ಗೌರವ ಧನವಿಲ್ಲದೆ ಕುಟುಂಬ ನಿರ್ವಹಣೆ ಮಾಡುವುದು ತುಂಬಾ ಕಷ್ಟವಾಗಿದೆ ಕೂಡಲೇ ತಮಗೆ ಗೌರವದನ ಬಿಡುಗಡೆ ಮಾಡುವವರೆಗೂ ಕಚೇರಿ ಬಿಟ್ಟು ಕದಲುವುದಿಲ್ಲವೆಂದು ಕಚೇರಿಯ ಒಳಗಡೆ ಧರಣಿ ಕುಳಿತರು.

ಕ್ಷೇತ್ರ ಶಿಕ್ಷಣಾಧಿಕಾರಿಗಳು ಕಾರ್ಯಾಲಯದಲ್ಲಿ ಇಲ್ಲದೆ ಇರುವುದರಿಂದ ಅವರು ಬರುವವರೆಗೂ ಕಾರ್ಯಾಲಯದ ಮುಂದೆ ತಮ್ಮ ಪ್ರತಿಭಟನೆ ನಡೆಸುತ್ತೆವೆಂದು ಪಟ್ಟು ಹಿಡಿದು ಕಾರ್ಯಾಲಯದ ವ್ಯವಸ್ಥಾಪಕರೊಂದಿಗೆ ವಾಗ್ವಾದ ನಡೆಸಿದರು.

ಪ್ರತಿಭಟನಾಕಾರರನ್ನು ಸಮಾಧಾನ ಪಡಿಸಿದ ಕ್ಷೇತ್ರ ಶಿಕ್ಷಣಾಧಿಕಾರಿ ಕಾರ್ಯಾಲಯದ ವ್ಯವಸ್ಥಾಪಕರಾದ ಅಮರೇಶ್ ಅಳ್ಳಳ್ಳಿ ರವರು ದೂರವಾಣಿ ಮೂಲಕ ಶಿಕ್ಷಣ ಇಲಾಖೆಯ ಜಿಲ್ಲಾ ಉಪ ನಿರ್ದೇಶಕರನ್ನು ಸಂಪರ್ಕಿಸಿದ ನಂತರ ಅವರ ದೂರವಾಣಿ ಕರೆಯ ನಂತರ ಒಂದು ವಾರದೊಳಗೆ ಅಕ್ಷರ ಅವಿಸ್ಕಾರ ಯೋಜನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರಿಗೆ ಗೌರವ ದನ ಬಿಡುಗಡೆ ಮಾಡಲಾಗುವುದೆಂದು ಬರವಸೆ ನೀಡಿದ ನಂತರ ಪ್ರತಿಭಟನೆಯನ್ನು ಹಿಂಪಡೆದರು. ಈ ಸಂದರ್ಭದಲ್ಲಿ ದಲಿತ ಸಂಘಟನೆಯ ಮುಖಂಡರಾದ ಲಿಂಗಪ್ಪ ಪರಂಗಿ, ಶಿವಣ್ಣ, ತಾಲೂಕ ಅತಿಥಿ ಶಿಕ್ಷಕರಾದ ಶ್ವೇತಾ ಗೌಡೂರ, ರೇಷ್ಮಾ ಗುಂಡಸಾಗರ, ಶರಣಮ್ಮ ಯರಡೋಣಿ, ಅಮರಮ್ಮ ನಾಗಲಾಪುರ, ಪೂಜಾ ನಾಗಲಾಪುರ, ಶೋಭಾವೀರಾಪುರ್, ಯಲ್ಲಮ್ಮ ಮಟ್ಟೂರ, ಶರಣಬಸಮ್ಮ ಮುದಗಲ್ ಹೋಬಳಿ ಘಟಕದ ಯಲ್ಲಮ್ಮ, ಶ್ರೀದೇವಿ, ತಿಮ್ಮಣ್ಣ, ಮರಿಯಾ, ವಿಜಯಲಕ್ಷ್ಮಿ, ಗಂಗಮ್ಮ, ಸುವರ್ಣ ಹೊನ್ನಳ್ಳಿ, ಗೀತಾ, ಶಿಲ್ಪ ಶಿಲ್ಪಾ, ಗಂಗಮ್ಮ ಮಾವಿನಬಾವಿ, ಸೇರಿದಂತೆ ಹಲವಾರು ಅತಿಥಿ ಶಿಕ್ಷಕಿಯರು ಪಾಲ್ಗೊಂಡಿದ್ದರು.

# ಬೆಳೆ ವಿಮೆ ಪಡೆದುಕೊಳ್ಳಲು ರೈತರಲ್ಲಿ ಮನವಿ ಮಾಡಿದ ಕೃಷಿ ಇಲಾಖೆ

• ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ



ಪ್ರಸ್ತುತ ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳು ಬಸವನ ಬಾಗೇವಾಡಿ, ಕೊಲಾರ ಮತ್ತು ನಿಡಗುಂದಿ ತಾಲೂಕುಗಳಲ್ಲಿ ಆರಂಭವಾಗಿರುತ್ತವೆ. ರೈತರು ತಮ್ಮ ಬೆಳೆಗಳನ್ನು ಪ್ರಕೃತಿ ವಿಕೋಪಗಳಿಂದ ರಕ್ಷಿಸಿಕೊಳ್ಳಲು ಬೆಳೆ ವಿಮೆ ಮಾಡಿಸಿಕೊಳ್ಳುವುದು ಅತ್ಯಂತ ಮಹತ್ವದ್ದು ಮತ್ತು ಅಗತ್ಯವಾಗಿರುತ್ತದೆ ಎಂದು ಪಟ್ಟಣದ ಕೃಷಿ ಸಹಾಯಕ ನಿರ್ದೇಶಕ ಅಮಗೊಂಡ ಪಿ ಬಿರಾದಾರ ಬುಧುವಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಯೋಗದಲ್ಲಿ ಕರ್ನಾಟಕ ರಾಜ್ಯ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯಡಿ ರೈತರು ತಮ್ಮ ಬೆಳೆಗಳಿಗೆ ವಿಮೆ ಮಾಡಿಸಿಕೊಳ್ಳಬಹುದಾಗಿದೆ. ಇತ್ತೀಚಿನ ವರ್ಷಗಳಲ್ಲಿ ಅನಿಯಮಿತ ಮಳೆ, ಬರ, ಗಾಳಿಮಳೆ, ಪ್ರವಾಹ, ಕೀಟ ಹಾಗೂ ರೋಗಬಾಧೆ ಮುಂತಾದ ಕಾರಣಗಳಿಂದ ರೈತರು ಅಪಾರ ನಷ್ಟ ಅನುಭವಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಬೆಳೆ ವಿಮೆ ರೈತರಿಗೆ ಆರ್ಥಿಕ ನೆರವು ಒದಗಿಸಿ ಕೃಷಿಯಲ್ಲಿ ಸ್ಥಿರತೆ ಕಾಪಾಡಲು ಸಹಕಾರಿಯಾಗುತ್ತದೆ. 2026 ಮುಂಗಾರು ಹಂಗಾಮಿಗೆ ಬಸವನ ಬಾಗೇವಾಡಿ ತಾಲೂಕಿನಲ್ಲಿ ತೊಗರಿ, ಮುಸಕಿನಜೋಳ, ಈರುಳ್ಳಿ, ಸಜ್ಜೆ ಮತ್ತು ಸೂರ್ಯಕಾಂತಿ, ಹತ್ತಿ; ನಿಡಗುಂದಿ ತಾಲೂಕಿನಲ್ಲಿ ತೊಗರಿ, ಮುಸಕಿನಜೋಳ, ಈರುಳ್ಳಿ ಮತ್ತು ಸೂರ್ಯಕಾಂತಿ, ಕೋಲಾರ ತಾಲೂಕಿನಲ್ಲಿ ತೊಗರಿ, ಮುಸಕಿನಜೋಳ, ಈರುಳ್ಳಿ ಮತ್ತು ಸಜ್ಜೆ ಅಧಿಸೂಚಿತ ಬೆಳೆಗಳನ್ನು ವಿಮಾ ವ್ಯಾಪ್ತಿಗೆ ಒಳಪಡಿಸಲಾಗಿದೆ. ಬೆಳೆ ಸಾಲ ಪಡೆದ ಮತ್ತು ಪಡೆ-ಯದ ಎಲ್ಲಾ ರೈತರು ಯೋಜನೆಯ ಸೌಲಭ್ಯ ಪಡೆಯಬಹುದು ನಮ್ಮ ಜಿಲ್ಲೆಗೆ ಎಸ್.ಬಿ.ಆಯ್, ಜನರಲ್ ಇನ್ಸೂರನ್ಸ್ ಕಂಪನಿ ಆಯ್ಕೆಯಾಗಿದೆ.

ತೋಗರಿ (ಮಳೆಯಾಶ್ರಿತ), ತೋಗರಿ (ನೀರಾವರಿ) ಮುಸಕಿನ ಜೋಳ (ನೀರಾವರಿ), ಮುಸಕಿನ ಜೋಳ (ಮಳೆಯಾಶ್ರಿತ), ಸಜ್ಜೆ (ಮಳೆಯಾಶ್ರಿತ), ಸೂರ್ಯಕಾಂತಿ (ಮಳೆಯಾಶ್ರಿತ) ಬೆಳೆಗಳಿಗೆ ವಿಮೆ ಕಟ್ಟಲು 31/07/2026 ಕೊನೆಯ ದಿನವಾಗಿದೆ. ಈರುಳ್ಳಿ (ನೀರಾವರಿ), ಹತ್ತಿ (ಮಳೆಯಾಶ್ರಿತ) ಬೆಳೆಗೆ ವಿಮೆ ಕಟ್ಟಲು 14/08/2026 ಕೊನೆಯ ದಿನವಾಗಿದೆ.

ಬೆಳೆ ವಿಮೆ ನೋಂದಣಿಗೆ ರೈತರು ಕಡ್ಡಾಯಾವಾಗಿ ಫ್ರೂಟ್ಸ್ ಐ. ಡಿ. (FID), NPCI Seeding ಆಗಿರುವ ಬ್ಯಾಂಕ್ ಖಾತೆ, ಆಧಾರ್ ಕಾರ್ಡ ಮತ್ತು ಜಮೀನಿನ ದಾಖಲೆಗಳನ್ನು ಹೊಂದಿರಬೇಕು. ರೈತರ ಬ್ಯಾಂಕ್ ಖಾತೆಯು ಈಖಆ ಮತ್ತು ಆಧಾರ್ ಜೋಡಣೆಯಾಗಿರುವುದು ಕಡ್ಡಾಯವಾಗಿದೆ. ವಿಮೆ ಮಾಡಿಸಿದ ಬೆಳೆಗಳಿಗೆ ಪ್ರಕೃತಿ ವಿಕೋಪ ಅಥವಾ ಇತರೆ ಕಾರಣಗಳಿಂದ ಹಾನಿಯಾದಲ್ಲಿ ರೈತರು 72 ಗಂಟೆಗಳ ಒಳಗಾಗಿ ಕೃಷಿ ಇಲಾಖೆ, ಬ್ಯಾಂಕ್ ಅಥವಾ ವಿಮಾ ಸಂಸ್ಥೆಗೆ ಮಾಹಿತಿ ನೀಡಬೇಕು. ಸಮಯಕ್ಕೆ ಸರಿಯಾಗಿ ಮಾಹಿತಿ ನೀಡಿದರೆ ಪರಿಹಾರ ಪಡೆಯಲು ಅನುಕೂಲವಾಗುತ್ತದೆ. ಆದ್ದರಿಂದ ಮೂರು ತಾಲೂಕಿನ ರೈತರು ಬೆಳೆ ವಿಮೆ ಯೋಜನೆಯ ಸದುಪಯೋಗ ಪಡೆದು ತಮ್ಮ ಬೆಳೆ ಸುರಕ್ಷಿತಗೊಳಿಸಿಕೊಳ್ಳುವಂತೆ ಈ ಮೂಲಕ ಎಲ್ಲಾ ರೈತರಲ್ಲಿ ವಿನಂತಿಸಿಕೊಂಡಿದ್ದಾರೆ.

# ಮನೋಹರ ನವಾಡೆ ನಿಧನ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಪಟ್ಟಣದ ಸ್ಥಳೀಯ ನಿವಾಸಿಯಾದ ನಿವೃತ್ತ ಶಿಕ್ಷಕರಾದ ಮನೋಹರ ನವಾಡೆ (65) ಅವರು ಅನಾರೋಗ್ಯದ ಕಾರಣದಿಂದ ಬುಧವಾರ ದಿನಾಂಕ 24/06/2026 ರಂದು ಕಾಲವಶರಾಗಿದ್ದಾರೆ. ಮೃತರು ಓರ್ವ ಪುತ್ರಿ, ಓರ್ವ ಮಗ ಹಾಗೂ ಸಮಸ್ತ ನವಾಡೆ ಪರಿವಾರದವರು, ಬಂದು-ಬಳಗ ಹಾಗೂ ಅಪಾರ ಸ್ನೇಹಿತರನ್ನು ಅಗಲಿದ್ದಾರೆ. ಇವರ ನಿಧನಕ್ಕೆ ಕಮಲನಗರದ ಗಣ್ಯರು ಹಾಗೂ ಸಾರ್ವಜನಿಕರು ತೀವ್ರ ಸಂತಾಪ ಸೂಚಿಸಿದ್ದಾರೆ. ಮೃತರ ಅಂತ್ಯಕ್ರಿಯೆಯನ್ನು ಬುಧವಾರ ಮಧ್ಯಾಹ್ನ 1 ಗಂಟೆಗೆ ಅವರ ಸ್ವಂತ ಹೊಲದಲ್ಲಿ ನೆರವೇರಿಸಲಾಯಿತು ಎಂದು ಕುಟುಂಬ ಮೂಲದವರು ತಿಳಿಸಿದ್ದಾರೆ.

# ಮೊಹರಂ ಆಚರಣೆ ಪೊಲೀಸರಿಂದ ಪಥ ಸಂಚಲನ



• ಮಲ್ಲಮ್ಮ ನುಡಿ ವಾರ್ತೆ ಮುದಗಲ್

ಮೊಹರಂ ಆಚರಣೆ ಹಿನ್ನೆಲೆಯಲ್ಲಿ ಜನತೆಗೆ ಜಾಗೃತಿ ಮೂಡಿಸಲು ಲಿಂಗಸಗೂರು ಡಿವೈಎಸ್ಪಿ ದತ್ತಾತ್ರೇಯ ಕಾರ್ನಾಡ್ ನೇತೃತ್ವದಲ್ಲಿ ಪೊಲೀಸರಿಂದ ಪಥ ಸಂಚಲನ ಬುಧುವಾರ ಸಂಜೆ ಜರುಗಿತು.

ಕಾನೂನು-ಸುವ್ಯವಸ್ಥೆ ಕಾಪಾಡಲು,

ಸಾರ್ವಜನಿಕರಲ್ಲಿ ಭರವಸೆ ಮೂಡಿಸಲು ಮತ್ತು ಅಪರಾಧಗಳನ್ನು ತಡೆಯಲು ಪೊಲೀಸರು ಸ್ಥಳೀಯ ಪೊಲೀಸ್ ಠಾಣೆಯಿಂದ ಪಟ್ಟಣದ ಕಿಲ್ಲಾ, ಚೌವಡಿಕಟ್ಟೆ, ಸಂತೆ ಬಜಾರ, ಕಿರಾಣಿ ಮಾರ್ಕೆಟ್ ಹಾಗೂ ಬಟ್ಟೆ ಮಾರ್ಕೆಟ್ ಸೇರಿದಂತೆ ವಿವಿಧ ಮುಖ್ಯ ರಸ್ತೆಯಲ್ಲಿ ಪೊಲೀಸ್ ಪಥ ಸಂಚಲನ ಮಾಡಲಾಯಿತು.

ಡಿವೈಎಸ್ಪಿ ದತ್ತಾತ್ರೇಯ ಕಾರ್ನಾಡ್, ಮಸ್ಕಿ ವೃತ್ತ ಸಿಪಿಐ ರಾಮಣ್ಣ ಜಲಿಗೇರಿ, ಪಿಎಸ್‌ಐ ವೆಂಕಟೇಶ್ ಮಾಡಿಗೇರಿ, ಮಸ್ಕಿ ಪಿಎಸ್‌ಐ ರಂಗಯ್ಯ, ತನಿಖೆ ವಿಭಾಗ ಪಿಎಸ್‌ಐ ರತ್ನಮ್ಮ, ಎಎಸ್‌ಐ ವೆಂಕಟಪ್ಪ ನಾಯಕ್, ಎ ಎಸ್ ಐ ಚನ್ನಬಸಪ್ಪ, ಹೆಚ್ ಸಿ ಅಮರೇಶ ಕೆ. ಪಿಸಿ ಅನಿಲ್, ಲಿಂಗಸಗೂರು ಉಪವಿಭಾಗದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಮತ್ತು ಗೃಹ ರಕ್ಷಕದಳ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಅಂಬೇಡ್ಕರ್ ಭವನ ಕಾಮಗಾರಿ ವೀಕ್ಷಿಸಿದ ಶಾಸಕ ಪ್ರಭು ಚವ್ಹಾಣ

• ಮಲ್ಲಮ್ಮ ನುಡಿ ವಾರ್ತೆ ಔರಾದ



ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ. ಚವ್ಹಾಣ ಅವರು ಔರಾದ(ಬಿ) ಪಟ್ಟಣದಲ್ಲಿ ನಿರ್ಮಾಣ ಹಂತದಲ್ಲಿರುವ ಅಂಬೇಡ್ಕರ್ ಭವನದ ಕಾಮಗಾರಿ ಸ್ಥಳಕ್ಕೆ ಇತ್ತೀಚೆಗೆ ದಿಢೀರ್ ಭೇಟಿ ನೀಡಿ ಕಾಮಗಾರಿಯ ಪ್ರಗತಿಯನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಕಾಮಗಾರಿಯ ಗುಣಮಟ್ಟ ಹಾಗೂ ಪ್ರಗತಿ ಕುರಿತು ಅಧಿಕಾರಿಗಳು ಮತ್ತು ಗುತ್ತಿಗೆದಾರರಿಂದ ಮಾಹಿತಿ ಪಡೆದ ಅವರು, ಕಟ್ಟಡ ನಿರ್ಮಾಣಕ್ಕೆ ಬಳಸುವ ಕಬ್ಬಿಣ, ಸಿಮೆಂಟ್ ಸೇರಿದಂತೆ ಎಲ್ಲ ಸಾಮಗ್ರಿಗಳು ಉತ್ತಮ ಗುಣಮಟ್ಟದ್ದಾಗಿರಬೇಕು. ಕಟ್ಟಡ ನಿರ್ಮಾಣ ಕಾರ್ಯವನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಔರಾದ ಪಟ್ಟಣದಲ್ಲಿ ಸುಂದರ ಹಾಗೂ ಭವ್ಯವಾದ ಅಂಬೇಡ್ಕರ್ ಭವನ ನಿರ್ಮಾಣವಾಗಬೇಕು ಎಂಬುದು ನನ್ನ ಬಹಳ ವರ್ಷಗಳ ಕನಸಾಗಿತ್ತು. ಈ ಯೋಜನೆಗಾಗಿ ಈ ಹಿಂದೆ ಅನುದಾನ ಒದಗಿಸಿದ್ದೆ. ಆದರೆ ನಿವೇಶನ ಸಮಸ್ಯೆ ಹಾಗೂ ಇತರೆ ಕಾರಣಗಳಿಂದ ಮೂರು ಬಾರಿ ತೊಡಕಾಯಿತು. ಕೆಲವರು ಸಾಕಷ್ಟು ಅಡ್ಡಿಯುಂಟು ಮಾಡಿದ್ದರು. ಇದೀಗ ಎಲ್ಲ ಅಡೆತಡೆಗಳನ್ನು ನಿವಾರಿಸಿ ಭವ್ಯ ಅಂಬೇಡ್ಕರ್ ಭವನ ನಿರ್ಮಾಣ ಕಾರ್ಯ ಆರಂಭಗೊಂಡಿರುವುದು ಸಂತೋಷ ತಂದಿದೆ ಎಂದು ಅವರು ಹೇಳಿದರು.

ಅಂದಾಜು ಪತ್ರಿಕೆಯಲ್ಲಿ ನಮೂದಿಸಿರುವಂತೆ ಎಲ್ಲ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು. ಯಾವುದೇ ಹಂತದಲ್ಲೂ ಗುಣಮಟ್ಟದಲ್ಲಿ ರಾಜಿ ಮಾಡಿಕೊಳ್ಳಬಾರದು. ಕಾಮಗಾರಿಯಲ್ಲಿ ಲೋಪಗಳು ಕಂಡುಬಂದಲ್ಲಿ ಅಥವಾ ಕಳಪೆ ಗುಣಮಟ್ಟದ ಸಾಮಗ್ರಿಗಳನ್ನು ಬಳಸಿರುವುದು ಗಮನಕ್ಕೆ ಬಂದಲ್ಲಿ ಯಾವುದೇ ಕಾರಣಕ್ಕೂ ಸುಮ್ಮನೆ ಬಿಡುವುದಿಲ್ಲ ಎಂದು ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಎಚ್ಚರಿಕೆ ನೀಡಿದರು. ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಆದರ್ಶಗಳು ಹಾಗೂ ಅವರ ಸಂದೇಶವನ್ನು ಪ್ರತಿಬಿಂಬಿಸುವ ರೀತಿಯಲ್ಲಿ ಈ ಭವನ ನಿರ್ಮಾಣವಾಗಬೇಕು. ಸಾರ್ವಜನಿಕರಿಗೆ ಅನುಕೂಲವಾಗುವ ಎಲ್ಲ ಮೂಲಸೌಕರ್ಯಗಳನ್ನು ಅಳವಡಿಸಿ ಮಾದರಿ ಕಟ್ಟಡವಾಗಿ ರೂಪಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಶಿವಾಜಿರಾವ ಪಾಟೀಲ ಮುಂಗನಾಳ, ಸಚಿನ ರಾಠೋಡ, ಶ್ರೀನಿವಾಸ ಖೂಬಾ, ದಯಾನಂದ ಘೂಳೆ, ಪ್ರಕಾಶ ಅಲ್ಮಾಜೆ, ಬಸವರಾಜ ಹಳ್ಳೆ, ಕೇರಬಾ ಪವಾರ, ಗುಂಡಪ್ಪ ಮುಧಾಳೆ, ಅಂಬಾದಾಸ ನೇಳಗೆ, ಪ್ರಕಾಶ ಭಂಗಾರೆ, ಆನಂದ ದ್ಯಾಡೆ, ಎಂ.ಡಿ ಸಲಾವೋದ್ದೀನ್ ಸೇರಿದಂತೆ ಇಲಾಖೆಯ ಅಧಿಕಾರಿಗಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

**: CITATION :**

**IN THE COURT OF THE PRL. CIVIL JUDGE AND JMFC., AT HUMNABAD.**

**CRL. MISC. No.2360/2026.**

**Petitioners:**

1. Nazersab S/o Maheboob sab, Age: 42-year, Occu: Agriculture.
2. Khuresha bee W/o Nazersab, Age: 40-year, Occu: Agriculture.
3. Rahim sab S/o Nazersab, Age: 20-year, Occu: Agriculture.
4. Sameena Begum D/o Nazeer sab, Age: 18-year, Occu: Agriculture.
5. Jeenath begum D/o Nazer sab, Age: 11-year, Occu: Student, minor U/G her real Mother petitioner No.2
6. Nasiruddin D/o Nazer sab, Age: 11-year, Occu: Student, minor U/G her real Mother petitioner No.2
7. Gafursab S/o Maheboob sab, Age: 45-year, Occu: Agriculture.
8. Raziya W/o Gafur sab, Age: 42-year, Occu: House hold.

All are R/o Village Markhal, Tq. Humnabad.

**Respondent:**

**The Registrar of Birth and Death through The Tahasildar Humnabad.**

**Sub: Petition U/Sec. 13(3) of Birth and Death Registration Act-1969**

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Father of petitioner No.1 and 7, Father in law of petitioner No.2 and 8 and Grand Father of petitioner No.3 to 6 Deceased by namely LATE. MAHEBOOB SAB S/O CHANDASAB, he was died on 30.01.1996 at Village Markhal. Tq. Humnabad. Dist. Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 15.07.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 15-06-2026

**//By order of the court//**
**Chief Ministerial Officer,**
**Prl. Civil Judge & JMFC Court,**
**Humnabad.**

**: CITATION :**

**IN THE COURT OF THE PRL. CIVIL JUDGE AND JMFC., AT HUMNABAD.**

**CRL. MISC. No.2359/2026.**

**Petitioners:**

1. Nazersab S/o Maheboob sab, Age: 42-year, Occu: Agriculture.
2. Khuresha bee W/o Nazersab , Age: 40-year, Occu: Agriculture.
3. Rahim sab S/o Nazersab, Age: 20-year, Occu: Agriculture.
4. Sameena Begum D/o Nazeer sab, Age: 18-year, Occu: Agriculture.
5. Jeenath begum D/o Nazer sab, Age: 11-year, Occu: Student, minor U/G her real Mother petitioner No.2
6. Nasiruddin D/o Nazer sab, Age: 11-year, Occu: Student, minor U/G her real Mother petitioner No.2
7. Gafursab S/o Maheboob sab, Age: 45-year, Occu: Agriculture.
8. Raziya W/o Gafur sab, Age: 42-year, Occu: House hold. All are R/o Village Markhal, Tq. Humnabad.

**Respondent:**

**The Registrar of Birth and Death through The Tahasildar Humnabad.**

**Sub: Petition U/Sec. 13(3) of Birth and Death Registration Act-1969**

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Mother of petitioner No. 1 and 7, Mother in law of petitioner No.2 and 8 and Grand mother of petitioner No.3 to 6 Deceased by namely LATE. SMT. MAMTAZABEE W/O MAHEBOOB SAB, she was died on 05.07.2001 at Village Markhal. Tq. Humnabad. Dist. Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 15.07.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 15-06-2026

**//By order of the court//**
**Chief Ministerial Officer,**
**Prl. Civil Judge & JMFC Court,**
**Humnabad.**

# 5 ಕೋ.ಕಾಮಗಾರಿಗೆ ಭೂಮಿಪೂಜೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ನಗರದ 37, 38 ಹಾಗೂ 39 ವಾರ್ಡ್'ಗಳನ್ನು ಸಂಪರ್ಕಿಸುವ ಹಳೆಯ ಧಾರವಾಡ ರಸ್ತೆಯ (ಕುಟ್ಟಿ ಹೊಟೇಲನಿಂದ ಶ್ರೀಕುಮಾರಸ್ವಾಮಿ ದೇವಸ್ಥಾನದವರೆಗೆ) ಸಮಗ್ರ ರಸ್ತೆ ಅಭಿವೃದ್ಧಿಗೆ (ಒಳಚರಂಡಿ, ಮಳೆ ನೀರು ಚರಂಡಿ, ಕುಡಿಯುವ ನೀರಿನ ಪೈಪ್ ಅಳವಡಿಕೆ, ಬೀದಿ ದೀಪ, ಫುಟ್'ಪಾತ್) ಅಂದಾಜು 5 ಕೋಟಿ ರೂ.ಗಳ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಿದೆ. ಈ ಸಂದರ್ಭ ಪಾಲಿಕೆಯ ಸದಸ್ಯರಾದ ಮಾಲನಬೀ, ಕುಬೇರ, ಮಾಜಿ ಮೇಯರ್ ಎಂ.ರಾಜೇಶ್ವರಿ, ಪೇರಂ ವಿವೇಕ್, ಕಾಂಗ್ರೆಸ್ ಮುಖಂಡರಾದ ಅಯಾಜ್ ಅಹ್ಮದ್, ಅಲ್ಲಾಬಕಷ್, ಮಹಮ್ಮದ್ ಭಾಯ್, ಪಿ.ಜಗನ್, ಪಿ.ರವಿ, ಪೆದ್ದ ಯರ್ರಿಸ್ವಾಮಿ, ಹೊನ್ನಪ್ಪ, ಹಗರಿ ಗೋವಿಂದ, ಪರಶುರಾಮುಡು,ಮೇದಾರ ಮಲ್ಲಿಕಾರ್ಜುನಪ್ಪ, ದೇವಿನಗರ ಹೊನ್ನೂರಪ್ಪ, ಪದ್ಮಾ, ಸೋಮು, ಲಾಲಸ್ವಾಮಿ, ಅತೀಶ್, ಮೀಸೆ ರಾಮಣ್ಣ, ನರೇಂದ್ರ ಸೇರಿದಂತೆ ಮತ್ತಿತರರು ಹಾಜರಿದ್ದರು.

# ಇಂದು ತುಂಗಭದ್ರಾ ಜಲಾಶಯ ನೂತನ ಸ್ಟೀಲ್ ಗೇಟ್‌ಗಳ ಲೋಕಾರ್ಪಣೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಲಸಂಪನ್ಮೂಲ ಇಲಾಖೆ ಹಾಗೂ ತುಂಗಭದ್ರಾ ಮಂಡಳಿಯ ಸಹಯೋಗದಲ್ಲಿ ಜೂನ್ 25 ರಂದು ಬೆಳಿಗ್ಗೆ 11 ಗಂಟೆಗೆ ಕೊಪ್ಪಳ ಜಿಲ್ಲೆಯ ಮುನಿರಾಬಾದ್ ಸರ್ಕಾರಿ ಹೈಸ್ಕೂಲ್ ಮೈದಾನದಲ್ಲಿ ತುಂಗಭದ್ರಾ ಜಲಾಶಯಕ್ಕೆ ನೂತನವಾಗಿ ಬದಲಾಯಿಸಿರುವ 33 ಸ್ಟೀಲ್‌ವೇ ಗೇಟುಗಳ ಲೋಕಾರ್ಪಣೆ ಕಾರ್ಯಕ್ರಮ ಆಯೋಜಿಸಲಾಗಿದೆ.

ಕರ್ನಾಟಕ ರಾಜ್ಯದ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಕಾರ್ಯಕ್ರಮದಲ್ಲಿ ಕೇಂದ್ರ ಜಲಶಕ್ತಿ ಸಚಿವರಾದ ಸಿ.ಆರ್.ಪಾಟೀಲ್, ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು, ತೆಲಂಗಾಣ ರಾಜ್ಯದ ಮುಖ್ಯಮಂತ್ರಿ ಎ.ರೇವಂತ್ ರೆಡ್ಡಿ, ರಾಜ್ಯದ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಆಂಧ್ರಪ್ರದೇಶ ಉಪ ಮುಖ್ಯಮಂತ್ರಿ ಕೆ.ಪವನ್ ಕಲ್ಯಾಣ್, ತೆಲಂಗಾಣ ಉಪ ಮುಖ್ಯಮಂತ್ರಿ ಮಲ್ಲುಭಟ್ಟಿ ವಿಕ್ರಮಾರ್ಕ, ಕೇಂದ್ರ ಜಲಶಕ್ತಿ ಹಾಗೂ ರೈಲ್ವೇ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ, ಕೇಂದ್ರ ಜಲಶಕ್ತಿ ಖಾತೆ ರಾಜ್ಯ ಸಚಿವ ರಾಜ ಭೂಷಣ ಚೌಧರಿ, ವಿಧಾನ ಪರಿಷತ್ ಸಭಾಪತಿ ಬಸವರಾಜ್ ಎಸ್ ಹೊರಟ್ಟಿ, ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆ ಸಚಿವ ರಾಮಲಿಂಗಾರೆಡ್ಡಿ, ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ– ಗದಗ ಸಂಸದ ಬಸವರಾಜ ಬೊಮ್ಮಾಯಿ, ಆಂಧ್ರಪ್ರದೇಶ ಜಲಸಂಪನ್ಮೂಲ ಸಚಿವ ಡಾ.ನಿಮ್ಮಲ ರಾಮನಾಯ್ಡು, ಆಂಧ್ರಪ್ರದೇಶದ ಹಣಕಾಸು ಯೋಜನೆ, ವಾಣಿಜ್ಯ ತೆರಿಗೆ ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಪಯ್ಯಾವುಲ ಕೇಶವ್, ತೆಲಂಗಾಣ ನೀರಾವರಿ ಹಾಗೂ ಸಿಎಡಿ ಸಚಿವ ಎನ್.ಉತ್ತಮ್ ಕುಮಾರ್ ರೆಡ್ಡಿ, ರಾಜ್ಯದ ಸರ್ಕಾರಿ ಮುಖ್ಯ ಸಚೇತಕ ಹಾಗೂ ಶಾಸಕ ಸಲೀಂ ಅಹಮದ್, ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಸನಗೌಡ ದದ್ದಲ್, ಮಸ್ಕಿ ಶಾಸಕರು ಹಾಗೂ ಕರ್ನಾಟಕ ರಾಜ್ಯ ಖಾದಿ ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರಾದ ಆರ್.ಬಸನಗೌಡ ತುರ್ವಿಹಾಳ, ಸಿಂಧನೂರು ಶಾಸಕರು ಹಾಗೂ ರಾಜ್ಯ ಕೈಗಾರಿಕಾ ಮೂಲ ಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಂಪನಗೌಡ ಬಾದರ್ಲಿ, ರೋಣ ಶಾಸಕರು ಹಾಗೂ ಕರ್ನಾಟಕ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್.ಪಾಟೀಲ್, ಕಂಪ್ಲಿ ಶಾಸಕರು ಹಾಗೂ ಕರ್ನಾಟಕ ಕೈಮಗ್ಗ ನಿಗಮ ನಿಯಮಿತ ಅಧ್ಯಕ್ಷರಾದ ಜೆ.ಎನ್.ಗಣೇಶ್, ಕುಷ್ಟಗಿ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ವಿರೋಧ ಪಕ್ಷದ ಮುಖ್ಯ ಸಚೇತಕ ದೊಡ್ಡನಗೌಡ ಹನುಮನಗೌಡ ಪಾಟೀಲ್, ಡಾ.ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ್, ಕೇಂದ್ರ ಜಲ ಆಯೋಗದ ಅಧ್ಯಕ್ಷರಾದ ಅನುಪಮ್ ಪ್ರಸಾದ್ ಘನ ಉಪಸ್ಥಿತರಿರುವರು.

ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕ ರಾಘವೇಂದ್ರ ಹಿಟ್ನಾಳ್ ಅಧ್ಯಕ್ಷತೆ ವಹಿಸುವರು.ಮುಖ್ಯ ಅತಿಥಿಗಳಾಗಿ ಕೊಪ್ಪಳ ಸಂಸದ ಕೆ.ರಾಜಶೇಖರ ಹಿಟ್ನಾಳ್, ಬಾಗಲಕೋಟೆ ಸಂಸದ ಪಿ.ಸಿ.ಗದ್ದಿಗೌಡರ, ಬಳ್ಳಾರಿ ಸಂಸದ ಈ.ತುಕಾರಾಮ್, ದಾವಣಗೆರೆ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ, ರಾಯಚೂರು ಸಂಸದ ಜಿ.ಕುಮಾರ್ ನಾಯಕ್, ಬಳ್ಳಾರಿ ರಾಜ್ಯಸಭಾ ಸದಸ್ಯ ಡಾ.ಸೈಯದ್ ನಾಸಿರ್ ಹುಸೇನ್, ಯಲಬುರ್ಗಾ ಶಾಸಕ ಬಸವರಾಜ ರಾಯರೆಡ್ಡಿ, ಕನಕಗಿರಿ ಶಾಸಕ ಶಿವರಾಜ್ ಎಸ್. ತಂಗಡಗಿ, ಗಂಗಾವತಿ ಶಾಸಕ ಜಿ.ಜನಾರ್ಧನ ರೆಡ್ಡಿ, ವಿಜಯನಗರ ಶಾಸಕ ಹೆಚ್.ಆರ್.ಗವಿಯಪ್ಪ, ಹಗರಿಬೊಮ್ಮನಹಳ್ಳಿ ಶಾಸಕ ಕೆ.ನೇಮಿರಾಜ ನಾಯ್ಕ್, ಕೂಡ್ಲಿಗಿ ಶಾಸಕ ಡಾ.ಎನ್.ಟಿ.ಶ್ರೀನಿವಾಸ್, ಹಡಗಲಿ ಶಾಸಕ ಎಲ್.ಕೃಷ್ಣ ನಾಯಕ್, ಹರಪನಹಳ್ಳಿ ಶಾಸಕಿ ಎಂ.ಪಿ.ಲತಾ ಮಲ್ಲಿಕಾರ್ಜುನ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕ ಬಿ.ನಾಗೇಂದ್ರ, ಸಿರುಗುಪ್ಪ ಶಾಸಕ ಬಿ.ಎಂ.ನಾಗರಾಜ, ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ ಶಾಸಕ ನಾರಾ ಭರತ್ ರೆಡ್ಡಿ, ಸಂಡೂರು ಶಾಸಕಿ ಈ.ಅನ್ನಪೂರ್ಣ ತುಕಾರಾಂ, ವಿಧಾನ ಪರಿಷತ್ ಸದಸ್ಯರಾದ ಶಶಿಲ್ ಜಿ.ನಮೋಶಿ, ಚಂದ್ರಶೇಖರ್ ಬಿ ಪಾಟೀಲ್, ಶರಣಗೌಡ ಎ. ಪಾಟೀಲ್ ಬಯ್ಯಾಪುರ, ಹೇಮಲತಾ ಪಿ.ನಾಯಕ್, ವೈ. ಎಂ.ಸತೀಶ್, ತುಂಗಭದ್ರಾ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಹಸನ್‌ಸಾಬ್ ನಬಿಸಾಬ್ ದೋಟಿಹಾಳ, ಕೊಪ್ಪಳ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ರೆಡ್ಡಿ ಶ್ರೀನಿವಾಸ, ವಿಜಯನಗರ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಕೆ.ಶಿವಮೂರ್ತಿ ಮತ್ತು ರಾಯಚೂರು, ಗದಗ, ಹಾವೇರಿ ಜಿಲ್ಲೆಗಳ ವಿಧಾನಸಭಾ ಸದಸ್ಯರು, ವಿಧಾನ ಪರಿಷತ್ ಸದಸ್ಯರು ಮತ್ತು ವಿವಿಧ ನಿಗಮ ಮಂಡಳಿಗಳ ಅಧ್ಯಕ್ಷರು, ಕೇಂದ್ರ ಜಲಶಕ್ತಿ ಇಲಾಖೆ, ರಾಜ್ಯ ಜಲಸಂಪನ್ಮೂಲ ಇಲಾಖೆ ಸೇರಿದಂತೆ ಕರ್ನಾಟಕ ರಾಜ್ಯದ ಮತ್ತು ಆಂಧ್ರಪ್ರದೇಶ, ತೆಲಂಗಾಣ ರಾಜ್ಯದ ಪ್ರಮುಖ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸುವರು.

# ಕಂಪ್ಲಿ ಶಾಸಕ ಗಣೇಶ್‌ಗೆ ಸಚಿವ ಸ್ಥಾನ ನೀಡಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಜಿಲ್ಲೆಯ ಕಂಪ್ಲಿ ಶಾಸಕ ಜೆ.ಎನ್ .ಗಣೇಶ್ ರವರಿಗೆ ಸಧ್ಯದಲ್ಲೇ ನಡೆಯುವ ರಾಜ್ಯದ ಸಚಿವ ಸಂಪುಟ ವಿಸ್ತರಣೆಯಲ್ಲಿ ಮಂತ್ರಿ ಸ್ಥಾನ ನೀಡಬೇಕೆಂದು ಅವರ ಕ್ಷೇತ್ರದ ಜನತೆ, ಕಾಂಗ್ರೆಸ್ ಲಕ್ಷದ ಮುಖಂಡರು, ಕಾರ್ಯಕರ್ತರು ಇಂದು ನಗರದಲ್ಲಿ ಬೃಹತ್ ಮೆರವಣಿಗೆ ನಡೆಸಿ. ಪಕ್ಷದಹೈ ಕಮಾಂಡ್ ಮತ್ತು ಸಿ.ಎಂ .ಡಿ.ಕೆ.ಶಿವಕುಮಾರ್ ಅವರಿಗೆ ಒತ್ತಾಯ ಮಾಡಿತು.

ಕ್ಷೇತ್ರದ ಹಲವಡೆಯಿಂದ ಬಂದ ನೂರಾರು ಜನರು ನಗರದ ಏಳು ಮಕ್ಕಳ ತಾಯಿ ದೇವಸ್ಥಾನದ ಬಳಿ ಯಿಂದ ಘೋಷಣೆ ಕೂಗುತ್ತ. ನಗರದ ಗಡಗಿ ಚೆನ್ನಪ್ಪ ಸರ್ಕಲ್ ಗೆ ಬಂದು ಎರೆಡು ಬಾರಿ ಶಾಸಕರಾಗಿರುವ ಗಣೇಶ್ ಅವರಿಗೆ ಸಚಿವ ಸ್ಥಾನ ನೀಡ ಬೇಕೆಂದು ಆಗ್ರಹಿಸಲಾಯ್ತು.

# ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ ನೀಡುತ್ತಿರುವುದು ಸ್ವಾಗತಾರ್ಹ:ಸುರೇಶ ಹಾರಿವಾಳ



• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ

ರಾಜ್ಯ ಸರಕಾರದ ಮಹತ್ವಾಕಾಂಕ್ಷೆ ಶಕ್ತಿ ಯೋಜನೆಗೆ ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಸರ್ಕಾರ ಸಾರಿಗೆ ಇಲಾಖೆಗೆ ಬಿಡುಗಡೆ ಮಾಡಿದ್ದು 19 ಸಾವಿರ ಕೋಟಿ ರೂಗಳು ಎಂದು ತಾಲೂಕಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಮೈಬೂಬ.ಲಾ ನಾಯ್ಕೋಡಿ ಹೇಳಿದರು.ತಾಲೂಕಿನ ಹಂಗರಗಿಯಲ್ಲಿ ಬುಧುವಾರ ಜಿಪಂ, ತಾಪಂ ಹಾಗೂ ತಾಲೂಕಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಹಯೋಗದಡಿ ಆಯೋಜಿಸಿದ್ದ ಮನೆಗೆ ಐದು ಗ್ಯಾರಂಟಿ ಮನೆಯ ಮುಂದೆ ರಂಗೋಲಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಐದು ಯೋಜನೆಗಳು ಅರ್ಹರಿಗೆ ತಲುಪಿಸಿಲೆಂದೇ ತಾಲೂಕಾ ಸಮಿತಿಯನ್ನು ರಚಿಸಲಾಗಿದ್ದು. ಆಯೋಜಿಸಿದೆ. ಸಮಿತಿ ಸದುಪಯೋಗಕ್ಕೆ ಜನತೆ ಮುಂದಾಗಬೇಕೆಂದು ವಿನಂತಿಸಿಕೊಂಡರು. ತಾಲೂಕಾ ಸಮಿತಿಯ ಪ್ರಗತಿ ಇಡೀ ಜಿಲ್ಲೆಯಲ್ಲಿಯೇ ಮೆಚ್ಚುಗೆ ಪಡೆದುಕೊಂಡಿದೆ. ಪಂಚ ಗ್ಯಾರಂಟಿ ಯೋಜನೆಗಳಿಂದ ಅನೇಕರು ಸ್ವಾವಲಂಬಿ ಉದ್ಯೋಗ ಮಾಡುವುದರ ಮೂಲಕ ಬದುಕು ರೂಪಿಸಿಕೊಂಡಿದ್ದಾರೆ. ತಾಲೂಕಿನಲ್ಲಿ ಇನ್ನೂ ಮುಂದೆ ಪಡಿತರ ವಿತರಣೆ ನಡೆಯಲಿದೆ ಎಂದರು.ಸಮಿತಿ ಸದಸ್ಯ ಕಾರ್ಯದರ್ಶಿ ತಾಪಂ ಇಓ ವೆಂಕಟೇಶ ವಂದಾಲ ಮಾತನಾಡಿ, ಅನೇಕ ಶ್ರಮಿಕ ಹಾಗೂ ಬಡ ಕುಟುಂಬಗಳನ್ನು ಗಮನಿಸಿದ ರಾಜ್ಯ ಸರ್ಕಾರ ಐದು ಯೋಜನೆಗಳನ್ನು ಜಾರಿಗೆ ತಂದಿದೆ. ಶಕ್ತಿ ಯೋಜನೆ ಅನೇಕ ಕುಟುಂಬಗಳ ಆರ್ಥಿಕ ಹೊರೆ ಇಳಿಸಿದೆ. ಮಹಿಳೆಯರು ರಾಜ್ಯದ ಎಲ್ಲಡೆ ನಿರ್ಭಯದಿಂದ ಸಂಚರಿಸಲು ಅನೂಕೂಲವಾಗಿದೆ. ಪ್ರತಿ ಕುಟುಂಬಕ್ಕೆ ಸರ್ಕಾರ 8–10 ಸಾವಿರ ರೂಗಳನ್ನು ನೀಡತಾ ಇದೆ. ಬಾಗೇವಾಡಿ ಸಾರಿಗೆ ಘಟಕಕ್ಕೆ ಶಕ್ತಿ ಯೋಜನೆಯಡಿ ಮೂರು ವರ್ಷದಲ್ಲಿ 79 ಕೋಟಿ ರೂಗಳನ್ನು ನೀಡಿದೆ ಎಂದರು.ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶ ಬ ಹಾರಿವಾಳ ಮಾತನಾಡಿ, ಐದು ಗ್ಯಾರಂಟಿ ನೀಡುವ ಜಗತ್ತಿನ ಏಕೈಕ ರಾಜ್ಯ ನಮ್ಮ ರಾಜ್ಯವಾಗಿದೆ. ಗ್ಯಾರಂಟಿ ಯೋಜನೆಗಳನ್ನು ಇತರೆ ರಾಜ್ಯಗಳು ನಕಲು ಮಾಡುತ್ತಿವೆ. ವಿದ್ಯಾರ್ಥಿಗಳಿಗೆ ಉಚಿತವಾಗಿ ಬಸ್ ಪಾಸ ನೀಡುತ್ತಿರುವುದು ಆರನೇ ಗ್ಯಾರಂಟಿಯಾಗಿದೆ. ಬರುವ ದಿನಗಳಲ್ಲಿ ಡಿಕೆಶಿ ಅವರು ರೈತ ಹಾಗೂ ಕಡು ಬಡವರಿಗೆ ಇನ್ನಷ್ಟು ಅನೂಕೂಲ ಮಾಡಿಕೊಡಲಿದ್ದಾರೆ ಗ್ರಾಮದ ಮುಖಂಡ ಎನ್.ಆರ್ ಬಿರಾದಾರ ಮಾತನಾಡಿದರು.ಈ ಸಂದರ್ಭದಲ್ಲಿ ಪಿಡಿಓ ಎಸ್ ಆಯ್ ಕುಂಬಾರ, ಸಮಿತಿ ಸದಸ್ಯರಾದ ಮಾಂತೇಶ ತಳೇವಾಡ, ಬಂಡೆಪ್ಪ ನಾಟೀಕಾರ, ಶಂಕ್ರಪ್ಪ ಚಕ್ರಮನಿ, ಮಾದೇವಿ ಮನಗೂಳಿ, ಮಲ್ಲನಗೌಡ ಕೋಳೂರ, ಅಭಿಷೇಕ ಪಾಟೀಲ, ಮುಖಂಡರಾದ ದಾದಾಗೌಡ ಪಾಟೀಲ, ಸಂಗಪ್ಪ ಕೋಳೂರ, ಮಾಂತೇಶ ಇಂಗಳೇಶ್ವರ ಸೇರಿದಂತೆ ಅನೇಕಮುಖಂಡರು, ಐದು ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.ಎನ್.ಆರ್ ದಳವಾಯಿ ಸ್ವಾಗತಿಸಿ ವಂದಿಸಿದರು. ಎಸ್ ಎಸ್ ಬಶೆಟ್ಟಿ ನಿರೂಪಿಸಿದರು.

> ತಾಲೂಕಿನಲ್ಲಿ ಪಡಿತರ ಇಲಾಖೆಯಿಂದ ನೀಡುವ ಅಕ್ಕಿ ನೆರೆ ರಾಜ್ಯಕ್ಕೆ ಸಾಗಾಣಿಕೆಯಾಗುತ್ತಿದ್ದರೂ ಆಹಾರ ಇಲಾಖೆ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಪಟ್ಟಣದಿಂದ ಮಣ್ಣೂರ ಗ್ರಾಮಕ್ಕೆ ಸಂಚರಿಸುವ ಬಸ್ ಸಕಾಲಕ್ಕೆ ಬೆಳಿಗ್ಗೆ 8:30ಕ್ಕೆ ಗ್ರಾಮದಲ್ಲಿರುವಂತೆ ಸಾರಿಗೆ ಇಲಾಖೆಗೆ ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷ ಸುರೇಶ ಬ ಹಾರಿವಾಳ ತಿಳಿಸಿದರು.

> ಕಾರ್ಯಕ್ರಮದಲ್ಲಿ ಗ್ರಾಮದ ಮಹಿಳೆಯೊಬ್ಬಳು ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸ ನೀಡಿ ಸಕಾಲಕ್ಕೆ ಕೂಲಿ ಸಂದಾಯ ಮಾಡಿ ಎಂದು ವಿನಂತಿಸಿಕೊಂಡಾಗ ತಾಪಂ ಇಓ ವೆಂಕಟೇಶ ವಂದಾಲ ಜು.1 ರಿಂದಲೇ ಉದ್ಯೋಗ ನೀಡಲು ಕ್ರಿಯಾ ಯೋಜನೆ ರೂಪಿಸಲಾಗುವುದು ಎಂದರು.

> ತಾಲೂಕಿನಲ್ಲಿ ಪಡಿತರ ಅಕ್ಕಿ ಕಳ್ಳ ಸಾಗಾಣಿಕೆ ಹಿನ್ನಲೆಯಲ್ಲಿ ಮನಗೂಳಿ ಹಾಗೂ ಬಸವನಬಾಗೇವಾಡಿಯಲ್ಲಿ ನಾಲ್ಕು ಪ್ರಕರಣ ದಾಖಲಿಸಿಕೊಂಡು 1283 ಚೀಲ ಅಕ್ಕಿಯನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಆಹಾರ ನಿರೀಕ್ಷಕ ಸಂಜಯ ಹಳ್ಳೂರ ತಿಳಿಸಿದರು.

# ಖಾಲಿಯಿರುವ 105 ಅಂಗನವಾಡಿ ಕಾರ್ಯಕರ್ತೆಯರ ,390 ಅಂಗನವಾಡಿ ಸಹಾಯಕಿಯರ ಹುದ್ದೆಗಳ ಭರ್ತಿಗೆ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

,ಜೂ.24– ಕಲಬುರಗಿ ಜಿಲ್ಲೆಯಲ್ಲಿ 2026–27ನೇ ಸಾಲಿನಲ್ಲಿ ಖಾಲಿಯಿರುವ 105 ಅಂಗನವಾಡಿ ಕಾರ್ಯಕರ್ತೆ ಹಾಗೂ ಅಂಗನವಾಡಿ 390 ಹುದ್ದೆಗಳು ಸಹಾಯಕಿಯರ ಗೌರವಧನ ಸೇವೆ ಸಲ್ಲಿಸಲು 19 ರಿಂದ 35 ವರ್ಷದೊಳಗಿನ ಅರ್ಹ ಸ್ಥಳೀಯ ಮಹಿಳಾ ಹಾಗೂ ಲಿಂಗತ್ವ ಅಲ್ಪಸಂಖ್ಯಾತರು ಅರ್ಜಿ ಸಲ್ಲಿಸಬಹುದು. ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಆಫ್‌ಲೈನ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಅರ್ಹತೆ:–ವಿಕಲಚೇತನರಿಗೆ 10 ವಯೋಮಿತಿ ಸಡಿಲಿಕೆ ಇರುತ್ತದೆ (ಕಾರ್ಯಕರ್ತೆ ಹುದ್ದೆಗೆ ಮಾತ್ರ( ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಪಿ.ಯು.ಸಿ. ತೇರ್ಗಡೆ ಹೊಂದಿರಬೇಕು.

ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಖಾಲಿಯಿರುವ ಹುದ್ದೆಗಳ ವಿವರ ಇಂತಿದೆ. ಅಫಜಲಪೂರ: 08 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 40 ಅಂಗನವಾಡಿ ಸಹಾಯಕಿಯರ ಹುದ್ದೆಗಳು. ಆಳಂದ: 27 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 77 ಅಂಗನವಾಡಿ ಸಹಾಯಕಿಯರ ಹುದ್ದೆಗಳು. ಚಿಂಚೋಳಿ: 09 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 47 ಅಂಗನವಾಡಿ ಸಹಾಯಕಿಯರ ಹುದ್ದೆಗಳು. ಚಿತ್ತಾಪೂರ: 05 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 39 ಅಂಗನವಾಡಿ ಸಹಾಯಕಿಯರ ಹುದ್ದೆಗಳು. ಕಲಬುರಗಿ (ಗ್ರಾಮೀಣ): 14 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 66 ಅಂಗನವಾಡಿ ಸಹಾಯಕಿಯರ ಹುದ್ದೆಗಳು. ಕಲಬುರಗಿ (ನಗರ): 12 ಅಂಗನವಾಡಿ ಸಹಾಯಕಿಯರ ಹುದ್ದೆಗಳು. ಜೇವರ್ಗಿ: 21 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 37 ಅಂಗನವಾಡಿ ಸಹಾಯಕಿಯರ ಹುದ್ದೆಗಳು. ಸೇಡಂ: 05 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 24 ಅಂಗನವಾಡಿ ಸಹಾಯಕಿಯರ ಹುದ್ದೆಗಳು. ಶಹಾಬಾದ: 16 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 48 ಅಂಗನವಾಡಿ ಸಹಾಯಕಿಯರ ಹುದ್ದೆಗಳು ಇವೆ.

ಅರ್ಜಿ ಸಲ್ಲಿಸಲಿಚ್ಛಿಸುವ ಅರ್ಹ ಮಹಿಳಾ ಅಭ್ಯರ್ಥಿಗಳ ವಯೋಮಿತಿ 19 ರಿಂದ 35 ವರ್ಷದೊಳಗಿರಬೇಕು. ವಿಕಲಚೇತನರಿಗೆ 10 ವರ್ಷಗಳ ವಯೋಮಿತಿ ಸಡಿಲಿಕೆ (ಕಾರ್ಯಕರ್ತೆ ಹುದ್ದೆಗೆ ಮಾತ್ರ) ಇರುತ್ತದೆ. ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗೆ ಅಭ್ಯರ್ಥಿಗಳು ಕನಿಷ್ಠ ವಿದ್ಯಾರ್ಹತೆ ಪಿ.ಯು.ಸಿ. ತೇರ್ಗಡೆ ಹೊಂದಿರಬೇಕು. ಅಂಗನವಾಡಿ ಸಹಾಯಕಿ ಹುದ್ದೆಗೆ ಅಭ್ಯರ್ಥಿಗಳು ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು.

ಅರ್ಹ ಮಹಿಳಾ ಅಭ್ಯರ್ಥಿಗಳು ಆಫ್‌ಲೈನ್ ಮೂಲಕ 2026ರ ಜುಲೈ 01 ರಿಂದ ಜುಲೈ 31ರೊಳಗಾಗಿ ಕಡ್ಡಾಯವಾಗಿ ಸೀಲು ಬಂದ ಲಕೋಟೆಯೊಂದಿಗೆ ನಿಗದಿತ ನಮೂನೆಯಲ್ಲಿ ಅಗತ್ಯ ದಾಖಲಾತಿಗಳಾದ ತಹಸೀಲ್ದಾರರಿಂದ ಪಡೆದ 3 ವರ್ಷದ ಒಳಗಿನ ವಾಸಸ್ಥಳ ದೃಢೀಕರಣ, ಆಧಾರ ಕಾರ್ಡ್, ರೇಶನ್ ಕಾರ್ಡ್, ಮತದಾನದ ಗುರುತಿನ ಚೀಟಿ ಇತರೆ ದಾಖಲಾತಿಗಳೊಂದಿಗೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯದಲ್ಲಿ ಅರ್ಜಿ ಸಲ್ಲಿಸಿ ಸ್ವೀಕೃತಿ ಪಡೆಯಬಹುದುದಾಗಿದೆ.

ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯನ್ನು ಹಾಗೂ ಆಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಕಚೇರಿಯ ವೇಳೆಯಲ್ಲಿ ಸಂಪರ್ಕಿಸಬಹುದು.

## ದೌರ್ಜನ್ಯ ತಡೆ ಕಾಯ್ದೆ ಜಾಗೃತಿ



**ಹುಣಸೂರು:** ನಗರದ ಉಪ ವಿಭಾಗಾಧಿಕಾರಿ ಕಚೇರಿ ಸಭಾಂಗಣ ದಲ್ಲಿ ಉಪ ವಿಬಾಗಧಿಕಾರಿಗಳ ಕಾವ್ಯ ರಾಣಿ ಅದ್ಯಕ್ಷತೆಯಲ್ಲಿ ಹುಣಸೂರು, ಪಿರಿಯಪಟ್ನ, ಕೆ.ಅರ್.ನಗರ, ಹೆಚ್.ಡಿ. ಕೋಟೆ ಸೇರಿದಂತ್ತೆ ಉಪ ವಿಬಾಗ ಮಟ್ಟದ ಎಸ್.ಸಿ ಎಸ್.ಟಿ ದೌರ್ಜನ್ಯ ತಡೆ ಕಾಯ್ದೆ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ನಡೆಯಿತು.

ನಂತರ ಸಭೆಯಲ್ಲಿ ಉಸ್ತುವಾರಿ ಸಮಿತಿಯಲ್ಲಿ ಸಮಿತಿಯ ಸದಸ್ಯರಾದ ಅಣ್ಣಯ್ಯ ನಾಯಕ ಮಾತನಾಡಿಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಹಣ ದುರ್ಬಳಕೆ, ಶಾಲಾ ಕಾಲೇಜು ಬಳಿ ಪುಂಡು ಪೋಕರಿಗಳ ಬೈಕ್ ವಿಲ್ಹೀಂಗ್, ಹಾಸ್ಟೇಲ್ ಗಳಲ್ಲಿ ಗುಣ ಮಟ್ಟದ ಆಹಾರದ ಕೊರತೆ ವಿದ್ಯಾರ್ಥಿಗಳ ಅಳಲು, ಪೋಲಿಸ್ ಅವರಣಗಳಲ್ಲಿ ದಲ್ಲಾಳಿಗಳ ನ್ಯಾಯ ಪಂಚಾಯ್ತಿ ಕಟ್ಟೆ ಪೋಲಿಸರ ಸಹಕಾರ, ಹಿಗೆ ಹತ್ತು ಹಲವು ಸಮಸ್ಯೆಗಳು ಇಂದು ನಡೆದ ವಿಬಾಗ ಮಟ್ಟದ ಎಸ್.ಸಿ ಎಸ.ಟಿ ಸಭೆಯಲ್ಲಿ ಬೆಳಕಿಗೆ ಬಂದಿತು. ಎಂದು ತಿಳಿಸಿದ್ದಾರೆ.

ಸರ್ಕಾರದಿಂದ ಬಂದ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಹಣ ದುರ್ಬಳಕೆ ಎಸ್.ಸಿ ಎಸ್.ಟಿ ಕಾರ್ಯಕ್ರಮಗಳಿಗೆ ಬಳಕೆಯಾಗದೆ ಬೇರೆ ಕಾರ್ಯಕ್ರಮಗಳಿಗೆ ಬಳಕೆ ಮಾಡಿ ಸವತ್ತು ಸಿಗಬೇಕಾದ ಫಲಾನುಭವಿಗಳಿಗೆ ಅನ್ಯಾಯವಾಗಿದೆ ಈ ಬಗ್ಗೆ ಎಸ್.ಸಿ.ಪಿ ಟಿ.ಎಸ್.ಪಿ ಹಣ ಯಾವ ಯಾವ ಕಾರ್ಯಕ್ರಮಗಳಿಗೆ ಬಳಕೆಯಾಗಿದೆ ಎಂದು ಸಂಬದಪಟ್ಟ ಅಧಿಕಾರಿಗಳು ಮುಂದಿನ ಸಭೆಗೆ ಮಾಹಿತಿ ನೀಡಬೇಕೆ ಎಂದು ಸಭಾದ್ಯಕ್ಷರಿಗೆ ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿದ ಸಭಾದ್ಯಕ್ಷರಾದ ಉಪ ವಿಭಾಗ ಅಧಿಕಾರಿ ಕಾವ್ಯ ರಾಣಿ ರವರು ಮಾತನಾಡಿ ಈ ಬಗ್ಗೆ ಪರಿಶಿಲಿಸಿ ಈ ಬಗ್ಗೆ ಮುಂದಿನ ಸಭೆಗೆ ಮಾಹಿತಿ ನೀಡುವುದಾಗಿ ಭರವಸೆ ನೀಡಿದರು. ಪೋಲಿಸ್ ಠಾಣೆಗಳಲ್ಲಿ ಅಸಹಾಯಕರಿಂದ ಮತ್ತಿ ದೌರ್ಜನ್ಯಕ್ಕೆ ಒಳಗಾದ ನೊಂದ ಜನಗಳಿಂದ ಬಂದ ದೂರನ್ನು ಪಡೆದು ಪ್ರಕರಣ ದಾಕಲಿಸಿ ತಪ್ಪಿತಸ್ಥರಿಗೆ ಶಿಕ್ಷೆ ಕೋಡಿಸುವ ಬದಲು ಠಾಣ ಅವರಣದಲ್ಲೆ ದಲ್ಲಾಳಿಗಳ ಮೂಲಕ ನ್ಯಾಯ ಪಂಚಾಯ್ತಿಗೆ ಪೋಲಿಸರೇ ಅವಕಾಶ ಕಲ್ಪಿಸಿಕೊಟ್ಟು ಉಳ್ಳವರಿಗೆ ಮಣೆ ಹಾಕುವ ಕೆಲಸ ನಡೆಯುತ್ತಿದೆ ಇದು ನಿಲ್ಲಬೇಕು ಎಂದರು ಇದಕ್ಕೆ ಉತ್ತರಿಸಿದ ಡಿವೈಎಸ್ ಪಿ ರವಿಯವರು ಇದನ್ನು ನಿಲ್ಲಿಸಲೆಂದೆ ಠಾಣ ಅವರಣದಲ್ಲಿದ ಕ್ಯಾಂಟಿನ್ ತೆರವುಗೋಲಿಸಲಾಗಿದೆಮುಂದೆಠಾಣ ಅವರಣದಲ್ಲಿಗುಂಪು ಮಾಡಿಕೊಂಡು ನ್ಯಾಯ ಪಂಚಾಯ್ತಿಗೆ ಮುಂದಾಗುವುಇದನ್ನು ನಿಲ್ಲಿಸಲು ಠಾಣೆಗಳಿಗೆ ಸೂಚಿಸುತ್ತೇನೆ ಎಂದರು. ಪಿರಿಯಪಟ್ಟಣ ತಾಲೂಕಿನ ಕಣಗಾಲು ಗ್ರಾಮದ ದಿಡ್ಡಿಯಮ್ಮ ದೇವಸ್ಥಾನ ಪೂಜಾಗಾರಿಕೆಯನ್ನು ಕಾಲಾನೂ ಕಾಲದಿಂದ ನಾಯಕ ವಂಶಸ್ಥರಿಗೆ ನೀಡಿದ್ದು ಈಗ ಮಲ್ಲೇಶನಾಯಕ ಮತ್ತು ಮಕ್ಕಳು ಮಾಡುತ್ತಿದ್ದು ಇದನ್ನು ಬದಲಾಯಿಸಲು ಸವರ್ಣಿಯರು ಪಿತೂರಿ ನಡೆಸುವ ಮೂಲಕ ಇಲ್ಲಸಲ್ಲದ ಅರೋಪಗಳನ್ನು ಮಾಡುತ್ತಿದ್ದಾರೆ. ಅದೇ ಗ್ರಾಮದ ಅಂಜನೇಯ ಸ್ವಾಮಿ ದೇವಾಲಯದ ಅರ್ಚಕ ದೇವಸ್ಥಾನದ 15 ಎಕ್ಕರೆ ಜಮೀನನ್ನು ದೇವಸ್ಥಾನದ ಬಳಕೆಗೆ ಇಟ್ಟುಕೊಳ್ಳದೆ ಅದನ್ನು ಮಾರಾಟ ಮಾಡಿದ್ದಾನೆ. ಈ ಬಗ್ಗೆ ಪ್ರಶ್ನಿಸದ ಗ್ರಾಮಸ್ಥರು ದಿಡ್ಡಿಯಮ್ಮ ದೇವಸ್ಥಾನದ ಪ.ಪಂ ವರ್ಗದ ಅರ್ಚಕರನ್ನು ಬದಲಾಯಿಸಿ ಸವರ್ಣಿಯರನ್ನು ನೇಮಕ ಮಾಡಿಕೊಳ್ಳಲು ಮುಂದಾಗಿದ್ದಾರೆ. ಇದನ್ನು ಸರಿಪಡಿಸಬೇಕು ಎಂದರು.

## ಕಳೆದು ಹೋದ ದ್ವಿತೀಯ ಪಿಯುಸಿ ಅಂಕಪಟ್ಟಿ

KARNATAKA STATE POLICE

**ನಸು.76 ಮೂಲ ಪ್ರತಿ** O/Date: 23/06/2026

eve / Reference No DP 136/2026

**ಜಿ.ಎಸ್.ಸಿ(GSC No)ಸಂಖ್ಯೆ:** PO0346260600058

**ಅರ್ಜಿ ನಮೂನೆ:** Documents Lost

**ಕರ್ನಾಟಕ ರಾಜ್ಯ ಪೊಲೀಸ್**
**Acknowledgement**

1. **ಸಂದರ್ಶಕರ/ಪಿರ್ಯಾದುದಾರರ/ಆಹ್ವಾನಿಸಲಾದ ಸೂಚಕರ ಹೆಸರ:** Pattepura Huligemma
2. Father/Husband Name: V Manjunatha
3. Address: m suguru
siruguppa tq
Ballari
Karnataka,
4. Mobile:
5. **ಸಂದರ್ಶನದ ಉದ್ದೇಶ**

ದೂರುದಾರರಾದ ಪತ್ತೆಪರ ಹುಲಿಗಮ್ಮ ಗಂಡ ವಿ ಮಂಜುನಾಥ ವ:27 ವರ್ಷ, ವಾಸ: ವಾರ್ಡ್ ನ-03 ಮುಖ್ಯ ರಸ್ತೆರ ಮಣರು ಸೂಗೂರು ಗ್ರಾಮ ಸಿರುಗುಪ್ಪ ತಾಲೂಕು ರವರು ಠಾಣೆಗೆ ಖುದ್ದಾಗಿ ಹಾಜರಾಗಿ ನೀಡಿದ ದೂರಿನ ಸಾರಾಂಶವೇನೆಂದರೆ, ತಾವು ಶಾರದಾ ಮಹಿಳಾ ಕಲಾ ಮತ್ತು ವಾಣಿಜ್ಯ ಪದವಿ ಪೂರ್ವ ಮಹಾವಿದ್ಯಾಲಯ ಸಿಂಧನೂರು 2015-2016 ನೇ ಸಾಲಿನಲ್ಲಿ ದ್ವಿತಿಯ ಪಿಯುಸಿ ವ್ಯಾಸಾಂಗ ಮಾಡಿ ಉತ್ತೀರ್ಣನಾಗಿರುತ್ತೇನೆ ನಂತರ ಸದರಿ ವಿಧ್ಯಾಲಯದಿಂದ ಮೂಲ ವರ್ಗಾವಣೆ ಪ್ರಮಾಣ ಪತ್ರವನ್ನು ಪಡೆದುಕೊಂಡಿದ್ದು ನಾನು ಸಿರುಗುಪ್ಪ ತಾಲೂಕು ಮಣ್ಣೂರು ಸೂಗೂರು ಗ್ರಾಮದ ನಮ್ಮ ಸ್ವಗೃಹದಲ್ಲಿ,, ಮನೆಯ ಸ್ವಚ್ಛಮಾಡುವ ಸಮಯದಲ್ಲಿ ದಿನಾಂಕ:-17-06-2026 ರಂದು ನನ್ನ ದ್ವಿತಿಯ ಪಿಯುಸಿ ಮೂಲ ವರ್ಗಾವಣೆ ಪ್ರಮಾಣ ಪತ್ರ ಏಕಸ್ಮಿಕವಾಗಿ ಬಿದ್ದು ಕಳೆದು ಹೋಗಿರುತ್ತದೆ. ಎಷ್ಟೇ ಹುಡುಕಿದರೂ ಸಿಕ್ಕಿರುವುದಿಲ್ಲವೆಂದು ಸಾಕಷ್ಟು ಹುಡುಕಾಡಿ ನೋಡಿದರೂ ಸಿಕ್ಕಿರುವುದಿಲ್ಲ... ಕಾರಣ ಕಳೆದುಹೋಗಿರುವ ದ್ವಿತಿಯ ಪಿಯುಸಿ ಮೂಲ ವರ್ಗಾವಣೆ ಪ್ರಮಾಣ ಪತ್ರ ಪತ್ತೆ ಮಾಡಿಕೊಡಬೇಕೆಂದು ದೂರು ಇದ್ದ ಮೇರೆಗೆ ಠಾಣಾ ಡಿಪಿ, ಸಂಖ್ಯೆ:136/2026 ನೇದರಲಿ, ದಾಖಲಿಸಿಕೊಂಡು ಕ್ರಮ ಕೈಗೊಂಡಿರುತ್ತೇನೆ.

6. Counter Party Details
7. Application/Doc : Yes
8. **ಸ್ವಾಗತಕಾರರ ಸಹಿ:**

ಠಾಣಾಧಿಕಾರಿ
RAMANJANARPA H.K. 52-HC
Sirigeri PS
ಸಿರಿಗೇರಿ ಪೊಲೀಸ್ ಠಾಣೆ
ತಾ। ಬಳ್ಳಾರಿ ಜಿ।

This is a computer generated document and does not require signature.

# ಮಾದಕದ್ರವ್ಯ ಸಮಾಜಕ್ಕೆ ಮಾರಕ: ಸಂದೀಪ ಪಾಟೀಲ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**

ಮಾದಕದ್ರವ್ಯ ಮಾರಾಟ ಮತ್ತು ಸೇವನೆ ಅಪರಾಧ ಕ್ರಿಯೆಗಳಾಗಿವೆ. ಮಾದಕದ್ರವ್ಯ ಸೇವನೆ ವ್ಯಕ್ತಿಗತ ವ್ಯಸನವಾದರೂ ಇದು ಸಮಾಜಕ್ಕೆ ಮಾರಕ ಎಂದು ಬೆಳಗಾವಿ ಉತ್ತರ ವಲಯ ಪೊಲೀಸ್ ಮಹಾನಿರೀಕ್ಷಕ ಸಂದೀಪ ಪಾಟೀಲ ಹೇಳಿದರು.

ನಗರದ ಬಿ.ವಿ.ವಿ ಸಂಘದ ಎಸ್.ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ಶತಾಬ್ಧಿ ಸಭಾಭವನದಲ್ಲಿ ಬುಧವಾರ ಆಯೋಜಿಸಿದ್ದ ಮಾದಕದ್ರವ್ಯ ಜಾಗೃತಿ ಅಭಿಯಾನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿ-ಯಾಗಿ ಮಾತನಾಡಿದ ಅವರು, ತಂತ್ರಜ್ಞಾನದ ಬೆಳವಣಿಗೆಯಿಂದ ಇಂದಿನ ದಿನಗಳಲ್ಲಿ ಡ್ರಗ್ಸ್ ಸೇವನೆಯನ್ನು ಪತ್ತೆ ಹಚ್ಚುವುದು ಸುಲಭವಾಗಿದೆ. ವಿದ್ಯಾರ್ಥಿಗಳಲ್ಲಿ ಒತ್ತಡ, ಕುತೂಹಲ ಮತ್ತು ಮಾದಕದ್ರವ್ಯ ವ್ಯಸನಿ ಸ್ನೇಹಿತರ ಪ್ರಭಾವದಿಂದ ಮಾದಕದ್ರವ್ಯ ಸೇವನೆ ಹೆಚ್ಚುತ್ತಿದೆ. ಒತ್ತಡ ನಿವಾರಣೆಗೆ ಉತ್ತಮ ಹವ್ಯಾಸಗಳನ್ನು ಬೆಳೆಸಿಕೊಳ್ಳಿ. ಮಾದಕದ್ರವ್ಯ ಮಾರಾಟ ಮತ್ತು ಸೇವನೆ ನಿಮ್ಮ ಗಮನಕ್ಕೆ ಬಂದರೆ ತಕ್ಷಣವೇ ಪೊಲೀಸ್ ಇಲಾಖೆಗೆ ಮಾಹಿತಿ ನೀಡಿ. ಡ್ರಗ್ಸ್ ಸೇವನೆ ತಡೆಗಟ್ಟಿದರೆ ಅದರ ಮಾರಾಟವನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲು ಸಾಧ್ಯ ಎಂದು ಹೇಳಿದರು.

ಇನ್ನೋರ್ವ ಅತಿಥಿ ಜಿಲ್ಲಾ ಪೊಲೀಸ್ ವರಿಷ್ಠ ಸಿದ್ಧಾರ್ಥ ಗೊಯಲ್ ಮಾತನಾಡಿ, ಮಾದಕದ್ರವ್ಯಗಳಲ್ಲಿ



ಕೊಕೆನ್ ಸೇವಿಸುವವರ ಪ್ರಮಾಣ ಹೆಚ್ಚು. ಆತ್ಮವಿಶ್ವಾಸದ ಕೊರತೆ ವಿದ್ಯಾರ್ಥಿಗಳನ್ನು ಮಾದಕದ್ರವ್ಯಗಳ ವ್ಯಸನಿಯಾಗಿಸುತ್ತಿದೆ. ಈ ವ್ಯಸನ ನಿಮ್ಮ ಗುರಿ, ಕನಸು ಮತ್ತು ಭವಿಷ್ಯಕ್ಕೆ ಮಾರಕ. ಪೊಲೀಸ್ ಇಲಾಖೆಯ ಮೂಲಕ ಶಾಲಾ, ಕಾಲೇಜುಗಳಿಗೆ ನಿರಂತರ ಭೇಟಿ ನೀಡಿ ಮಾದಕದ್ರವ್ಯದ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಉತ್ತಮ ಸ್ನೇಹಿತರ ಸಹವಾಸವನ್ನು ಮೈಗೂಡಿಸಿಕೊಳ್ಳಿ ಮತ್ತು ಮಾದಕದ್ರವ್ಯದ ವ್ಯಸನದಿಂದ ದೂರವಿರಿ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಬಿ.ವಿ.ವಿ ಸಂಘದ ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ (ಬೇವೂರ), ವಿದ್ಯಾರ್ಥಿಗಳಲ್ಲಿ ಮಾದಕದ್ರವ್ಯ ವ್ಯಸನದ ಅಪಾಯಗಳ ಕುರಿತು ಜಾಗೃತಿ ಮೂಡಿಸುತ್ತಿರುವ ಪೊಲೀಸ್ ಇಲಾಖೆಯ ಪ್ರಯತ್ನ ಶ್ಲಾಘನೀಯ. ಈ ವ್ಯಸನದಿಂದ ಯುವಶಕ್ತಿ ಎಂದೇ ಪರಿಗಣಿತರಾದ ವಿದ್ಯಾರ್ಥಿಗಳನ್ನು ರಕ್ಷಿಸುವುದು ಅಗತ್ಯವಾಗಿದೆ. ಶಿಸ್ತು ಮತ್ತು ಆತ್ಮವಿಶ್ವಾಸ ಬೆಳೆಸಿಕೊಳ್ಳುವುದರಿಂದ ಮಾದಕದ್ರವ್ಯ ವ್ಯಸನದಿಂದ ದೂರವಿರಲು ಸಾಧ್ಯ. ಎಲ್ಲರೂ ಜೊತೆಯಾಗಿ ಮಾದಕದ್ರವ್ಯಮುಕ್ತಸಮಾಜದ ನಿರ್ಮಾಣಕ್ಕೆ ಶ್ರಮಿಸೋಣ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಮಾದಕದ್ರವ್ಯ ಮಾರಾಟ ಮತ್ತು ಸೇವನೆ ಗಮನಕ್ಕೆ ಬಂದರೆ ಸಾರ್ವಜನಿಕರು ಪೊಲೀಸ್ ಇಲಾಖೆಗೆ ಮಾಹಿತಿಯನ್ನು ರವಾನಿಸಲು ಅನುಕೂಲವಾಗುವಂತೆ ಕ್ಯೂ ಆರ್ ಕೋಡ್ ಬಿಡುಗಡೆ ಮಾಡಲಾಯಿತು. ಮಾಹಿತಿದಾರರ ಹೆಸರನ್ನು ಗೌಪ್ಯವಾಗಿಡಲಾಗುವುದು ಎಂದು ಜಿಲ್ಲಾ ಪೊಲೀಸ್ ವರಿಷ್ಠ ಸಿದ್ಧಾರ್ಥ ಗೊಯಲ್ ಹೇಳಿದರು.

ನಾಡಗೀತೆಯೊಂದಿಗೆ ಆರಂಭವಾದ ಕಾರ್ಯಕ್ರಮವನ್ನು ಡಾ.ನಾರಾಯಣ ಮುತಾಲಿಕ ನಿರೂಪಿಸಿದರು. ಮೆಡಿಕಲ್ ಕಾಲೇಜ್ ಪ್ರಾಚಾರ್ಯ ಡಾ.ಭುವನೇಶ್ವರಿ ಯಳಮಲಿ ಸ್ವಾಗತಿಸಿದರು. ಡಿವೈಎಸ್ಪಿ ಗಜಾನನ ಸುತಾರ ಪ್ರಾಸ್ತಾವಿಕ ಮಾತನಾಡಿದರು. ಡಾ.ವಿನೋದ ಅಕ್ಕಸಾಲಿ ನಶಾ ಮುಕ್ತ ಭಾರತ ಕುರಿತು ಉಪನ್ಯಾಸ ನೀಡಿದರು. ಪಿ.ಎಸ್.ಐ ಮಧು ಮಾದಕದ್ರವ್ಯ ಮುಕ್ತ ಸಮಾಜ ನಿರ್ಮಾಣಕ್ಕಾಗಿ ಪ್ರತಿಜ್ಞಾವಿಧಿ ಬೋಧಿಸಿದರು.

ಕಾರ್ಯಕ್ರಮದಲ್ಲಿ ಪೊಲೀಸ್ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿ, ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ಉಪಪ್ರಾಚಾರ್ಯ ಡಾ.ಸಿ.ಎಸ್.ಹಿರೇಮಠ, ಡೆಂಟಲ್ ಕಾಲೇಜ್ ಪ್ರಾಚಾರ್ಯ ಡಾ.ರವಿರಾಜ ದೇಸಾಯಿ, ನರ್ಸಿಂಗ್ ಕಾಲೇಜ್ ಪ್ರಾಚಾರ್ಯ ಡಾ.ದಿಲಿಪ್ ನಾಟೇಕರ್, ಫಿಜಿಯೋಥೆರಪಿ ಕಾಲೇಜ್ ಪ್ರಾಚಾರ್ಯ ಡಾ.ಮಹಾಂತೇಶ ಬಿರಡಿ, ಮೆಡಿಕಲ್, ಡೆಂಟಲ್, ನರ್ಸಿಂಗ್ ಮತ್ತು ಫಿಜಿಯೋಥೆರಪಿ ಕಾಲೇಜುಗಳ ಬೋಧಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಾಮಾಜಿಕ ಬದಲಾವಣೆಗೆ ಪ್ರೇರಣೆ ನೀಡಿದ ಮಾದರಿ ವ್ಯಕ್ತಿ ಕಡೇಚೂರ್

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಹೈದರಾಬಾದ್ ಸಂಸ್ಥಾನ ವಿಮೋಚನಾ ಹೋರಾಟಗಾರ ಮಹಾದೇವಪ್ಪ ಕಡೇಚೂರ್ ಅವರು ಬದುಕಿನುದ್ದಕ್ಕೂ ಆದರ್ಶದ ಬಾಳ್ವೆ ಮಾಡಿ ಅದರ ಪ್ರೇರಣೆಯಿಂದಲೇ ಅವರ ಭಾವನೆಗಳ ಸ್ಫುರಣೆಯ ಕಥೆಗಳನ್ನು ಕಟ್ಟಿ-ಕೊಟ್ಟಿದ್ದಾರೆ. ಸಾಮಾಜಿಕ ಬದಲಾವಣೆಗೆ ಪ್ರೇರಣೆ ನೀಡುವ ಕಥಾ ಹಂದರವನ್ನು ಅದು ಒಳಗೊಂಡಿದೆ ಎಂದು ರಾಜ್ಯಸಮಗ್ರ ಶಿಕ್ಷಣ ಕರ್ನಾಟಕ ಶಾಲಾ ಶಿಕ್ಷಣ ಇಲಾಖೆಯ ನಿರ್ದೇಶಕ ಡಾ.ಸತೀಶ್ ಎಸ್. ಹೊಸಮನಿ ಹೇಳಿದರು.

ಕಲಬುರಗಿಯ ಹೋಟೆಲ್ ಬೃಂದಾವನ ಗ್ರ್ಯಾಂಡ್ ಹೋಟೆಲ್ "ಬಲದೇವ್" ಸಭಾಂಗಣದಲ್ಲಿ ಜೂನ್ 24ರಂದು ಮಹಾದೇವಪ್ಪ ಕಡೇಚೂರ್ ಅವರ ಪ್ರಥಮ ಪುಣ್ಯ ಸ್ಮರಣೆಯ ಅಂಗವಾಗಿ ಅವರ "ಅಯ್ಯನ ಕಥೆಗಳು" ಸಣ್ಣ ಕಥೆಗಳ ಸಂಕಲನವನ್ನು ಬಿಡುಗಡೆ ಮಾಡಿ ಮಾತನಾಡುತ್ತಾ ಇಂತಹ ಮೌಲ್ಯಯುತ ಕಥೆಗಳ ಸಂಕಲನ ಮಕ್ಕಳಿಗೆ ದಾರಿದೀಪವಾಗಿದ್ದು ಕ್ರೀಡೆ, ಸ್ನೇಹ, ಓದುವ ಹವ್ಯಾಸ ,ಸಾಹಸ ಮಹಾಪುರುಷರ ಕಥೆಗಳು



ಪ್ರಾಣಿ ಪ್ರೀತಿ ಮುಂತಾದ ಮಕ್ಕಳ ಕಥೆಗಳು ಇನ್ನಷ್ಟು ಪ್ರಭಾವಶಾಲಿಯಾಗಿ ಮಕ್ಕಳು ಬೆಳೆಯಲು ಪ್ರೇರಣೆ ನೀಡುವ ಕೃತಿಯಾಗಿ ಮೂಡಿ ಬಂದಿದೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಡಾ. ಪಿ.ಎಸ್ ಶಂಕರ್, ಸ್ವಾಮಿರಾವ್ ಕುಲಕರ್ಣಿ ಮಾತನಾಡಿದರು. ಕರ್ನಾಟಕ ರಾಜ್ಯ ಪತ್ರಾಗಾರ ಮತ್ತು ಗ್ಯಾಸೆಟಿಯರ್ ಇಲಾಖೆಯ ಉಪ ನಿರ್ದೇಶಕರಾದ ವೀರಶೆಟ್ಟಿ ಬಿ ಗಾರಂಪಳ್ಳಿ ಪುಸ್ತಕ ಪರಿಚಯ ಮಾಡಿದರು. ಕೇಂದ್ರ ಸಾಹಿತ್ಯ ಅಕಾಡೆಮಿ ಕನ್ನಡ ಸಲಹಾ ಸಮಿತಿ ಸದಸ್ಯರಾದ ಡಾಕ್ಟರ್ ಜಯದೇವಿ ಗಾಯಕವಾಡ್ ಅಧ್ಯಕ್ಷತೆ ವಹಿಸಿಮೌಲ್ಯ ಕುಸಿಯುತ್ತಿರುವಾಗ ಮಕ್ಕಳ ಮನೋಧರ್ಮಕ್ಕೆ ಅನುಗುಣವಾಗಿ ಕಥೆಗಳ ಮೂಲಕ ನೀತಿಯನ್ನು ಬೋಧನೆ ಮಾಡಲು ಪ್ರಯತ್ನಿಸಿದ ಕಡೆ ಚೂರು ಅವರ ಇಡೀ ಬದುಕು ಆದರ್ಶಪ್ರಾಯವಾದುದು. ಮಕ್ಕಳು ಮಹಿಳೆಯರ ಮೇಲೆ ನಡೆಯುತ್ತಿರುವ ದೌರ್ಜನ್ಯ ಅನ್ಯಾಯ ಶೋಷಣೆಗೆ ಎಚ್ಚರ ನೀಡುವ ಕೃತಿಯ ಕಥೆಗಳು ನಿಜಕ್ಕೂ ನಮಗೆ ದಾರಿ ದೀಪವಾಗಲಿದೆ ಎಂದರು. ಧರ್ಮದರ್ಶಿ ವೆಂಕಟೇಶ ಎಂ ಕಡೇಚೂರ್ ಉಪಸ್ಥಿತರಿದ್ದರು.

ಚಂದ್ರಕಾಂತ ಗುತ್ತೇದಾರ್, ಡಾ. ಹನುಮಂತ್ ರಾವ್ ದೊಡ್ಡಮನಿ, ಬೋಡೆ ರಿಯಾಝ್ ಅಹಮ್ಮದ್, ಮಹಾದೇವಯ್ಯ ಕರದಳ್ಳಿ, ಸಂಧ್ಯಾ ಹೊನಗುಂಟಿಕರ್, ನಾರಾಯಣ ಕುಲಕರ್ಣಿ, ಚಿತ್ರಶೇಖರ ಕಂಠಿ, ಸುಬ್ರಾವ್ ಕುಲಕರ್ಣಿ, ಪ್ರಭಾಕರ ಜೋಶಿ ಸೇಡಂ, ಜಮುನಾ ಗುತ್ತೇದಾರ್, ಭೀಮಣ್ಣ ಬೋನಾಳ, ಡಾ. ಸುರೇಶ್ ಹೇರೂರು, ಲಕ್ಷ್ಮಣರಾವ್ ಪೊಲೀಸ್ ಪಾಟೀಲ್, ವೀರಭದ್ರ ಸಿಂಪಿ, ಬಿ ಆರ್ ಅಣ್ಣ ಸಾಗರ್, ಕುಪೇಂದ್ರ ಶಾಸ್ತ್ರಿ ಕೃಷ್ಣಮೂರ್ತಿ ಹಳ್ಳಿಖೇಡ್ ಅನಿಲ್ ಕುಮಾರ್ ಎಚ್ ಎನ್, ಶಾಂತಾ ಭೀಮಸೇನ್ ರಾವ್ ಮತ್ತಿತರ ಅನೇಕರು ಉಪಸ್ಥಿತರಿದ್ದರು.ಡಾ. ಸದಾನಂದ ಪೆರ್ಲ ಸ್ವಾಗತ ಕೋರಿದರು. ಕಿರಣ್ ಪಾಟೀಲ್ ಪ್ರಾರ್ಥನಾ ಗೀತೆ ಹಾಡಿದರು. ಡಾ. ಗವಿಸಿದ್ದಪ್ಪ ಪಾಟೀಲ್ ಕಾರ್ಯಕ್ರಮ ನಿರೂಪಿಸಿದರು.

### ಲೇಖಕನ ಜವಾಬ್ದಾರಿ ಕೃತಿಯಲ್ಲಿ ಅನಾವರಣ

**ಸಮಾಜದ ನೈತಿಕ ಶುದ್ಧೀಕರಣಕ್ಕೆ ಕಥಾಹಂದರವನ್ನ ಹೆಣೆದು ಲೇಖಕ ತನ್ನ ಜವಾಬ್ದಾರಿಯನ್ನು ನಿರ್ವಹಿಸಿದ ಕಥಾ ಸಂಕಲನ ಇದಾಗಿದೆ. ಕಥೆಗಳ ಪಾತ್ರ ಶೈಲಿ ಭಾಷೆ ಅತ್ಯಂತ ಸರಳವಾಗಿ ಮಣ್ಣಿನ ಸೊಗಡನ್ನು ಬಿಂಬಿಸುತ್ತಿದೆ. ಹೈಸ್ಕೂಲಿನಿಂದ ಕಾಲೇಜಿನವರೆಗೆ ಓದುವ ವಿದ್ಯಾರ್ಥಿಗಳಿಗೆ ನೀತಿ ಬೋಧೆಯನ್ನು ನೀಡುವ ಉತ್ತಮ ಕೃತಿ ಎಂದು ಪುಸ್ತಕದ ಬಗ್ಗೆ ವಿಮರ್ಶೆ ಮಾಡಿದ ವೀರಶೆಟ್ಟಿ ಬಿ ಗಾರಂಪಳ್ಳಿ ಹೇಳಿದರು.**

# ತಾಲೂಕು ಕಚೇರಿಯಲ್ಲಿ ಸಾರ್ವಜನಿಕರ ಗೋಳು ಕೇಳುವವರಾರು..?

• **ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ**

ವಿಜಯನಗರ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲೂಕು ಕಚೇರಿಯಲ್ಲಿರುವ ಅಟಲ್ ಜೀ ಜನಸ್ನೇಹಿ ಕೇಂದ್ರ (ನೆಮ್ಮದಿ ಕೇಂದ್ರ) ಇಂದು ಜನಸ್ನೇಹಿ ಕೇಂದ್ರವಾಗದೇ, ಜನರನ್ನು ಸಂಕಷ್ಟಕ್ಕೆ ತಳ್ಳುವ ಕೇಂದ್ರವಾಗಿ ಮಾರ್ಪಟ್ಟಿದೆ ಎಂಬ ಆರೋಪ ಸಾರ್ವಜನಿಕರಿಂದ ಕೇಳಿಬರುತ್ತಿದೆ.

ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, ಕಲ್ಯಾಣ ಕರ್ನಾಟಕ ಪ್ರಮಾಣ ಪತ್ರ, ಸಂಧ್ಯಾ ಸುರಕ್ಷಾ ಯೋಜನೆ, ವಿಧವಾ ವೇತನ, ಅಂಗವಿಕಲ ವೇತನ ಸೇರಿದಂತೆ ಅನೇಕ ಸರ್ಕಾರಿ ಸೇವೆಗಳಿಗಾಗಿ ಪ್ರತಿದಿನ ನೂರಾರು ಜನರು ಕೇಂದ್ರಕ್ಕೆ ಆಗಮಿಸುತ್ತಿದ್ದಾರೆ. ಆದರೆ ಒಂದೇ ಕೌಂಟರ್ ಮತ್ತು ಸಿಬ್ಬಂದಿ ಕೊರತೆಯಿಂದ ಸಾರ್ವಜನಿಕರು ಗಂಟೆಗಟ್ಟಲೆ ಸರದಿಯಲ್ಲಿ ನಿಂತು ನರಳುವಂತಾಗಿದೆ.

ಬೆಳಗ್ಗೆಯಿಂದಲೇ ಸರದಿಯಲ್ಲಿ ನಿಂತರೂ ಸಂಜೆ ಕಚೇರಿ ಸಮಯ ಮುಗಿದರೂ ಅರ್ಜಿ ಸಲ್ಲಿಸಲು ಅವಕಾಶ ಸಿಗದೆ ಅನೇಕರು ಖಾಲಿ ಕೈಯಲ್ಲಿ ಮನೆಗೆ ಮರಳುತ್ತಿದ್ದಾರೆ. ವೃದ್ಧರು, ಮಹಿಳೆಯರು, ರೈತರು,




ವಿದ್ಯಾರ್ಥಿಗಳು ಹಾಗೂ ದೂರದ ಗ್ರಾಮಗಳಿಂದ ಬರುವ ಸಾರ್ವಜನಿಕರ ನೋವು ಹೇಳತೀರದು. ಪುಟ್ಟ ಮಕ್ಕಳನ್ನು ಕರೆದುಕೊಂಡು ಬರುವ ಮಹಿಳೆಯರು ಮತ್ತು ಅನಾರೋಗ್ಯದಿಂದ ಬಳಲುತ್ತಿರುವವರು ಅನುಭವಿಸುವ ಕಷ್ಟಕ್ಕೆ ಯಾರು ಹೊಣೆ?

ಇದಕ್ಕಿಂತಲೂ ವಿಷಾದನೀಯ ಸಂಗತಿಯೆಂದರೆ, ಈ ಸಮಸ್ಯೆಯನ್ನು ಸಾರ್ವಜನಿಕರು ಹಲವು ಬಾರಿ ಹಗರಿಬೊಮ್ಮನಹಳ್ಳಿ ತಾಲೂಕು ದಂಡಾಧಿಕಾರಿಗಳ (ತಹಶೀಲ್ದಾರರ) ಗಮನಕ್ಕೆ ತಂದಿದ್ದರೂ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಳ್ಳದಿರುವುದು. ಜನರ ಸಮಸ್ಯೆಗಳನ್ನು ಪರಿಹರಿಸುವ ಜವಾಬ್ದಾರಿ ಹೊಂದಿರುವ ಅಧಿಕಾರಿಗಳು ಮೌನ ವಹಿಸಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಜನಸೇವೆಗಾಗಿ ಸ್ಥಾಪನೆಯಾದ ಕೇಂದ್ರದಲ್ಲಿ ಜನರೇ ಸಂಕಷ್ಟ ಅನುಭವಿಸಬೇಕಾದರೆ ಅದರ ಅರ್ಥವೇನು? ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಗಳು ಅಧಿಕಾರಿಗಳ ನಿರ್ಲಕ್ಷ್ಯದಿಂದ ಹಳ್ಳ ಹಿಡಿಯುತ್ತಿರುವುದೇ ಎಂಬ ಪ್ರಶ್ನೆ ಸಾರ್ವಜನಿಕರನ್ನು ಕಾಡುತ್ತಿದೆ.

ಕೂಡಲೇ ಹೆಚ್ಚುವರಿ ಕೌಂಟರ್ ಆರಂಭಿಸಿ, ಅಗತ್ಯ ಸಿಬ್ಬಂದಿಯನ್ನು ನಿಯೋಜಿಸಿ, ಸಾರ್ವಜನಿಕರಿಗೆ ತ್ವರಿತ ಹಾಗೂ ಸುಗಮ ಸೇವೆ ಒದಗಿಸಬೇಕು. ಇಲ್ಲವಾದರೆ ಜನರ ಆಕ್ರೋಶ ಮತ್ತಷ್ಟು ತೀವ್ರಗೊಳ್ಳುವ ಸಾಧ್ಯತೆ ಇದೆ.

"ಜನಸ್ನೇಹಿ ಕೇಂದ್ರ" ಎಂಬ ಹೆಸರಿಗೆ ತಕ್ಕಂತೆ ಜನರಿಗೆ ಸೇವೆ ಸಿಗಬೇಕು; ಅಧಿಕಾರಿಗಳ ನಿರ್ಲಕ್ಷ್ಯದಿಂದ ಜನರ ಸಹನೆ ಪರೀಕ್ಷೆಯಾಗಬಾರದು. ಜಿಲ್ಲಾಡಳಿತ ಮತ್ತು ಸಂಬಂಧಪಟ್ಟ ಹಿರಿಯ ಅಧಿಕಾರಿಗಳು ತಕ್ಷಣ ಮಧ್ಯಪ್ರವೇಶಿಸಿ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

# ರಾಜ್ಯಾದ್ಯಂತ ಜನಜಾಗೃತಿ, ತಪಾಸಣೆ ಹಾಗೂ ಉಚಿತ ಔಷಧಿ ವಿತರಣೆ

• **ಮಲ್ಲಮ್ಮ ನುಡಿ ವಾರ್ತೆ ವಿಜಯಪುರ**

ಅನೀಮಿಯಾ ಮುಕ್ತ ಭಾರತ ಹಾಗೂ ಅನೀಮಿಯಾ ಮುಕ್ತ ಕರ್ನಾಟಕ ಅಭಿಯಾನಕ್ಕೆ ಕೈಜೋಡಿಸಿ ರಾಜ್ಯಾದ್ಯಂತ ಜನಜಾಗೃತಿ, ತಪಾಸಣೆ ಹಾಗೂ ಉಚಿತ ಔಷಧಿ ವಿತರಣೆಯ ಮೂಲಕ ಮಹತ್ವದ ಸೇವೆ ಸಲ್ಲಿಸುತ್ತಿರುವ ಗ್ರಾಮೀಣ ಅಭಿವೃದ್ಧಿ ಸಂಸ್ಥೆ (ಐ.ಆರ್.ಡಿ.) ಮತ್ತು ಸ್ಪಂದನ ಸ್ವಯಂ ಸೇವಾ ಸಂಸ್ಥೆಗಳ ಕಾರ್ಯ ಶ್ಲಾಘನೀಯವಾಗಿದೆ ಎಂದು ಜಿಲ್ಲಾ ಆಸ್ಪತ್ರೆ ವಿಜಯಪುರದ ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ. ಶಿವಾನಂದ ಮಾಸ್ತಿಹೊಳಿ ಹೇಳಿದರು.

ಮಂಗಳವಾರ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಐ.ಆರ್.ಡಿ ಮತ್ತು ಸ್ಪಂದನ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ತೆರೆಯಲಾದ ಉಚಿತ ಅನೀಮಿಯಾ ಅರಿವು, ರಕ್ತಹೀನತೆ ತಪಾಸಣೆ ಹಾಗೂ ಔಷಧಿ ವಿತರಣಾ ಕೇಂದ್ರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಅನೀಮಿಯಾ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿದ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಬಾಬು ಜಿ. ಸಜ್ಜನ ಹಾಗೂ ಸ್ಪಂದನ ಸಂಸ್ಥೆಯ ಅಧ್ಯಕ್ಷ ಮಹಾದೇವ ದೇವರ ಅವರ ನೇತೃತ್ವದಲ್ಲಿ ಜಿಲ್ಲೆಯ ತಾಳಿಕೋಟೆ ತಾಲೂಕಿನ ಮಿಣಜಗಿ ಗ್ರಾಮದಲ್ಲಿ ಪ್ರಾಯೋಗಿಕವಾಗಿ 577 ಶಾಲಾ ಮಕ್ಕಳ ರಕ್ತಹೀನತೆ ತಪಾಸಣೆ ನಡೆಸಲಾಗಿತ್ತು. ಈ ವೇಳೆ ಶೇ.38 ರಷ್ಟು ಮಕ್ಕಳು ಅನೀಮಿಯಾದಿಂದ ಬಳಲುತ್ತಿರುವುದು ಪತ್ತೆಯಾಗಿತ್ತು.



ಈ ಅನುಭವದ ಆಧಾರದ ಮೇಲೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಅನೀಮಿಯಾ ತಡೆ ಮತ್ತು ಜಾಗೃತಿ ಕಾರ್ಯಕ್ರಮವನ್ನು ವಿಸ್ತರಿಸಲಾಯಿತು. ಗುಜರಾತಿನ ಶ್ರೀಮದ್ ರಾಜಚಂದ್ರ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರವು ಆರ್ಥಿಕ ಸಹಕಾರ ನೀಡಿದ್ದು, ಕನ್ನೂರಿನ ಗ್ರಾಮ ಸುರಾಜ್ಯ ಸಂಸ್ಥೆಯೂ ಬೆಂಬಲ ನೀಡಿದೆ. ರಾಜ್ಯದ 23 ಜಿಲ್ಲೆಗಳಲ್ಲಿ 28 ಸ್ವಯಂಸೇವಾ ಸಂಸ್ಥೆಗಳ ಮೂಲಕ ಕಾರ್ಯಕ್ರಮ ಅನುಷ್ಠಾನಗೊಳ್ಳುತ್ತಿದ್ದು, ಎರಡು ವರ್ಷ ಮೇಲ್ಪಟ್ಟ ಮಕ್ಕಳಿಂದ ಹಿಡಿದು ಎಲ್ಲಾ ವರ್ಗದ ಜನರಿಗೆ ಉಚಿತ ಅನೀಮಿಯಾ ತಪಾಸಣೆ, ಔಷಧಿ ವಿತರಣೆ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಇಲ್ಲಿಯವರೆಗೆ ರಾಜ್ಯದಲ್ಲಿ 15.50 ಲಕ್ಷಕ್ಕೂ ಹೆಚ್ಚು ಜನರಿಗೆ ರಕ್ತಹೀನತೆ ಪರೀಕ್ಷೆ ನಡೆಸಿ ಉಚಿತ ಔಷಧಿ ವಿತರಿಸಲಾಗಿದೆ. ಜಿಲ್ಲೆಯಲ್ಲಿ ಮಾತ್ರ 1.06 ಲಕ್ಷಕ್ಕೂ ಅಧಿಕ ಜನರಿಗೆ ಉಚಿತ ತಪಾಸಣೆ ನಡೆಸಲಾಗಿದೆ. ತಪಾಸಣೆಯಲ್ಲಿ ಜಿಲ್ಲೆಯ ಸುಮಾರು ಶೇ.40 ರಷ್ಟು ಜನರಲ್ಲಿ ವಿವಿಧ ಹಂತದ ರಕ್ತಹೀನತೆ ಕಂಡುಬಂದಿದೆ.

ಮಕ್ಕಳಿಗೆ ಪೂರಕ ಪೌಷ್ಠಿಕ ಸಿರಪ್‌ಗಳು, ಎಲ್ಲಾ ವಯೋಮಾನದವರಿಗೆ ಜಂತಿನಾಶಕ ಔಷಧಿಗಳು ಹಾಗೂ ಕಬ್ಬಿಣಾಂಶದ ಮಾತ್ರೆಗಳನ್ನು ಉಚಿತವಾಗಿ ವಿತರಿಸಲಾಗುತ್ತಿದೆ. ತಪಾಸಣೆಗೆ ಒಳಪಟ್ಟವರನ್ನು ಮೂರು ತಿಂಗಳ ಬಳಿಕ ಮರುಪರೀಕ್ಷೆ ನಡೆಸುವ ಯೋಜನೆಯೂ ರೂಪಿಸಲಾಗಿದೆ.

ಗ್ರಾಮೀಣ ಅಭಿವೃದ್ಧಿ ಸಂಸ್ಥೆ ಹಾಗೂ ಸ್ಪಂದನ ಸಂಸ್ಥೆಗಳು ರಾಜ್ಯದಲ್ಲಿ ಒಂದು ಕೋಟಿ ಜನರನ್ನು ಅನೀಮಿಯಾ ತಪಾಸಣೆಗೆ ಒಳಪಡಿಸುವ ಗುರಿಯನ್ನು ಹೊಂದಿದ್ದು, ಈ ಮೂಲಕ ಸಾರ್ವಜನಿಕ ಆರೋಗ್ಯ ಕ್ಷೇತ್ರದಲ್ಲಿ ಸರ್ಕಾರದ ಪ್ರಯತ್ನಗಳಿಗೆ ಪೂರಕವಾಗಿ ಕಾರ್ಯನಿರ್ವಹಿಸುತ್ತಿವೆ.

ಇತ್ತೀಚೆಗೆ ಜಿಲ್ಲಾ ಪಂಚಾಯಿತಿ ವತಿಯಿಂದ ನಡೆದ ರಾಷ್ಟ್ರೀಯ ಪಂಚಾಯತ್ ರಾಜ್ ದಿನಾಚರಣೆಯಲ್ಲಿ ಅನೀಮಿಯಾ ತಡೆಗಟ್ಟುವಲ್ಲಿ ಉತ್ತಮ ಕಾರ್ಯನಿರ್ವಹಣೆಗಾಗಿ ಎರಡೂ ಸಂಸ್ಥೆಗಳಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗಿದೆ.

ಡಾ. ಬಾಬು ಜಿ. ಸಜ್ಜನ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಗ್ರಾಮೀಣ ಅಭಿವೃದ್ಧಿ ಸಂಸ್ಥೆ ಮಾತನಾಡಿ, ವಿಜಯಪುರದಿಂದ ಆರಂಭವಾದ ಅನೀಮಿಯಾ ಕಾರ್ಯಕ್ರಮ ಇಂದು ರಾಜ್ಯದಾದ್ಯಂತ ವಿಸ್ತರಿಸಿದೆ. ಆರೋಗ್ಯದ ಮೂಲಭೂತ ಅಗತ್ಯಗಳಲ್ಲಿ ಒಂದಾದ ರಕ್ತಹೀನತೆ ತಪಾಸಣೆಯನ್ನು ಉಚಿತವಾಗಿ ಒದಗಿಸುವ ಮೂಲಕ ಒಂದು ಕೋಟಿ ಜನರನ್ನು ತಲುಪುವ ಗುರಿ ಹೊಂದಿದ್ದೇವೆ ಎಂದು ತಿಳಿಸಿದರು.

ಶ್ರೀ ಎಂ.ಎಸ್. ದೇವರ, ಮಾತನಾಡಿ, ಸಶಕ್ತ ಭಾರತ ನಿರ್ಮಾಣಕ್ಕೆ ಆರೋಗ್ಯವಂತ ಮಕ್ಕಳ ಅಗತ್ಯವಿದೆ. ಅನಾರೋಗ್ಯಕರ ಆಹಾರ ಪದ್ಧತಿಗಳ ಪರಿಣಾಮ ಮಕ್ಕಳಲ್ಲಿ ಅನೀಮಿಯಾ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಉಚಿತ ತಪಾಸಣೆ, ಜಾಗೃತಿ ಹಾಗೂ ಪೂರಕ ಔಷಧಿ ವಿತರಣೆಯ ಮೂಲಕ ರಾಜ್ಯಾದ್ಯಂತ ಸೇವೆ ಸಲ್ಲಿಸಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಅಧಿಕಾರಿ, ಸಿಬ್ಬಂದಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದರು.

## ಟಾಟಾ ಪವರ್‌ಗೆ ಪರವಾನಗಿ ನೀಡದಂತೆ ಸಾರ್ವಜನಿಕರರಿಂದ ಮನವಿ



**ಗುರುಮಠಕಲ್:** ಕರ್ನಾಟಕ ಸರ್ಕಾರದ ಸ್ವಾಮ್ಯದ ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಖಾಸಗಿ ಸಂಸ್ಥೆಯಾದ ಟಾಟಾ ಪವರ್ ಕಂಪನಿ ಲಿಮಿಟೆಡ್ ಗೆ ವಿದ್ಯುತ್ ವಿತರಣಾ ಪರವಾನಗಿ ನೀಡಬಾರದು ಎಂದು ಗುರುಮಠಕಲ್ ಸಾರ್ವಜನಿಕರು ಮನವಿ ಸಲ್ಲಿಸಿದರು.

ಗುರುಮಠಕಲ್ ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಮಾನಪ್ಪ ಮೂಲಕ ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ. ಜೆ. ಜಾರ್ಜ್ ಅವರಿಗೆ ಮನವಿ ಪತ್ರ ಸಲ್ಲಿಸಿದ ಸಾರ್ವಜನಿಕರು, ರಾಜ್ಯದ ವಿದ್ಯುತ್ ವಿತರಣಾ ಕಂಪನಿಗಳ ವ್ಯಾಪ್ತಿಯ ಆಯ್ದ ಪ್ರದೇಶಗಳಲ್ಲಿ ಟಾಟಾ ಪವರ್ ಸಮಾನಾಂತರ ವಿದ್ಯುತ್ ವಿತರಣಾ ಜಾಲ ಆರಂಭಿಸಲು ಅರ್ಜಿ ಸಲ್ಲಿಸಿರುವ ಹಿನ್ನೆಲೆಯಲ್ಲಿ ಪರವಾನಗಿ ನೀಡದಂತೆ ಒತ್ತಾಯಿಸಿದರು.

ಖಾಸಗಿ ಸಂಸ್ಥೆಗೆ ಪರವಾನಗಿ ನೀಡಿದರೆ ರೈತರಿಗೆ ನೀಡಲಾಗುತ್ತಿರುವ ರಿಯಾಯಿತಿ ದರದ ವಿದ್ಯುತ್ ಹಾಗೂ ಸಾರ್ವಜನಿಕ ಹಿತಾಸಕ್ತಿಗೆ ಧಕ್ಕೆಯಾಗುವ ಸಾಧ್ಯತೆ ಇದೆ. ಆದ್ದರಿಂದ ಟಾಟಾ ಪವರ್ ಸಲ್ಲಿಸಿರುವ ಅರ್ಜಿಯನ್ನು ತಿರಸ್ಕರಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಈ ಸಂದರ್ಭದಲ್ಲಿ ಕಾಂಗ್ರೆಸ್ ಯುವ ಮುಖಂಡ ಸಯ್ಯದ್ ಬಾಬಾ, ತಿಮ್ಮಾರೆಡ್ಡಿ ಬೆಳಗೊಂದಿ ಸರೋಜಿನಿ ನಾಯ್ಡು, ಲಾಲ್ ಅಹ್ಮದ್, ನಾರಾಯಣ ರಾಠೋಡ್, ಸಹಮದ್, ಮೋಸಿನ್, ಗಂಗು ಸ್ವಾಮಿ, ಅಶೋಕ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ವಾರ್ತಾ ಇಲಾಖೆಗೆ ಹೊಸ ಆಯುಕ್ತರ ನೇಮಕ



**ದಾವಣಗೆರೆ:** ಡಿಐಜಿಪಿ (ನೇಮಕಾತಿ) ಆಗಿದ್ದ ಐಪಿಎಸ್ ಅಧಿಕಾರಿ ಎಂ.ಎನ್.ಅನುಚೇತ್ ಅವರನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಯುಕ್ತರಾಗಿ ರಾಜ್ಯ ಸರ್ಕಾರ ವರ್ಗಾವಣೆ ಮಾಡಿದೆ. ಈ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಜೂನ್ 24 ರ ಬುಧವಾರ ಅಧಿಸೂಚನೆ ಹೊರಡಿಸಲಾಗಿದೆ.

ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತರ ಹುದ್ದೆಯ ಹೆಚ್ಚುವರಿ ಪ್ರಭಾರದಲ್ಲಿಯೂ ಕೂಡ ಇವರನ್ನು ಇರಿಸಲಾಗಿದೆ.

ಹಾಲೀ ಆಯುಕ್ತರಾಗಿದ್ದ ಹೇಮಂತ್ ಎಂ.ನಿಂಬಾಳ್ಕರ್ ಅವರನ್ನು ವರ್ಗಾವಣೆ ಮಾಡಲಾಗಿದೆ.

## ನೂತನ ಕ್ರಸ್ಟ್ ಗೇಟ್ ಲೋಕಾರ್ಪಣೆ ಇಂದು



**ಕೊಪ್ಪಳ:** ನಾಲ್ಕು ಜಿಲ್ಲೆಗಳ ಜೀವನಾಡಿಯಾಗಿರುವ ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್ ಗೇಟ್ ಲೋಕಾರ್ಪಣೆ ಸಮಾರಂಭಕ್ಕೆ ತುಂಗಭದ್ರೆಯ ಅಂಗಳ ಸಜ್ಜಾಗಿದೆ. ಜೂನ್ 25 ರಂದು ಉದ್ಘಾಟನೆಗೊಳ್ಳಲಿದೆ.

ತಾಲೂಕಿನ ಮುನಿರಾಬಾದ್ ಗ್ರಾಮದ ಪ್ರೌಢ ಶಾಲಾ ಆವರಣದಲ್ಲಿ ಬೃಹತ್ ವೇದಿಕೆಯು ಸಿದ್ಧವಾಗುತ್ತಿದ್ದು, ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಆಗಮನ ವಿಶೇಷವಾಗಿದೆ. ಮೂರು ರಾಜ್ಯಗಳ ಸಚಿವರು, ಶಾಸಕರು, ಸರಕಾರದ ಉನ್ನತ ಮಟ್ಟದ ಅಧಿಕಾರಿಗಳು ಆಗಮಿಸುತ್ತಿದ್ದಾರೆ.

ಈ ಕಾರ್ಯಕ್ರಮ ಶಿಸ್ತು ಬದ್ಧವಾಗಿ ನಡೆಯಲು ಭದ್ರತೆ ಮತ್ತು ಮುನ್ನೆಚ್ಚರಿಕೆ ಕ್ರಮ ಕೈಗೊಂಡಿದೆ. ವೇಗವಾಗಿ ನಡೆಯುತ್ತಿವೆ. ರಾಜ್ಯದ ಜಲ ಸಂಪನ್ಮೂಲ ಸಚಿವರು, ತುಂಗಭದ್ರಾ ಅಣೆಕಟ್ಟಿನ ಅಚ್ಚುಕಟ್ಟು ಪ್ರದೇಶದ ಸಂಸದರು ಹಾಗೂ ಶಾಸಕರು ಹಲವು ಸಭೆಗಳನ್ನು ನಡೆಸಿ ಕಾರ್ಯಕ್ರಮದ ಸಿದ್ಧತೆಗಾಗಿ ಅಧಿಕಾರಿಗಳಿಗೆ ಮಾರ್ಗದರ್ಶನ ಮಾಡುತ್ತಿದ್ದಾರೆ. ಬಳ್ಳಾರಿ ವಲಯದ ಐಜಿಪಿ ಡಾ.ಹರ್ಷ ಪಿ. ಎಸ್., ಜಿಲ್ಲಾಧಿಕಾರಿ ಡಾ.ಸುರೇಶ ಇಟ್ನಾಳ್, ಎಸ್ಪಿ ಡಾ.ರಾಮ್ ಎಲ್ ಅರಸಿದ್ದಿ ಜತೆಗೆ ವಿಜಯನಗರ ಹಾಗೂ ಬಳ್ಳಾರಿ ಜಿಲ್ಲೆಗಳ ಡಿಸಿ, ಎಸ್ಪಿ ಒಗ್ಗೂಡಿ, ಅಧಿಕಾರಿಗಳೊಂದಿಗೆ ಈಗಾಗಲೇ ಹಲವು ಸುತ್ತಿನ ಸಭೆಗಳನ್ನು ನಡೆಸಿದ್ದಾರೆ.

# ರೈತರ ಬೃಹತ್ ಹಕ್ಕೊತ್ತಾಯ: ಸಮಗ್ರ ಜಲಸೌಲಭ್ಯಕ್ಕೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಆಲಮಟ್ಟಿ

ವಿಜಯಪುರ ಜಿಲ್ಲೆಯ ನಾಗಠಾಣ ಮೀಸಲು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕನ್ನೂರ ಗ್ರಾಮ ಪಂಚಾಯಿತಿ ರೈತರು ಹಾಗೂ ಸಾರ್ವಜನಿಕರು, "ಹೊರ್ತಿ–ರೇವಣಸಿದ್ದೇಶ್ವರ ಏತ ನೀರಾವರಿ ಯೋಜನೆ"ಯಲ್ಲಿ ತಮ್ಮ ಜಮೀನುಗಳಿಗೆ ಸಮಗ್ರ ಜಲಸೌಲಭ್ಯ ಕಲ್ಪಿಸುವಂತೆ ಒತ್ತಾಯಿಸಿ ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ (ಕೆಬಿಜೆಎನ್‌ಎಲ್) ಆಲಮಟ್ಟಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದಾರೆ.

ಮನವಿಯಲ್ಲಿ, ಇಂಡಿ ಮತ್ತು ವಿಜಯಪುರ ತಾಲ್ಲೂಕುಗಳ ಸುಮಾರು 28 ಸಾವಿರ ಹೆಕ್ಟೇರ್ ನೀರಾವರಿ ವಂಚಿತ ಪ್ರದೇಶಕ್ಕೆ ಆಲಮಟ್ಟಿ ಜಲಾಶಯದ ಹಿನ್ನೀರನ್ನು ಬಳಸಿ ಸುಮಾರು ₹2539 ಕೋಟಿ ವೆಚ್ಚದಲ್ಲಿ ಅನುಷ್ಠಾನಗೊಳ್ಳುತ್ತಿರುವ ಹೊರ್ತಿ–ರೇವಣಸಿದ್ದೇಶ್ವರ ಏತ ನೀರಾವರಿ ಯೋಜನೆಯನ್ನು ಸ್ವಾಗತಿಸಿರುವ ರೈತರು, ಯೋಜನೆಯ ಕಾಮಗಾರಿಗಳಲ್ಲಿ ಕನ್ನೂರ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಅನ್ಯಾಯವಾಗುತ್ತಿದೆ ಎಂದು ಆರೋಪಿಸಿದ್ದಾರೆ.



ಕನ್ನೂರ ವ್ಯಾಪ್ತಿಯ ಫಲವತ್ತಾದ ಕೃಷಿ ಜಮೀನುಗಳ ಮೂಲಕ ಬೃಹತ್ ಜಲವಾಹಿನಿ ಪೈಪ್‌ಲೈನ್‌ಗಳು ಹಾದು ಹೋಗುತ್ತಿದ್ದರೂ, ಸ್ಥಳೀಯ ರೈತರಿಗೆ ನೀರಾವರಿ ಸೌಲಭ್ಯ ಕಲ್ಪಿಸದೇ ಕೈಬಿಡಲಾಗಿದೆ. ತಮ್ಮ ಜಮೀನುಗಳ ಮೂಲಕ ನೀರು ಹರಿದು ಇತರ ಪ್ರದೇಶಗಳಿಗೆ ಸಾಗುತ್ತಿರುವಾಗ, ತಾವು ಮಾತ್ರ ನೀರಿನ ಕೊರತೆಯಿಂದ ಬಳಲುತ್ತಿರುವುದು ರೈತರ ಅಸಮಾಧಾನಕ್ಕೆ ಕಾರಣವಾಗಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಇನ್ನೂ ಕೆಲವು ಪ್ರದೇಶಗಳಲ್ಲಿ ಭೀಮಾ ನದಿಯ ನೀರು ಈಗಾಗಲೇ ಲಭ್ಯವಿದ್ದು, ಹೆಚ್ಚುವರಿ ನೀರಿನಿಂದ ಜಮೀನುಗಳು ಚೌಳು ಹಿಡಿಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಅಂತಹ ಪ್ರದೇಶಗಳಿಗೆ ಮತ್ತಷ್ಟು ನೀರು ಪೂರೈಸುವ ಬದಲು, ತೀವ್ರ ಜಲಕ್ಷಾಮ ಎದುರಿಸುತ್ತಿರುವ ಕನ್ನೂರ ಭಾಗಕ್ಕೆ ಆದ್ಯತೆ ನೀಡಬೇಕು ಎಂದು ರೈತರು ಆಗ್ರಹಿಸಿದ್ದಾರೆ.

ನಾಗಠಾಣ ಕ್ಷೇತ್ರವು ಮೀಸಲು ವಿಧಾನಸಭಾ ಕ್ಷೇತ್ರವಾಗಿದ್ದು, ಹಿಂದುಳಿದ ಹಾಗೂ ಶೋಷಿತ ರೈತರ ಅಭಿವೃದ್ಧಿಗೆ ಆದ್ಯತೆ ನೀಡಬೇಕಾದ ಸಂದರ್ಭದಲ್ಲಿ ಕನ್ನೂರ ಭಾಗವನ್ನು ನಿರ್ಲಕ್ಷಿಸಲಾಗಿದೆ ಎಂದು ಮನವಿಯಲ್ಲಿ ಆರೋಪಿಸಲಾಗಿದೆ. ಜಲವಿತರಣೆಯಲ್ಲಿ ಸಮಾನತೆ ಮತ್ತು ನ್ಯಾಯಯುತ ಹಂಚಿಕೆ ಕಾಪಾಡಬೇಕೆಂದು ರೈತರು ಒತ್ತಾಯಿಸಿದ್ದಾರೆ.

**ಪ್ರಮುಖ ಬೇಡಿಕೆಗಳು**

- ಕನ್ನೂರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಜಮೀನುಗಳಿಗೆ ಹೊರ್ತಿ–ರೇವಣಸಿದ್ದೇಶ್ವರ ಏತ ನೀರಾವರಿ ಯೋಜನೆಯಲ್ಲೇ ಸಮಗ್ರ ಜಲಸೌಲಭ್ಯ ಮರುಸೇರ್ಪಡೆಗೊಳಿಸಬೇಕು.
- ರೈತವಿರೋಧಿ ತಾಂತ್ರಿಕ ನೀಲನಕ್ಷೆಯನ್ನು ತಕ್ಷಣ ಪರಿಷ್ಕರಿಸಿ ಹೊಸ ನಕ್ಷೆ ಬಿಡುಗಡೆ ಮಾಡಬೇಕು.
- ಕನ್ನೂರ ವ್ಯಾಪ್ತಿಯ ಕೃಷಿ ಭೂಮಿಗಳಲ್ಲಿ ನಡೆಯುತ್ತಿರುವ ಪೈಪ್‌ಲೈನ್ ಅಗೆಯುವಿಕೆ ಹಾಗೂ ಇತರೆ ಕಾಮಗಾರಿಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಬೇಕು.
- ಕಲ್ಲು ಬಂಡೆಗಳನ್ನು ಸೀಳಲು ನಡೆಸಲಾಗುತ್ತಿರುವ ನಿಯಂತ್ರಿತ ಸ್ಫೋಟ (ಕಂಟ್ರೋಲ್ ಬ್ಲಾಸ್ಟಿಂಗ್) ಕಾರ್ಯಗಳನ್ನು ತಕ್ಷಣ ನಿಲ್ಲಿಸಬೇಕು.

ಬೇಡಿಕೆಗಳನ್ನು ಈಡೇರಿಸದಿದ್ದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟದ ರೂಪುರೇಷೆ ರೂಪಿಸುವ ಎಚ್ಚರಿಕೆಯನ್ನು ರೈತರು ನೀಡಿದ್ದಾರೆ. ಕನ್ನೂರ ಭಾಗದ ರೈತರಿಗೆ ನ್ಯಾಯ ಒದಗಿಸಿ, ಯೋಜನೆಯ ಲಾಭವನ್ನು ಸಮಾನವಾಗಿ ಹಂಚಿಕೆ ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳಿಗೆ ಮನವಿ ಸಲ್ಲಿಸಲಾಗಿದೆ.

# ಮನ್ರೇಗಾ ಹೊಸರೂಪ ವಿಬಿಜಿ ರಾಮ್ ಜಿ ಜುಲೈ1 ರಿಂದಲೇ ಜಾರಿ: ಖಂಡ್ರೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಗ್ರಾಮೀಣ ಭಾಗದ ಕುಟುಂಬಗಳಿಗೆ ಉದ್ಯೋಗದ ಖಾತ್ರಿ ನೀಡಿದ್ದ ನರೇಗಾ ಹೊಸ ಸ್ವರೂಪ ವಿಕ್ಷಿತ ಭಾರತ್ ಜಿ ರಾಮ್ ಜಿಯಿಂದ ರಾಜ್ಯ ಸರ್ಕಾರದ ಮೇಲೆ ಹೆಚ್ಚಿನ ಹೊರೆಯಾದರೂ ಗ್ರಾಮೀಣ ಜನರ, ಮಹಿಳೆಯರ, ವಂಚಿತರ, ದುರ್ಬಲರ ಹಿತದೃಷ್ಟಿಯಿಂದ ಜುಲೈ 1ರಿಂದಲೇ ಜಾರಿಗೆ ತರಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟಪಡಿಸಿದ್ದಾರೆ.

ಯುಪಿಎ ಸರ್ಕಾರ ಜಾರಿಗೆ ತಂದಿದ್ದ ಮಹಾತ್ಮಾ ಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕೇಂದ್ರ ಸರ್ಕಾರ 90:10 ಅನುಪಾತದಲ್ಲಿ ವೇತನ ಭರಿಸುತ್ತಿತ್ತು. ರಾಜ್ಯ ಸರ್ಕಾರ ಕೇವಲ 10ರಷ್ಟು ಹಣ ನೀಡುತ್ತಿತ್ತು. ಆದರೆ, ಈಗ 60:40ರ ಅನುಪಾತದಲ್ಲಿ ವೆಚ್ಚ ಭರಿಸಬೇಕಾಗಿದ್ದು ರಾಜ್ಯಗಳ ಮೇಲೆ ಹೆಚ್ಚಿನ ಹೊರೆ ಆಗುತ್ತಿದೆ ಎಂದರು.



2006ರಿಂದ 2026ರಲ್ಲಿ ಇಲ್ಲಿಯವರೆಗೆ ಕೇಂದ್ರ ಸರ್ಕಾರ ನರೇಗಾ ಅಡಿಯಲ್ಲಿ 56492 ಕೋಟಿ ರೂ. ಭರಿಸಿದ್ದರೆ, ರಾಜ್ಯ ಸರ್ಕಾರ 4821 ಕೋಟಿ ಮಾತ್ರ ಭರಿಸಿ ಸುಮಾರು 182 ಕೋಟಿ ಮಾನವ ದಿನಗಳ ಉದ್ಯೋಗ ಒದಗಿಸಿತ್ತು. ಆದರೆ ಈಗ ಒಂದೇ ವರ್ಷಕ್ಕೆ 3806 ಕೋಟಿ ರೂ. ವೆಚ್ಚ ಭರಿಸುವ ಸ್ಥಿತಿ ಬಂದಿದೆ. ಇದು ರಾಜ್ಯದ ಮೇಲೆ ಆಗುವ ದೊಡ್ಡ ಹೊರೆ ಎಂದು ತಿಳಿಸಿದರು.

ಸಂಸತ್ತಿನಲ್ಲಿ ವಿಬಿಜಿ ರಾಮ್ ಜಿ ಕಾಯಿದೆ ತರುವ ಮುನ್ನ ಕೇಂದ್ರ ಸರ್ಕಾರ ರಾಜ್ಯಗಳ ಸಲಹೆ ಪಡೆಯಬೇಕಾಗಿತ್ತು. ರಾಜ್ಯಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕಾಗಿತ್ತು. ಒಕ್ಕೂಟ ವ್ಯವಸ್ಥೆಯಲ್ಲಿ ರಾಜ್ಯಗಳನ್ನು ಬಿಟ್ಟು ಕಾಯಿದೆ ರೂಪಿಸಿದ ಬಗ್ಗೆಯೂ ಕರ್ನಾಟಕ ರಾಜ್ಯ ಸರ್ಕಾರದ ವಿರೋಧವಿದೆ. ಇದನ್ನು ಸುಪ್ರೀಂಕೋರ್ಟ್ ನಲ್ಲಿ ಪ್ರಶ್ನಿಸಲಾಗುತ್ತಿದೆ. ಜೊತೆಗೆ ಕೇಂದ್ರ ಸರ್ಕಾರ ಹಂತ ಹಂತವಾಗಿ ಕನಿಷ್ಠ 80:20ರ ಅನುಪಾತದಲ್ಲಾದರೂ ರಾಜ್ಯಗಳ ನೆರವಿಗೆ ನಿಲ್ಲಬೇಕು ಎಂದು ಆಗ್ರಹಿಸಲಾಗುತ್ತಿದೆ ಎಂದರು.

ಕೇಂದ್ರ ಸರ್ಕಾರ ವಿಬಿಜಿ ರಾಮ್ ಜಿ ಅಡಿ ರಾಜ್ಯಕ್ಕೆ 5709 ಕೋಟಿ ರೂ. ಹಂಚಿಕೆ ಮಾಡಿದೆ. ಗ್ರಾಮೀಣ ಜನರಿಗೆ ತೊಂದರೆ ಆಗದಂತೆ ಯೋಜನೆಗೆ ರಾಜ್ಯ ಸರ್ಕಾರದ ವತಿಯಿಂದ 3806 ಕೋಟಿ ರೂ. ಭರಿಸಬೇಕಾಗುತ್ತದೆ. ಈ ಬಗ್ಗೆ ಈಗಾಗಲೇ ಮುಖ್ಯಮಂತ್ರಿಯವರಿಗೆ ಮನವಿ ಮಾಡಿದ್ದು, ಅವರು ಸಮ್ಮತಿಸಿದ್ದಾರೆ ಎಂದರು.

ಕೇಂದ್ರ ಸರ್ಕಾರ ಅವೈಜ್ಞಾನಿಕವಾಗಿ ಬೇಸಾಯದ ಸಮಯದಲ್ಲಿ 60 ದಿನಗಳ ಕಾಲ ಉದ್ಯೋಗ ನೀಡದಿರುವಂತೆ ಸೂಚಿಸಿದೆ. ಇದು ಗ್ರಾಮೀಣ ಕುಟುಂಬಗಳಿಗೆ ಮಾರಕವಾಗಿದೆ. ಕಾರಣ ಈಗ ಅತ್ಯಾಧುನಿಕ ಕೃಷಿ ಯಂತ್ರೋಪಕರಣ ಬಂದಿದ್ದು, ಗ್ರಾಮೀಣ ಕುಟುಂಬಗಳಿಗೆ ಬೇಸಾಯದ ಸಮಯದಲ್ಲೂ ಕೃಷಿ ಉದ್ಯೋಗ ಲಭಿಸುವುದಿಲ್ಲ. ಹೀಗಾಗಿ ವಿಬಿಜಿ ರಾಮ್ ಜಿ ಅವರ ಅನ್ನವನ್ನು ಕಸಿಸಿಕೊಂಡಂತೆ ಮಾಡಿದೆ. ಇದರ ವಿರುದ್ಧ ರಾಜ್ಯ ಸರ್ಕಾರ ಆಕ್ಷೇಪಣೆ ವ್ಯಕ್ತಪಡಿಸಿದೆ ಎಂದರು. ಬರುವ 28ರಂದು ದೆಹಲಿಯಲ್ಲಿ ಕೇಂದ್ರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರೊಂದಿಗೆ ಎಲ್ಲ ರಾಜ್ಯಗಳ ಸಚಿವರ ಸಭೆ ಇದ್ದು, ಈ ಸಭೆಯಲ್ಲಿ ಈ ಎಲ್ಲ ಅಂಶಗಳ ಬಗ್ಗೆ ಪ್ರಸ್ತಾಪಿಸಲಾಗುವುದು ಎಂದು ಈಶ್ವರ ಖಂಡ್ರೆ ತಿಳಿಸಿದರು. ಬೇಡಿಕೆ ಆಧಾರದಲ್ಲಿ ಉದ್ಯೋಗ ನೀಡಬೇಕು ಎಂಬುದು ನಮ್ಮ ಒತ್ತಾಯವಾಗಿದೆ. ನಮ್ಮ ರಾಜ್ಯದಲ್ಲಿ 375 ರೂ. ಕೂಲಿ ಇದೆ. ರಾಜ್ಯ ಸರ್ಕಾರ ಕನಿಷ್ಠ ವೇತನವನ್ನು ಹೆಚ್ಚಳ ಮಾಡಿದೆ. ಇದಕ್ಕೆ ಹೊಂದುವಂತೆ ಕೇಂದ್ರವೂ ಕನಿಷ್ಠ ಕೂಲಿ ಹೆಚ್ಚಿಸಬೇಕು ಎಂದು ಈಶ್ವರ ಖಂಡ್ರೆ ಒತ್ತಾಯಿಸಿದರು.

# ಕೊನೆಯ ಬಡವರಿಗೂ ಸೌಲಭ್ಯ ತಲುಪಿಸಲು ಪ್ರಾಮಾಣಿಕ ಪ್ರಯತ್ನ: ರಾಮಪ್ಪ ಎಂ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಬೋವಿ ಅಭಿವೃದ್ಧಿ ನಿಗಮದ ವತಿಯಿಂದ ಸಮಾಜದ ಕಟ್ಟಕಡೆಯ ಬಡವರಿಗೂ ಸರ್ಕಾರದ ಸೌಲಭ್ಯಗಳನ್ನು ತಲುಪಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುತ್ತಿದ್ದು, ಬಾಕಿ ಅರ್ಜಿ ವಿಲೇವಾರಿಗೆ ಅಧಿಕಾರಿಗಳಿಗೆ 30 ದಿನಗಳ ಕಡುವು, ನಕಲಿ ಜಾತಿ ಪ್ರಮಾಣಪತ್ರ ತಡೆಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ ಅಧ್ಯಕ್ಷ ರಾಮಪ್ಪ ಎಂ ಹೇಳಿದರು.

ಬುಧುವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಮತ್ತು ಕರ್ನಾಟಕ ಬೋವಿ ಅಭಿವೃದ್ಧಿ ನಿಗಮ, ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಕುರಿತು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಈ ಬಾರಿ ನಿಗಮಕ್ಕೆ 75 ಕೋಟಿ ರೂ. ಬಜೆಟ್ ನಿಗದಿಯಾಗಿದೆ. ವಿಡಿಪಿ ಸೇರಿದಂತೆ ಒಟ್ಟು ಮೊತ್ತ ಸುಮಾರು 100 ಕೋಟಿ ರೂ. ತಲುಪುವ ನಿರೀಕ್ಷೆಯಿದೆ ಎಂದು ತಿಳಿಸಿದರು.



**13 ಗ್ಯಾರಂಟಿಗಳ ಬಲ:** ನಿಗಮದ 8 ಗ್ಯಾರಂಟಿಗಳು ಹಾಗೂ ಸರ್ಕಾರದ 5 ಪಂಚ ಗ್ಯಾರಂಟಿಗಳು ಸೇರಿ ಒಟ್ಟು 13 ಸೌಲಭ್ಯಗಳು ಸಮಾಜಕ್ಕೆ ಸಿಗುತ್ತಿವೆ. ಯಶಸ್ವಿಯಾಗಿ 10 ವರ್ಷ ಪೂರೈಸಿರುವ ನಿಗಮವು ಅನೇಕ ಪ್ರಯೋಜನಗಳನ್ನು ತಲುಪಿಸಿದೆ. ದಕ್ಷಿಣ ಕರ್ನಾಟಕಕ್ಕೆ ಹೋಲಿಸಿದರೆ ಉತ್ತರ ಕರ್ನಾಟಕ ಭಾಗದ ಬೋವಿ ಮತ್ತು ವಡ್ಡರ ಸಮಾಜದ ಜನರು ಆರ್ಥಿಕ ಹಾಗೂ ಶೈಕ್ಷಣಿಕವಾಗಿ ಹಿಂದುಳಿದಿದ್ದು, ಈ ವರ್ಷದ ಆಕ್ಷನ್ ಪ್ಲಾನ್‌ನಲ್ಲಿ ಈ ಭಾಗಕ್ಕೆ ಹೆಚ್ಚಿನ ಅನುದಾನ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ತಾಲೂಕುಗಳಲ್ಲಿ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯಲ್ಲಿ ವಿಳಂಬವಾಗಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಅವರು, 30 ದಿನಗಳ ಒಳಗಾಗಿ ಶಾಸಕರ ಆಯ್ಕೆ ಪಟ್ಟಿಯನ್ನು ಪಡೆದು ನಿಗಮದ ಮುಖ್ಯ ಕಚೇರಿಗೆ ತಲುಪಿಸಬೇಕು ಹಾಗೂ ಬಾಕಿ ಇರುವ ಅರ್ಜಿಗಳ ಸಂಖ್ಯೆಯನ್ನು ಶೂನ್ಯಕ್ಕೆ ತರಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಆದೇಶ ನೀಡಿಲಾಗಿದೆ ಎಂದು ಹೇಳಿದರು.

**ಶಿಕ್ಷಣ ಹಾಗೂ ಸಬಲೀಕರಣಕ್ಕೆ ಒತ್ತು:** ಬಡತನ ನಿರ್ಮೂಲನೆಗೆ ಶಿಕ್ಷಣವೇ ಏಕೈಕ ಮಾರ್ಗವಾಗಿದ್ದು, ಶಾಲೆ ಬಿಟ್ಟ ಮಕ್ಕಳನ್ನು ಪತ್ತೆ ಹಚ್ಚಿ ಮರಳಿ ಶಾಲೆಗೆ ಸೇರಿಸುವಂತೆ ಹಾಗೂ ಹಾಸ್ಟೆಲ್ ಸೌಲಭ್ಯ ಒದಗಿಸುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಯಿತು. ಮಹಿಳಾ ಸಂಘಗಳ ಸಬಲೀಕರಣ ಹಾಗೂ ಅಲೆಮಾರಿಗಳ ಗುರುತಿಸುವಿಕೆಗೂ ಒತ್ತು ನೀಡಲಾಗುವುದು ಎಂದು ಹೇಳಿದರು.

**ನಕಲಿ ಜಾತಿ ಪ್ರಮಾಣಪತ್ರ ತಡೆಗೆ ಕಠಿಣ ಕ್ರಮ:** ಭೋವಿ ಸಮುದಾಯಗಳ ಹೆಸರಿನಲ್ಲಿ ನಕಲಿ ಜಾತಿ ಪ್ರಮಾಣಪತ್ರ ಪಡೆದು ಅನ್ಯರು ಸೌಲಭ್ಯಗಳನ್ನು ಪಡೆಯುತ್ತಿರುವುದನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ಹಾಗೂ ತಹಶೀಲ್ದಾರರಿಗೆ ಸ್ಪಷ್ಟ ನಿರ್ದೇಶನ ನೀಡಲಾಗಿದೆ. ಇನ್ಮುಂದೆ ಜಾತಿ ಪ್ರಮಾಣಪತ್ರ ನೀಡುವ ಮುನ್ನ ಶಾಲಾ ದಾಖಲಾತಿಗಳ ಪರಿಶೀಲನೆ ಮಾಡಿ ಪ್ರಮಾಣ ಪತ್ರವನ್ನು ನೀಡಬೇಕೆಂದರು.

ವೇದಿಕೆ ಮೇಲೆ. ಕರ್ನಾಟಕ ಭೋವಿ ಅಭಿವೃದ್ಧಿ ನಿಗಮ ಪ್ರಧಾನ ವ್ಯವಸ್ಥಾಪಕ ಶಿವಸ್ವಾಮಿ. ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಜಗದೇವಪ್ಪ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಡಮನಿ, ಕರ್ನಾಟಕ ಭೋಮಿ ಅಭಿವೃದ್ಧಿ ನಿಲ್ಲಾ ವ್ಯವಸ್ಥಾಪಕ ಮರಲಿಂಗ್ ಹೊನ್ನೆಗುಂಟಿಕರ್, ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಹಾಗೂ ಸಮಾಜ ಮುಖಂಡರ ಅಧ್ಯಕ್ಷರು ಸಂಘ ಸಂಸ್ಥೆಯಗಳು ಭಾಗವಹಸಿದ್ದರು.

# ದೈವತ್ವದ ಸಾಧನೆಗೆ ಸೂಫಿಗಳ ನಾಲ್ಕು ಮಜಲು



**ಧರ್ಮ–ಮರ್ಮ**

ಡಾ.ಎಂ.ಮಹ್ಮದ್ ಬಾಷ ಗೂಳ್ಯಂ
ಪ್ರಧಾನ ಸಂಪಾದಕ, ಬೆಂಗಳೂರು

**ಕಳೆದ ಸಂಚಿಕೆಯಿಂದ...**

ಈ ಎಲ್ಲಾ ಪರಂಪರೆ, ಪಂಥಗಳಿಗಿಂತ ದೈವತ್ವದ ಸಾಧನೆಗೆ ಪ್ರಮುಖವಾಗಿ ಸೂಫಿಗಳ ನಾಲ್ಕು ಮಜಲುಗಳಿಗೆ ವಿಶೇಷ ಮಹತ್ವವಿದೆ. ಅಂದರೆ; 1 ಷರೀಯತ್, 2. ತರಿಖತ್ 3.ಮಾರಿಫತ್, 4.ಹಖೀಖತ್.

**1. ಷರೀಯತ್:** ದೇವರು ಮತ್ತು ರಸೂಲರಿಂದ ಆದೇಶಿಸಲಾದ ನಿಯಮಾವಳಿಗಳನ್ನು ಅನುಸರಿಸುವ ವಿಧಾನ.

**2. ತರೀಖತ್:** ಗಟ್ಟಿಗೊಳಿಸಿದ ಮಾರ್ಗವೆಂದು ನಿಘಂಟಿನಲ್ಲಿ ಅರ್ಥ ವಿವರಣೆ ಇದೆ. ಆದರೆ ಇದೊಂದು ಸೂಫಿಗಳ ಪಾರಿಭಾಷಿಕ ಪದ. ದೈವ ಸಾಕ್ಷಾತ್ಕಾರಕ್ಕಾಗಿ ಸೂಫಿಗಳು ಆರಂಭದಿಂದೂ ಸ್ವಂತ ಅನುಷ್ಠಾನದಿಂದ ಕಂಡ ದಿವ್ಯ ಪಥ. ದೇವೋಪಾಸನೆಗೆ ಬಳಸಿದ ತಂತ್ರೋಪಾಯ, ಸಿದ್ಧಿಯಮಾರ್ಗಗಳೇ ತರೀಖತ್.

**3. ಮಾರಿಫತ್:** ಷರಿಯತ್ತಿನ ಮಾರ್ಗದರ್ಶನದಿಂ ಉಂಟಾದ ದಿವ್ಯ ಜ್ಞಾನವೇ ಮಾರಿಫತ್.

**4.ಹಖೀಖತ್:** ಸಾಧಕನು ಮಾರಿಫತ್‌ನಿಂದ ಉಂಟಾದ ದಿವ್ಯ ಜ್ಞಾನದ ಬಲದಿಂದ ತಾನಾರೆಂಬುದನ್ನು ಅರಿತು, ಜಗದ ಚರಾಚರ ವಸ್ತು ಜೀವಿಗಳ ನಿಜ ಸ್ವರೂಪವನ್ನು ಅರಿಯುತ್ತಾನೆ. ಕರ್ತನದರ್ಶನ ಪಡೆಯುವ ಅವಕಾಶ ಉಳ್ಳವನಾಗಿ ಈ ಧರೆಯ ಮೇಲೆ ದೇವರ ಪ್ರತಿನಿಧಿಯಾಗಿ ಲೋಕಕಲ್ಯಾಣ ಕಾರ್ಯಗಳನ್ನು ಮಾಡುತ್ತಾನೆ. ಈ ನಾಲ್ಕೂ ಮಜಲುಗಳ ಸಂಕ್ಷಿಪ್ತ ರೂಪವನ್ನು ಹೀಗೆ ದಾಖಲಿಸಬಹುದು;



ಷರೀಯತ್; ಬಾಹ್ಯಾಚರಣೆಗಳ ಆದೇಶವಾಗಿದೆ, ತರೀಖತ್; ಅಂತರಂಗದ ಶುದ್ಧತೆಯಾಗಿದೆ. ಹಖೀಖತ್; ದೇವರ ಸುಳುಹಿನ ಆಧಾರದ ಮೇಲೆ ಭಗವತ್‌ದರ್ಶನ ಪಡೆಯುವುದೇ ಆಗಿದೆ. ಹಖೀಖತ್‌ಮಜಲಿಗಿಂತ ಮುಂಚಿತವಾದ ಮಾರಿಫತ್, ಏನೆಲ್ಲವನ್ನು ಮರೆತು ಧ್ಯಾನದಲ್ಲಿ ಮೈಮರೆತು ತನ್ನನ್ನು ತಾನು ಭಗವಂತನಿಗೆ ಅರ್ಪಿಸಿಕೊಳ್ಳುವುದು ಎಂದು ಅರ್ಥ. ಸೂಫಿಗಳು ಶಾಸ್ತ್ರ, ಸಿದ್ಧಾಂತಗಳಿಗಿಂತಲೂ ಹೆಚ್ಚಾಗಿ ಪೂರ್ವದಲ್ಲಿ ವಲಿ, ಪೀರ್‌ಗಳ ಸಾಧನಾ ಕ್ರಮಗಳನ್ನು ಅನುಸರಿಸುತ್ತಾರೆ. ಸೂಫಿಗಳ ವಿಚಾರದಲ್ಲಿ ಭಾಷೆ ಮೊದಲು, ಆಚರಣೆಗಳ ಫಲಿತಾಂಶ ಬಳಿಕ ಸಿದ್ಧಾಂತ ಶಾಸ್ತ್ರಗಳೆಲ್ಲವೂ, ಸೂಫಿ ಸಂತರು ತುಳಿದು ಗಟ್ಟಿಗೊಳಿದ ಮಾರ್ಗವೇ ಅವರಿಗೆ ತೆರದ ಗ್ರಂಥ. ಹಲವಾರು ಸೂಫಿಗಳು, ಸೂಫಿ ಪರಂಪರೆ, ಪಂಥಗಳ ಪೈಕಿ ಶರಣರ ಷಟ್‌ಸ್ಥಲ ಮಾರ್ಗಕ್ಕೆ ತೀರ ಹತ್ತಿರವಾಗಿಯೂ, ಆಧ್ಯಾತ್ಮ ಅನುಸಂಧಾನ ಮಾರ್ಗದಲ್ಲಿಯೂ ಚಿಂತಿಸುವ ಪ್ರಸಿದ್ಧ ಸೂಫಿಅಲ್‌ಜಿಲಿ ಅವರು ಗುರತಿಸುವ ಏಳು ಮಜಲುಗಳು ಗಮನ ಸೆಳೆಯುತ್ತವೆ.

1. ಇಸ್ಲಾಮಿನ, ಕರಾರಿನ ಒಪ್ಪಂದದ ಪ್ರಕಾರ, ಏಕದೇವೋಪಾಸನೆ, ಪ್ರಾರ್ಥನೆ, ಉಪವಾಸ, ಬಡಬಗ್ಗರಿಗೆ ದಾನ, ಹಜ್‌ಯಾತ್ರೆ, ಇವುಗಳ ಪಾಲನೆ ಕಡ್ಡಾಯ.

**2. ಈಮಾನ್:** ಇಸ್ಲಾಂ ಧರ್ಮದಲ್ಲೂ, ಷರಿಯತ್ತಿನಲ್ಲೂ ನಂಬುಗೆ, ಶ್ರದ್ಧೆ ಇರಿಸುವುದು.

**3. ಸಲಾಹ್:** ಷರಿಯತ್ತಿನ ಪಾಲನೆ ಮಾಡುವುದು.

4. **ಎಹೆಸಾನ್:** ದೇವರ ಪ್ರೀತಿಗೋಸ್ಕರ ಮಾನವ ಕಲ್ಯಾಣ ಕಾರ್ಯಗಳನ್ನೆಸಗುವುದು.

**5.ಷಹೀದ್:** ಧರ್ಮಪರಿಪಾಲನೆಗಳಾಗಿ ಸತ್ಯಸ್ಥಾಪನೆಗಾಗಿ ಹುತಾತ್ಮನಾಗುವುದು.

**6.ಸಿದ್ಧಿಖಿಯಾ:** ತನ್ನತಾನು ತಿಳಿದು, ದೇವರನ್ನರಿತವನು, ಸಿದ್ಧಿ ಸ್ಥಿತಿ ತಲುಪುವುದು.

**ಮುಂದುವರೆಯುವುದು...**

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200215

PRGI NO. 120927
(RNINO:KARKAN/2011/48371)